ಸಂಪುಟ : 13 Volume ಸಂಚಿಕೆ : 232 Issue ಪುಟಗಳು : 08 Pages ಶುಕ್ರವಾರ 31 ಅಕ್ಟೋಬರ್ 2025 ₹2 PRGINO.120927(RNINO:KARKAN/2011/48371) BDR/054/2026-2027 www.mallammanudi.in mallammanudi@gmail.com 9448604450

ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಬಳ್ಳಾರಿ | ವಿಜಯನಗರ | ಕೊಪ್ಪಳ & ಬಾಗಲಕೋಟೆ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

ಬೆಳಗು

ಮಾತುಗಳು ಪರಸ್ಪರ ಬೇರ್ಪಡಿಸಲು ಇರುವುದಲ್ಲ , ಪರಸ್ಪರ ಸೇರಿಸಲು ಇರುವುದಾಗಿದೆ ' .

ಮಹಾತ್ಮ ಗಾಂಧೀಜಿ .

# ಮಲ್ಲಮ್ಮ ನುಡಿ

ಕನ್ನಡ ಕಿರಣ

ಸಂಪಾದಕರು: ರಮೇಶ ರೆಡ್ಡಿ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

4 ರಾಜ್ಯಮಟ್ಟದ ಯುವಜನೋತ್ಸವಕ್ಕೆ ಸಿದ್ಧತೆ

2 ಗ್ರಾಮದಲ್ಲಿ ಗ್ಯಾರಂಟಿ ಯೋಜನೆಗಳ ಕ್ರಾಂತಿ

8 ಮೆಣಸಿನಕಾಯಿ ಬೆಳೆ ಸಮ್ಮೇಳನದ ಸಮಾರೋಪ

## ಚಿತ್ತಾಪುರ ಪಥ ಸಂಚಲನ: ಮತ್ತೊಂದು ಶಾಂತಿ ಸಭೆಗೆ ಹೈಕೋರ್ಟ್ ಸೂಚನೆ



ಕಲಬುರಗಿ:ಅ.30: ಜಿಲ್ಲೆಯ ಚಿತ್ತಾಪುರ ಪಟ್ಟಣದಲ್ಲಿ ನವೆಂಬರ್ 2 ರಂದು ಉದ್ದೇಶಿತ ರಾಷ್ಟ್ರೀಯ ಸ್ವಯಂಸೇವಕ ಸಂಘ(ಆರ್‌ಎಸ್‌ಎಸ್)ದ ರೂಟ್ ಮಾರ್ಚ್‌ನ ಆಯೋಜಕರೊಂದಿಗೆ ಮತ್ತೊಂದು ಶಾಂತಿ ಸಭೆ ನಡೆಸುವಂತೆ ಕರ್ನಾಟಕ ಹೈಕೋರ್ಟ್ ಗುರುವಾರ ಸೂಚಿಸಿದ್ದು, ಆರ್‌ಎಸ್‌ಎಸ್ ಗೆ ತೀವ್ರ ಹಿನ್ನಡೆಯಾಗಿದೆ. 2ನೇ ಪುಟನೋಡಿ

## 1,545 ಕೋಟಿ ನೆರೆ ಪರಿಹಾರ ಕೇಂದ್ರಕ್ಕೆ ಮನವಿ


ಮಲ್ಲಮ್ಮನುಡಿ ವಾರ್ತೆ

ಬೆಂಗಳೂರು:ಅ.30:ಮುಂಗಾರುಮಳೆ ಹಾನಿಗೆಸಂಬಂಧಿಸಿದಂತೆಪರಿಹಾರಕೋರಿ ಕೇಂದ್ರಕ್ಕೆ ಮನವಿ ಸಲ್ಲಿಸಲು ಕ್ಯಾಬಿನೆಟ್ ತೀರ್ಮಾನಿಸಿದೆ.

ಮೂಲಭೂತ ಸೌಕರ್ಯಗಳ ಹಾನಿಗೆ ಎನ್‌ಡಿಆರ್‌ಎಫ್ ಅಡಿ 1,545 ಕೋಟಿ ರೂ. ಆರ್ಥಿಕ ಸಹಾಯ ಕೋರಿ ಕೇಂದ್ರ ಸರ್ಕಾರಕ್ಕೆಮನವಿಸಲ್ಲಿಸಲುಸರ್ಕಾರವರದಿ ಸಿದ್ಧಪಡಿಸಿದೆ. ಆದರೆ ಬೆಳೆ ನಷ್ಟದ ಬಗ್ಗೆ ಪ್ರತ್ಯೇಕವಾಗಿ ಮನವಿ ಸಲ್ಲಿಸಿ ಪರಿಹಾರ ಕೇಳುತ್ತಿದ್ದೇವೆ ಅಂತಾ ಕಾನೂನು ಸಚಿವ ಹೆಚ್.ಕೆ.ಪಾಟೀಲ್ ಸ್ಪಷ್ಟಪಡಿಸಿದ್ದಾರೆ.

ಇನ್ನು ಒಳ ಮೀಸಲಾತಿ ವಿಚಾರವಾಗಿ ಶೀಘ್ರದಲ್ಲೇಮಸೂದೆಗೆಕ್ರಮವಹಿಸುತ್ತೇವೆ. ಮುಂದಿನ ಕ್ಯಾಬಿನೆಟ್‌ನಲ್ಲಿ ತೀರ್ಮಾನ ಮಾಡುತ್ತೇವೆ ಎಂದು ಹೇಳಿದ್ದಾರೆ.

## ಬಿಜೆಪಿಯವರಿಗೆ ದುರ್ಬುದ್ಧಿ ರಾಮಲಿಂಗಾರೆಡ್ಡಿ



ಬೆಂಗಳೂರು:ಅ.30: ಬಿಜೆಪಿ ಅವರಿಗೆ ದುರ್ಬುದ್ಧಿ ಇದೆ. ವಯನಾಡ್ ಪ್ರಿಯಾಂಕಾ ಗಾಂಧಿ ಅವರಕ್ಷೇತ್ರ ಅಂತಸಹಿಸೋಕೆ ಆಗದೇ ಏನೇನೋ ಆರೋಪ ಮಾಡ್ತಿದ್ದಾರೆ ಎಂದು ಸಚಿವ ರಾಮಲಿಂಗಾರೆಡ್ಡಿ ಕಿಡಿಕಾರಿದ್ದಾರೆ.

ಕರ್ನಾಟಕರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮವು ವಯನಾಡ್ ಪ್ರವಾಸೋದ್ಯಮದ ಪರವಾಗಿ ಜಾಹೀರಾತು ನೀಡಿರುವ ವಿಚಾರಕ್ಕೆ ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದರು. ವಯನಾಡ್ ನಮ್ಮ ಪಕ್ಕದ ಕೇರಳ ರಾಜ್ಯದ ಒಂದು ಜಿಲ್ಲೆಯಾಗಿದೆ. ಅಲ್ಲಿಗೆ ಟೂರಿಸಂಗೆ ಬನ್ನಿ ಅಂತ ಕೆಎಸ್‌ಟಿಡಿಸಿ ಹೇಳಿದೆ ಅಂತ ಬಿಜೆಪಿ ಟೀಕೆ ಮಾಡಿದ್ದಾರೆ. ವಯನಾಡ್ ಪ್ರಿಯಾಂಕಾ ಗಾಂಧಿ ಪ್ರತಿನಿಧಿಸುವ ಕ್ಷೇತ್ರ. ಅದನ್ನ ಸಹಿಸೋಕೆ ಆಗದೇ ಬಿಜೆಪಿಯವರು ಹೀಗೆ ಮಾತನಾಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದ್ದಾರೆ. ನಮ್ಮ ದೇಶದಲ್ಲಿ ಬೇರೆ ರಾಜ್ಯದ ಟೂರಿಸಂಗೆ ಅವಕಾಶ ಇದೆ. ನಮ್ಮ ಇಲಾಖೆಯಿಂದ ಅಯೋಧ್ಯೆ, ಗಯಾ, ವಾರಣಾಸಿ, ತಮಿಳುನಾಡು, ಚಾರ್ ದಾಮ್, ಮಾನಸ ಸರೋವರಕ್ಕೂ ಕಳುಹಿಸುತ್ತೇವೆ. ಕೇವಲ ದೇವಸ್ಥಾನ ನೋಡೋದು ಅಲ್ಲ ಟೂರಿಸಂಗೂ ನಾವು 2ನೇ ಪುಟನೋಡಿ

## ರಸ್ತೆ ಬದಿಗೆ ಉರುಳಿದ ಬಸ್



ಮಲ್ಲಮ್ಮನುಡಿ ವಾರ್ತೆ

ಭಾಲ್ಕಿ:ಅ.30: ತಾಲೂಕಿನ ಕೋನಮೇಳಕುಂದಾ ಗ್ರಾಮದ ಸಮೀಪ ಕಲ್ಯಾಣ ಕರ್ನಾಟಕ ರಾಜ್ಯ ಸಾರಿಗೆ ಸಂಸ್ಥೆಯ ಬಸ್ ರಸ್ತೆ ಬದಿಯ ತಗ್ಗಿಗೆ ಉರುಳಿದ್ದು ಪ್ರಯಾಣಿಕರುಪ್ರಾಣಾಪಾಯದಿಂದ ಪಾರಾಗಿದ್ದಾರೆ.ಬೀದರ್‌ಬಸ್‌ಘಟಕಕ್ಕೆ ಸೇರಿದ ಕೆ.ಎ-38 ಎಫ್-1229 ಸಂಖ್ಯೆಯ ಬಸ್ ಮಹಾರಾಷ್ಟ್ರದ ಉದಗೀರ್ ಕಡೆಯಿಂದ ಬೀದರ್ ಕಡೆಗೆ ಹೊರಟಿತ್ತು.

ಮಾರ್ಗಮಧ್ಯದಕೋನಮೇಳಕುಂದಾ ಸಮೀಪವೇಗವಾಗಿಬರುತ್ತಿದ್ದಕಾರ್ ತಪ್ಪಿಸಲು ಹೋಗಿ ಬಸ್ ಚಾಲಕನ ನಿಯಂತ್ರಣತಪ್ಪಿ ರಸ್ತೆ ಪಕ್ಕದತಗ್ಗಿಗೆ ಬಸ್ ಉರುಳಿದೆ.

2ನೇ ಪುಟನೋಡಿ

# 70ನೇ ಕನ್ನಡ ರಾಜ್ಯೋತ್ಸವ



## ನಟ ಪ್ರಕಾಶ್ ರಾಜ್ ಸೇರಿ| ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ 70 ಮಹನೀಯರು ಪ್ರಶಸ್ತಿಗೆ ಭಾಜನ



ಮಲ್ಲಮ್ಮನುಡಿ ವಾರ್ತೆ

ಬೆಂಗಳೂರು, ಅ 30:2025ನೇ ಸಾಲಿನಕರ್ನಾಟಕರಾಜ್ಯೋತ್ಸವ ಪ್ರಶಸ್ತಿಯನ್ನುಘೋಷಿಸಲಾಗಿದ್ದು, ಚಿತ್ರ ನಟ ಪ್ರಕಾಶ್ ರಾಜ್ ಸೇರಿ ವಿವಿಧಕ್ಷೇತ್ರದಲ್ಲಿಸಾಧನೆಮಾಡಿದ70 ಮಂದಿಯನ್ನುಆಯ್ಕೆಮಾಡಲಾಗಿದೆ.


ಇದೇಮೊದಲಬಾರಿಗೆಯಾವುದೇ ಅರ್ಜಿ ಆಹ್ವಾನಿಸದೆ ಈ ಆಯ್ಕೆ ನಡೆದಿದೆ.ಜಿಲ್ಲಾವಾರು,ಸಾಮಾಜಿಕ ಪರಿಪಾಲನೆ,ಹಾಗೂಆಯ್ಕೆಸಮಿತಿ ಶಿಫಾರಸ್ಸು ಗಳಆಧಾರದಮೇಲೆ ಆಯ್ಕೆಪ್ರಕ್ರಿಯೆನಡೆದಿದೆ.ಈಬಾರಿ 12ಮಹಿಳೆಯರುಹಾಗೂಸಮಗಾರ ಹರಳಯ್ಯಸಮುದಾಯದಇಬ್ಬರು ಪ್ರತಿಭೆಗಳುಪ್ರಶಸ್ತಿಗೆಭಾಜನರಾಗಿದ್ದಾರೆ.

ಆಯ್ಕೆಸಲಹಾಸಮಿತಿಸದಸ್ಯರು ಶಿಫಾರಸ್ಸು ಮಾಡಿದ್ದವರನ್ನುಬಹುತೇಕ ಆಯ್ಕೆಮಾಡಲಾಗಿದ್ದು,ನಾಲ್ಕೈದು ಬಾರಿ ಸಭೆ ನಡೆಸಿದ ಸದಸ್ಯರು ಅರ್ಹರನ್ನು ಆಯ್ಕೆ ಮಾಡಲು ಸಹಕರಿಸಿದ್ದಕ್ಕೆಧನ್ಯವಾದಗಳನ್ನುಈ ಮೂಲಕತಿಳಿಸುತ್ತೇನೆಎಂದುಸಚಿವ ಶಿವರಾಜ್ ತಂಗಡಗಿ ತಿಳಿಸಿದ್ದಾರೆ.

ಇತಿಹಾಸದಲ್ಲೇ ಮೊದಲ ಬಾರಿಗೆ ಸಮಗಾರ ಹರಳಯ್ಯ ಸಮುದಾಯಕ್ಕೆ ಸೇರಿದ ಇಬ್ಬರು ಪ್ರತಿಭೆಗಳನ್ನುಗುರುತಿಸಿಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಈ ಬಾರಿ ಯಾವುದೇಸಂಘ-ಸಂಸ್ಥೆಗಳಿಗೆಪ್ರಶಸ್ತಿ ನೀಡಿಲ್ಲ.12ಮಂದಿಮಹಿಳೆಯರಿಗೆ ಈಬಾರಿಪ್ರಶಸ್ತಿಆಯ್ಕೆಮಾಡಲಾಗಿದೆ. ಈಪೈಕಿಕೆಲವರುಸ್ವಯಂಮನವಿ ನೀಡಿದ್ದರು.ಅಂತಹವರುಪ್ರಶಸ್ತಿಗೆ ಅರ್ಹರಿದ್ದಕಾರಣಪ್ರಶಸ್ತಿಗೆಆಯ್ಕೆ ಮಾಡಲಾಗಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.ಸಾಹಿತ್ಯ ಕ್ಷೇತ್ರದಿಂದ ಶಿವಮೊಗ್ಗದ ಪ್ರೊ. ರಾಜೇಂದ್ರ ಚೆನ್ನಿ, ತುಮಕೂರಿನ ತುಂಬಾಡಿರಾಮಯ್ಯ ಮತ್ತು ಡಾ. ಎಚ್.ಎಲ್.ಪುಷ್ಪ,ಚಿಕ್ಕಬಳ್ಳಾಪುರದ ಪ್ರೊ.. ಆರ್. ಸುನಂದಮ್ಮ, ಚಿಕ್ಕಮಗಳೂರದರಹಮತ್‌ತರೀಕೆರೆ ಮತ್ತುವಿಜಯಪುರದಹ.ಮ.ಪೂಜಾರ ಅವರುಪ್ರಶಸ್ತಿಗೆಭಾಜನರಾಗಿದ್ದಾರೆ. ಜಾನಪದ ಕ್ಷೇತ್ರದಿಂದ ಕೊಪ್ಪಳದ ಬಸಪ್ಪಭರಮಪ್ಪಚೌಡ್ಕಿ,ಶಿವಮೊಗ್ಗದ ಬಿ. ಟಾಕಪ್ಪಕಣ್ಣೂರು,ಬೆಳಗಾವಿಯ ಸನ್ನಿಂಗಪ್ಪ ಸತ್ತೆಪ್ಪ ಮುಶೆನ್ನಗೊಳ, ಚಿತ್ರದುರ್ಗದ ಹನುಮಂತಪ್ಪ ಮಾರಪ್ಪ, ಚೀಳಂಗಿ, ಕೋಲಾರದ, ಎಂ. ತೋಪಣ್ಣ, ವಿಜಯಪುರದ ಸೋಮಣ್ಣದುಂಡಪ್ಪಧನಗೊಂಡ, 2ನೇ ಪುಟನೋಡಿ

## 13 ರಿಂದ 15 ವರ್ಷದೊಳಗಿನ ಸರ್ಕಾರಿ ಶಾಲಾ ಬಾಲಕಿಯರಿಗೆ ಎಚ್‌ಪಿವಿ ಲಸಿಕೆ ಅಭಿಯಾನ

ಬೆಂಗಳೂರು:ಅ.30:ರಾಜ್ಯದಮಹಿಳೆಯರಲ್ಲಿಇತ್ತೀಚೆಗೆ ಹೆಚ್ಚುತ್ತಿರುವ ಗರ್ಭಕಂಠದ ಕ್ಯಾನ್ಸರ್ ನ್ನು ಕಡಿಮೆ ಮಾಡುವಉದ್ದೇಶದಿಂದ,ರಾಜೀವ್‌ಗಾಂಧಿಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯ ಸರ್ಕಾರಿ ಶಾಲೆಗಳಲ್ಲಿ 13 ರಿಂದ15 ವರ್ಷದೊಳಗಿನ ಬಾಲಕಿಯರಿಗೆಹ್ಯೂಮನ್ ಪ್ಯಾಪಿಲೋಮವೈರಸ್ ಲಸಿಕೆಗಳನ್ನು ಒದಗಿಸಲು ಖಾಸಗಿ ಹೂಡಿಕೆದಾರರು ಮತ್ತುವೈದ್ಯರೊಂದಿಗೆಚರ್ಚೆ ನಡೆಸುತ್ತಿದೆ.





ರಾಜೀವ್‌ಗಾಂಧಿಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯ ಅಧಿಕಾರಿಯೊಬ್ಬರುಈಬಗ್ಗೆ ಮಾಹಿತಿನೀಡಿ,ಈಲಸಿಕೆಗಳ ಮಿತಿಯಬೆಲೆನಿರ್ಧರಿಸಲು, ಲಸಿಕೆಯ ಬ್ರ್ಯಾಂಡ್ ಮತ್ತು ಅದರಲ್ಲಿರುವ ಅಂಶಗಳೇನೇನು ಎಂದು ನಿರ್ಧರಿಸಲು ಒಂದುವಾರತೆಗೆದುಕೊಳ್ಳಬಹುದು.ವಿವಿಧಬ್ರಾಂಡ್‌ಗಳ ಲಸಿಕೆಗಳು 2,000 ರಿಂದ 5,000 ರೂಪಾಯಿಗಳವರೆಗೆ ವಿಭಿನ್ನ ಬೆಲೆ ಶ್ರೇಣಿಗಳನ್ನು ಹೊಂದಿವೆ. ಹೆಣ್ಣುಮಕ್ಕಳಿಗೆ ಲಸಿಕೆನೀಡುವಮೊದಲುತಾಯಂದಿರನ್ನುಪರೀಕ್ಷಿಸಲು ವಿವಿಧಸ್ಕ್ರೀನಿಂಗ್ ಕೇಂದ್ರಗಳನ್ನು ಸ್ಥಾಪಿಸಲಾಗುವುದು ಎಂದು ಹೇಳಿದರು.

### ಸುತ್ತೋಲೆ ಬಿಡುಗಡೆ

ಗರ್ಭಕಂಠದಕ್ಯಾನ್ಸರ್‌ತಡೆಗಟ್ಟಲುಲಸಿಕೆಹಾಕುವಕುರಿತು ರಾಜೀವ್‌ಗಾಂಧಿಆರೋಗ್ಯ ವಿಜ್ಞಾನವಿಶ್ವವಿದ್ಯಾಲಯನಿಂದ ಒಂದುವಾರದಲ್ಲಿಸುತ್ತೋಲೆ ಬಿಡುಗಡೆಯಾಗಲಿದೆ. ಈ ರೋಗದಬಗ್ಗೆಅಭಿಯಾನಗಳು, ಶಾಲೆಗಳಲ್ಲಿಸಿಬ್ಬಂದಿಗೆತರಬೇತಿ ನೀಡುವುದುಮತ್ತುಜಾಗೃತಿ ಮೂಡಿಸುವುದನ್ನುರಾಜ್ಯಾದ್ಯಂತ ವೈದ್ಯರು ಮಾಡುತ್ತಾರೆ. ಲಸಿಕೆ ಹಾಕುವ ಮೊದಲು ವಿದ್ಯಾರ್ಥಿಗಳನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಬೇಕಾಗುತ್ತದೆ ಎಂದರು.

ಇದುಒಳ್ಳೆಯಉಪಕ್ರಮಆದರೆಇದರಅನುಷ್ಠಾನವನ್ನು ತ್ವರಿತಗೊಳಿಸಬೇಕು. ಮಹಿಳೆಯರಲ್ಲಿ ಗರ್ಭಕಂಠದ ಕ್ಯಾನ್ಸರ್‌ಹೆಚ್ಚಾಗಿದ್ದು,ಶೇಕಡಾ25ರಷ್ಟು ಭಾರತದಲ್ಲಿದೆ. 2ನೇ ಪುಟನೋಡಿ

## ಮುಂದಿನ ಸಿಜೆಐ ಆಗಿ ನ್ಯಾ. ಸೂರ್ಯಕಾಂತ್ ನೇಮಕ



ಮಲ್ಲಮ್ಮನುಡಿವಾರ್ತೆ

ನವದೆಹಲಿ:ಅ.30: ಸುಪ್ರೀಂಕೋರ್ಟ್‌ನ 53ನೇ ಮುಖ್ಯ ನ್ಯಾಯಮೂರ್ತಿಯಾಗಿ ಸೂರ್ಯಕಾಂತ್‌ನೇಮಕಗೊಂಡಿದ್ದು, ನವೆಂಬರ್ 24ರಂದು ಅಧಿಕಾರ ವಹಿಸಿಕೊಳ್ಳಲಿದ್ದಾರೆ.

ಸಿಜೆಐ ಭೂಷಣ್ ಆರ್. ಗವಾಯಿ ಅವರ ಅಧಿಕಾರಾವಧಿ ನವೆಂಬರ್ 23ರಂದುಅಂತ್ಯಗೊಳ್ಳಲಿದೆ.ಹೀಗಾಗಿ, ಸಿಜೆಹುದ್ದೆಗೆಸೂರ್ಯಕಾಂತ್‌ಹೆಸರನ್ನು ಗವಾಯಿಅವರುಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಿದ್ದರು. ಇದೀಗ ಕೇಂದ್ರ ಕಾನೂನು ಸಚಿವಾಲಯ ಬಿ.ಆರ್ ಗವಾಯಿ ಶಿಫಾರಸನ್ನು ಪರಿಗಣಿಸಿದೆ. ನ. 24ರಂದು ನ್ಯಾ. 2ನೇ ಪುಟನೋಡಿ


## ರಾಜ್ಯದ 1310 ಗ್ರಾಮ ಪಂಚಾಯತಿಗಳ ಅಭಿವೃದ್ಧಿಗೆ 'ಕಾಯಕ ಗ್ರಾಮ'



ಮಲ್ಲಮ್ಮನುಡಿ ವಾರ್ತೆ

ಕಲಬುರಗಿ,ಅ.30-ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಇ-ಆಡಳಿತವಿಭಾಗವು ಪಂಚತಂತ್ರ 2.0 ತಂತ್ರಾಂಶದಲ್ಲಿ ಗ್ರಾಮಪಂಚಾಯತ್‌ಕಾರ್ಯಕ್ಷಮತೆ ಶ್ರೇಯಾಂಕವರದಿಯಲ್ಲಿಗುರುತಿಸುವಂತೆ ಕೊನೆಯಸ್ಥಾನಗಳಲ್ಲಿರುವಗ್ರಾಮ ಪಂಚಾಯತಿಗಳನ್ನುವೈಜ್ಞಾನಿಕವಾಗಿ ಆಯ್ಕೆ ಮಾಡಿಕೊಂಡು ಅಂತಹ ಗ್ರಾಮಪಂಚಾಯತಿಗಳಸಮರ್ಪಕ ಹಾಗೂನಿಗದಿತವಾಗಿಪರಿವೀಕ್ಷಣೆ ಮಾಡುವುದು, ಮಾರ್ಗದರ್ಶನ ನೀಡುವುದಲ್ಲದೆವಿವಿಧಅಭಿವೃದ್ಧಿ ಇಲಾಖೆಗಳಸಮನ್ವಯಕಾರ್ಯಕೈಗೊಂಡು ಗ್ರಾಮಪಂಚಾಯತಿಗಳಸಮಗ್ರ ಅಭಿವೃದ್ಧಿಯನ್ನು ಸಾಧಿಸುವ ಜವಾಬ್ದಾರಿಯನ್ನುತಾಲ್ಲೂಕು, ಜಿಲ್ಲೆ ಮತ್ತು ರಾಜ್ಯ ಮಟ್ಟದಲ್ಲಿ ಅಧಿಕಾರಿಗಳು ವಹಿಸಿಕೊಳ್ಳುವ ಮೂಲಕ ಗ್ರಾಮಗಳ ಸಮಗ್ರ 2ನೇ ಪುಟನೋಡಿ

## ಸಚಿವ ಸಂಪುಟದ ಮೇಲೆ ನಿಯಂತ್ರಣವಿಲ್ಲ: ಬೊಮ್ಮಾಯಿ



ಗದಗ:ಅ.30: ಮುಖ್ಯಮಂತ್ರಿ ಸಿದ್ದರಾಮಯ್ಯ ಸಚಿವ ಸಂಪುಟ ಸದಸ್ಯರು ಹಾಗೂ ಅಧಿಕಾರಿಗಳಮೇಲೆ ತಮ್ಮ ನಿಯಂತ್ರಣ ಕಳೆದುಕೊಂಡಿದ್ದಾರೆ. ಎರಡೂವರೆವರ್ಷದಲ್ಲಿ ಒಂದೂ ಅಭಿವೃದ್ಧಿ ಕೆಲಸವಾಗಿಲ್ಲ.ಯಾವಪುರುಷಾರ್ಥಕ್ಕೆ ಈ ಎರಡೂವರೆ ವರ್ಷ ಅವಧಿ ಮುಗಿಸಿದರು ಎಂಬುದು ಜನತೆಗೆ ಹೇಳಬೇಕು ಎಂದರು.

ಕಾಂಗ್ರೆಸ್ ಹೈಕಮಾಂಡ್ ಎಲ್ಲಾ ಪಕ್ಷದಸದಸ್ಯರಿಗೆಸ್ಪಷ್ಟಸೂಚನೆಗಳನ್ನು ನೀಡಿದ್ದು,ನಾಯಕತ್ವಬದಲಾವಣೆಯ ಬಗ್ಗೆ ಮಾತನಾಡದಂತೆ ಕೇಳಿದೆ. ಆದರೆ ಸಚಿವರು ಮತ್ತು ಇತರ ನಾಯಕರು ಮೌನವಾಗಿದ್ದಾರೆ ಕೆಲವರು ಈ ವಿಷಯದ ಬಗ್ಗೆ ಮಾತನಾಡುತ್ತಲೇ ಇದ್ದಾರೆ ಎಂದು ಅವರು ಹೇಳಿದರು.

ನವೆಂಬರ್‌ಕ್ರಾಂತಿಭ್ರಾಂತಿ ನೋಡಿದರೆ ಸರ್ಕಾರದ ಮೇಲೆಕರ್ನಾಟಕದಜನತೆಗೆ ಭ್ರಾಂತಿಯಾಗುತ್ತಿದೆ. ಕಾಂಗ್ರೆಸ್ಸಿನವರುಆಡಳಿತವನ್ನೇ ಮರೆತುಬಿಟ್ಟಿದ್ದಾರೆ. ಅಭಿವೃದ್ಧಿಯಂತೂಮರೀಚಿಕೆಯಾಗಿದೆ. ಹಣಕಾಸು ವ್ಯವಸ್ಥೆ ಸರಿ ಇಲ್ಲ.

ಹೀಗಾಗಿಡ್ರಾಮಾಮಾಡಿಕೊಂಡು ಹೊರಟಿದ್ದಾರೆ.ಸಿಎಂಸಿದ್ದರಾಮಯ್ಯ ಒಂದು ಹೇಳಿದರೆ, ಡಿಸಿಎಂ ಡಿ.ಕೆ. ಶಿವಕುಮಾರ್ ಅದಕ್ಕೆತದ್ವಿರುದ್ಧವಾಗಿ ಹೇಳುತ್ತಾರೆ. ಮಂತ್ರಿಗಳು ಇನ್ನೊಂದು ರೀತಿಯ ಹೇಳಿಕೆ ನೀಡುತ್ತಾರೆ ಎಂದರು.ಬಿಹಾರ ಚುನಾವಣೆಗೆ ರಾಜ್ಯದಿಂದ ಹಣ

## 15 ಕೆಜಿ 200 ಗ್ರಾಂ ಗಾಂಜಾ ವಶ





ಮಲ್ಲಮ್ಮನುಡಿ ವಾರ್ತೆ

ಬೀದರ, ಅ.30: ಬೀದರ್ ರೈಲ್ವೆ ಪೊಲೀಸ್‌ಠಾಣೆಯಸರಹದಿನಲ್ಲಿಬರುವ ಬೀದರ್‌ರೈಲ್ವೆನಿಲ್ದಾಣದಲ್ಲಿಂದುರೈಲು ಗಾಡಿಸಂಖ್ಯೆ17647ಹೈದರಾಬಾದ್ -ಪೂರ್ಣಎಕ್ಸ್‌ಪ್ರೆಸ್‌ರೈಲುಗಾಡಿಯು ಬೀದರ್‌ರೈಲ್ವೆನಿಲ್ದಾಣದಲ್ಲಿಬಂದಾಗ ರೈಲು ಗಾಡಿಯ ಹಿಂದಿನ ಜನರಲ್ ಬೋಗಿಗಳನ್ನುಚಕ್ಕಮಾಡುವಾಗಪಂಚರ ಸಮಕ್ಷಮದಾಳಿಮಾಡಿ15ಕೆಜಿ200 ಗ್ರಾಂ ಗಾಂಜಾ ಅಂ.ಕಿ. 1,52,000 ರೂ.ವನ್ನುವಶಪಡಿಸಿಕೊಳ್ಳಲಾಗಿದೆ. ಈ ಬಗ್ಗೆ ಬೀದರ್ ರೈಲ್ವೆ ಪೊಲೀಸ್ ಠಾಣೆಗುನ್ನೆಸಂಖ್ಯೆ30/2025ಕಲಂ 20 ()(ಃ) ಎನ್. ಡಿ. ಪಿ.ಎಸ್. ಪ್ರಕರಣದಾಖಲುಮಾಡಿಕೊಂಡು ಆರೋಪಿತರ ಪತ್ತೆ ಕುರಿತು ತನಿಖೆ ಕೈಗೊಳ್ಳಲಾಗಿರುತ್ತದೆಂದು ಬೀದರ ರೈಲ್ವೆಪೊಲೀಸ್‌ಠಾಣೆಯಪಿ.ಎಸ್.ಐ ಅವರುಪ್ರಕಟಣೆಯಲ್ಲಿತಿಳಿಸಿದ್ದಾರೆ.

ಯತೀಶ್ ಎನ್.ಐಪಿಎಸ್. ಎಸ್ಪಿ ಸಾಹೇಬರುರೈಲ್ವೇಸ್‌ಬೆಂಗಳೂರು, ಸೋಮಶೇಖರ್‌ಜುಟಲ್‌ಡಿವೈಎಸ್ಪಿ ರೈಲ್ವೆಉಪವಿಭಾಗಹುಬ್ಬಳ್ಳಿಅವರುಗಳ ಮಾರ್ಗದರ್ಶನದಲ್ಲಿ ಮತ್ತು ಬಸವರಾಜ್‌ತೇಲಿ,ಸಿಪಿಐರೈಲ್ವೆವೃತ್ತ ರಾಯಚೂರ್ ಅವರ ನೇತೃತ್ವದಲ್ಲಿ ಬೀದರ ರೈಲ್ವೆ ಪೊಲೀಸ್ ಠಾಣೆಯ ಮಹಮ್ಮದ್‌ಪಾಷಾ ಪಿ.ಎಸ್.ಐ, ಅಧಿಕಾರಿಮತ್ತುಸಿಬ್ಬಂದಿಯೊಂದಿಗೆ ಈ ದಾಳಿ ನಡೆಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

## ಅಭಿಷೇಕ್ ನಾಯ್ಯರ್ :ಕೊಲ್ಕತ್ತಾ ನೈಟ್ ರೈಡರ್ಸ್ 'ಮುಖ್ಯ ತರಬೇತು'ದಾರರಾಗಿ ನೇಮಕ

# ಒಂದನೇ ಪುಟದಿಂದ

## ಬಿಜೆಪಿಯವರಿಗೆ ದುರ್ಬುದ್ಧಿ

ಅವಕಾಶಕೊಟ್ಟಿದ್ದೇವೆ. ಇದು ಬಿಜೆಪಿ ಅವರಿಗೆ ಗೊತ್ತಿಲ್ವಾ? ಬಿಜೆಪಿಯವರು ತಲೆಬುಡ ಗೊತ್ತಿಲ್ಲದೇ ಮಾತಾಡ್ತಾರೆ ಎಂದು ಗುಡುಗಿದ್ದಾರೆ.

ಬಿಜೆಪಿ ಅವರು ವಾಟ್ಸಾಪ್ ಯೂನಿವರ್ಸಿಟಿಯಿಂದ ಇಂತಹ ಸುದ್ದಿ ಹರಡಿಸ್ತಾರೆ. ಆರೋಪ ಮಾಡದೇ ಬಿಜೆಪಿ ಅವರಿಗೆ ನಿದ್ರೆ ಬರಲ್ಲ, ಊಟ ಸೇರಲ್ಲ. ಬಿಜೆಪಿ ಅವರಿಗೆ ದುರ್ಬುದ್ಧಿ ಇದೆ. ಇದನ್ನ ಬಿಡಬೇಕು ಅಂತ ಕಿಡಿಕಾರಿದ್ದಾರೆ.

## ಹೈಕೋರ್ಟ್ ಸೂಚನೆ

ನವೆಂಬರ್ 2ರಂದು ಚಿತ್ತಾಪುರದಲ್ಲಿ ಆರ್ ಎಸ್‌ಎಸ್ ಪಥ ಸಂಚಲನಕ್ಕೆ ಅನುಮತಿ ಕೋರಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಕಲಬುರಗಿ ಹೈಕೋರ್ಟ್ ವಿಭಾಗೀಯ ಪೀಠ, ಆ ಕುರಿತು ಚರ್ಚಿಸಲು ನವೆಂಬರ್ 5 ರಂದು ಅಡ್ವೊಕೇಟ್ ಜನರಲ್ ಕಚೇರಿಯಲ್ಲಿ ಜಿಲ್ಲಾ ಅಧಿಕಾರಿಗಳನ್ನು ಭೇಟಿ ಮಾಡುವಂತೆ ಆದೇಶಿಸಿದೆ. ನವೆಂಬರ್ 5 ರಂದು ಮಧ್ಯಾಹ್ನ 3 ಗಂಟೆಗೆ ಬೆಂಗಳೂರಿನ ಅಡ್ವೊಕೇಟ್ ಜನರಲ್ ಕಚೇರಿಯಲ್ಲಿಯೇ ಶಾಂತಿ ಸಭೆ ನಡೆಸಲು ಸೂಚಿಸಿದ ಹೈಕೋರ್ಟ್, ವಿಚಾರಣೆಯನ್ನು ನವೆಂಬರ್ 7ಕ್ಕೆ ಮುಂದೂಡಿದೆ. ಕಾರ್ಯಕ್ರಮದ ಲಾಜಿಸ್ಟಿಕ್ಸ್ ಮತ್ತು ಅನುಮತಿಗಳ ಕುರಿತ ಚರ್ಚೆಯಲ್ಲಿ ಭಾಗವಹಿಸುವಂತೆ ಅರ್ಜಿದಾರರನ್ನು ಪ್ರತಿನಿಧಿಸುವ ಅಡ್ವೊಕೇಟ್ ಜನರಲ್ ಶಶಿ ಕಿರಣ್ ಶೆಟ್ಟಿ ಮತ್ತು ಹಿರಿಯ ವಕೀಲ ಅರುಣಾ ಶ್ಯಾಮ್ ಅವರಿಗೆ ನ್ಯಾಯಾಲಯ ಸೂಚಿಸಿದೆ. ಅಲ್ಲದೆ ಈ ಸಭೆಯು ಒಂದು ನಿರ್ಣಯಕ್ಕೆ ದಾರಿ ಮಾಡಿಕೊಡುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದೆ. ಅಕ್ಟೋಬರ್ 24 ರಂದು ಸಹ ಹೈಕೋರ್ಟ್ ಇದೇ ರೀತಿಯ ಶಾಂತಿ ಸಭೆಗೆ ನಿರ್ದೇಶನ ನೀಡಿತ್ತು. ಇದೀಗ ಮತ್ತೊಮ್ಮೆ ಶಾಂತಿ ಸಭೆ ನಡೆಸುವಂತೆ ಸೂಚಿಸಿದೆ. ಇದರೊಂದಿಗೆ ಚಿತ್ತಾಪುರದಲ್ಲಿ ನವೆಂಬರ್ 2ಕ್ಕೆ ನಡೆಯಬೇಕಿದ್ದ ಆರ್?ಎಸ್?ಎಸ್? ಪಥಸಂಚಲನಕ್ಕೆ ಬ್ರೇಕ್ ಬಿದ್ದಿದ್ದು, ನವೆಂಬರ್ 5ರ ಶಾಂತಿ ಸಭೆ ಆಧರಿಸಿ ಕೋರ್ಟ್? ತನ್ನ ತೀರ್ಪು ನೀಡಲಿದೆ.

## ರಸ್ತೆ ಬದಿಗೆ ಉರುಳಿದ ಬಸ್

ಬಸ್‌ನಲ್ಲಿ ಸಂಚರಿಸುತ್ತಿದ್ದ 43 ಪ್ರಯಾಣಿಕರು, ಚಾಲಕ, ನಿರ್ವಾಹಕ ಸೇರಿ ಎಲ್ಲರೂ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ವಿಷಯ ತಿಳಿದ ಭಾಲ್ಕಿ ಬಸ್ ಘಟಕದ ವ್ಯವಸ್ಥಾಪಕ ಭದ್ರಪ್ಪ ಹುಡಗೆ ಶುಕ್ರವಾರ ಬೆಳಿಗ್ಗೆ 8 ಗಂಟೆ ಸುಮಾರಿಗೆ ಘಟನಾ ಸ್ಥಳಕ್ಕೆ ಆಗಮಿಸಿ ಪರಿಶೀಲಿಸಿದರು. ನಂತರ ಕ್ರೇನ್ ಮತ್ತು ಜೆಸಿಬಿ ಸಹಾಯದಿಂದ ರಸ್ತೆ ಪಕ್ಕದ ತಗ್ಗಿನಲ್ಲಿ ಉರುಳಿದ ಬಸ್‌ನ್ನು ಹೊರ ತೆಗೆದರು. ಬಸ್‌ನ ಎದುರಿನ ಗ್ಲಾಸ್ ಮತ್ತು ಎರಡೂ ರು ಕಿಟಕಿಯ ಗಾಜು ಪುಡಿಯಾಗಿವೆ.

## ಅಭಿವೃದ್ಧಿಗೆ 'ಕಾಯಕ ಗ್ರಾಮ'

ಪ್ರಗತಿಯ ಆಶಯವನ್ನು ಹೊಂದಿದ 'ಕಾಯಕ ಗ್ರಾಮ' ಪರಿಕಲ್ಪನೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಚಾಲನೆ ನೀಡಿದರು.

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ವಿಡಿಯೊ ಸಭೆಯಲ್ಲಿ ಈ ಮಹತ್ವಾಕಾಂಕ್ಷಿ ಯೋಜನೆಯನ್ನು ಅನಾವರಣಗೊಳಿಸಿದ ಸಚಿವರು ಮಹಾತ್ಮ ಗಾಂಧೀಜಿಯವರು ಗ್ರಾಮ ಸ್ವರಾಜ್ಯದ ಮೂಲಕ ಸ್ವಾವಲಂಬಿ ಗ್ರಾಮಗಳ ಕನಸು ಕಂಡಿದ್ದರು, ಈ ನಿಟ್ಟಿನಲ್ಲಿ 2025-26ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಗ್ರಾಮೀಣಾಭಿವೃದ್ಧಿ ಇಲಾಖೆಯ ಹಿರಿಯ ಅಧಿಕಾರಿಗಳಿಂದ ಗ್ರಾಮ ಪಂಚಾಯತಿಗಳನ್ನು ದತ್ತು ಪಡೆದು ಸಮಗ್ರವಾಗಿ ಅಭಿವೃದ್ಧಿಪಡಿಸುವ ಉದ್ದೇಶದಿಂದ ಗ್ರಾಮ ಪಂಚಾಯತಿ ದತ್ತು ಕಾರ್ಯಕ್ರಮವನ್ನು ಆರಂಭಿಸಲಾಗುವುದು ಎಂದು ಮುಖ್ಯಮಂತ್ರಿಗಳು ಘೋಷಿಸಿದ್ದರು. ಈ ಘೋಷಣೆಯನ್ನು ಈಡೇರಿಸಲು 'ಕಾಯಕ ಗ್ರಾಮ' ಕಾರ್ಯಕ್ರಮವನ್ನು ರೂಪಿಸಲಾಗಿದೆ ಎಂದು ತಿಳಿಸಿದರು.

ಬಸವಣ್ಣನವರ ಸಂದೇಶದಂತೆ ಕಾಯಕದ ಮೂಲಕ ಎಲ್ಲವನ್ನೂ ಸಾಧಿಸಬಹುದು, ಈ ಸಂದೇಶವನ್ನು ಸಾಕಾರಗೊಳಿಸುವ ಧ್ಯೇಯದೊಂದಿಗೆ ಕಾಯಕ ಗ್ರಾಮ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದರು.

ಜಿಲ್ಲಾ ಪಂಚಾಯತಿ ಮಟ್ಟದಲ್ಲಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸೇರಿದಂತೆ ಆರು ಮಂದಿ ಅಧಿಕಾರಿಗಳು, ತಾಲ್ಲೂಕು ಮಟ್ಟದಲ್ಲಿ ಮೂವರು ಅಧಿಕಾರಿಗಳು ಹಾಗೂ ರಾಜ್ಯ ಮಟ್ಟದಲ್ಲಿ ಜಿಲ್ಲಾವಾರು ನೇಮಕ ಮಾಡಲಾಗಿರುವ ನೋಡಲ್ ಅಧಿಕಾರಿಗಳು ಹಿಂದುಳಿದಿರುವಂತಹ ತಲಾ ಎರಡು ಗ್ರಾಮ ಪಂಚಾಯತಿಗಳನ್ನು ಆಯ್ಕೆ ಮಾಡಿಕೊಳ್ಳಬೇಕಾಗಿದ್ದು, ಈಗಾಗಲೇ ಈ ಉದ್ದೇಶಕ್ಕಾಗಿ 1310 ಗ್ರಾಮ ಪಂಚಾಯತಿಗಳನ್ನು ಗುರುತಿಸಲಾಗಿದೆ, ಈ ಗ್ರಾಮಗಳ ಸಮಗ್ರ ಅಭಿವೃದ್ಧಿಗೆ ಅಧಿಕಾರಿಗಳು ಜಿಲ್ಲಾ ಪಂಚಾಯತಿ ಕಾರ್ಯಕ್ರಮಗಳನ್ನು ಅನುಷ್ಠಾನಕ್ಕೆ ತರುವ ಮೂಲಕ ತೀವ್ರ ತೆರನಾದ ಚಟುವಟಿಕೆಗಳನ್ನು ಹಮ್ಮಿಕೊಂಡು ಕಾಲಮಿತಿಯಲ್ಲಿ ಗ್ರಾಮಗಳ ಅಭಿವೃದ್ಧಿಗಾಗಿ ಕಾರ್ಯನಿರ್ವಹಿಸಬೇಕೆಂದು ಸಚಿವರು ಸೂಚನೆ ನಿಡಿದರು. ಆಯ್ಕೆ ಮಾಡಿಕೊಳ್ಳಲಾದ ಗ್ರಾಮ ಪಂಚಾಯತಿಗಳಲ್ಲಿ ಶಾಸನಬದ್ಧ ಸಭೆಗಳ ಆಯೋಜನೆ, ಜನರಿಂದ, ಜನರಿಗಾಗಿ ಹಾಗೂ ಜನರಿಗೋಸ್ಕರ ಪ್ರಜಾಸತ್ತಾತ್ಮಕ ಪ್ರಕ್ರಿಯೆ ಮೂಲಕ ಗ್ರಾಮ ಪಂಚಾಯತಿ ದೂರದೃಷ್ಟಿ ಯೋಜನೆ ಸಿದ್ಧಪಡಿಸುವುದು ಸೇರಿದಂತೆ ಗ್ರಾಮೀಣ ಸಮುದಾಯಕ್ಕೆ ಶುದ್ಧ ಕುಡಿಯುವ ನೀರು, ಸ್ವಚ್ಛ ಪರಿಸರಕ್ಕಾಗಿ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆ, ಆರೋಗ್ಯ ರಕ್ಷಣೆ, ಶೈಕ್ಷಣಿಕ ಪ್ರಗತಿ, ಮೂಲ ಸೌಕರ್ಯ ಅಭಿವೃದ್ಧಿ, ಬಾಪೂಜಿ ಸೇವಾ ಕೇಂದ್ರದ ಮೂಲಕ ಅಗತ್ಯ ಸೇವೆಗಳನ್ನು ನೀಡುವುದು, ಕೂಸಿನ ಮನೆ ಮತ್ತು ಅರಿವು ಕೇಂದ್ರಗಳ ಬಲವರ್ಧನೆ, ಮಹಿಳೆ, ಮಕ್ಕಳು ಮತ್ತು ವಿಶೇಷಚೇತನರ ಅಭಿವೃದ್ಧಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ, ಗ್ರಾಮೀಣ ವಲಸೆ ತಪ್ಪಿಸಲು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಪರಿಣಾಮಕಾರಿ ಅನುಷ್ಠಾನ, ಎಲ್ಲಕ್ಕಿಂತ ಹೆಚ್ಚಾಗಿ ಗ್ರಾಮ ಪಂಚಾಯತಿಗಳು ಸ್ವಾವಲಂಬಿಯಾಗುವ ದಿಸೆಯಲ್ಲಿ ತೆರಿಗೆ, ದರ ಮತ್ತು ಶುಲ್ಕಗಳ ನಿಗದಿ ಹಾಗೂ ಸಂಗ್ರಹಣೆಯನ್ನು ಹೆಚ್ಚಿಸುವುದು. ಸಂಪನ್ಮೂಲಗಳ ಸದ್ಬಳಕೆ ಹಾಗೂ ಹಣಕಾಸು ಶಿಸ್ತನ್ನು ಸಾಧಿಸಲು ಲೆಕ್ಕಪತ್ರಗಳ ಕ್ರಮಬದ್ಧ ನಿರ್ವಹಣೆ ಕುರಿತಂತೆ ಅಗತ್ಯ ಕ್ರಮಗಳನ್ನು ಅಧಿಕಾರಿಗಳು ಕೈಗೊಳ್ಳಬೇಕಾಗಿರುತ್ತದೆ ಎಂದೂ ಸಚಿವರು ತಿಳಿಸಿದರು. ಗ್ರಾಮ ಪಂಚಾಯತಿಗಳನ್ನು ಅತ್ಯುತ್ತಮವಾಗಿ ಅಭಿವೃದ್ಧಿಪಡಿಸಿದ ಅಧಿಕಾರಿಗಳನ್ನು ಪುರಸ್ಕರಿಸಲಾಗುವುದು ಎಂದೂ ಸಚಿವರು ಪ್ರಕಟಿಸಿದರು. ಆಯ್ಕೆ ಮಾಡಿಕೊಂಡ ಗ್ರಾಮ ಪಂಚಾಯತಿಗಳ ಸ್ಥಿತಿಗತಿಗಳನ್ನು ಅಧ್ಯಯನ ನಡೆಸಿ ಸುಧಾರಣೆಯಾಗಬೇಕಾಗಿರುವ ಅಂಶಗಳ ಕುರಿತಂತೆ ಜನಪ್ರತಿನಿಧಿಗಳ ಸಹಭಾಗಿತ್ವದಲ್ಲಿ ಕ್ರಿಯಾ ಯೋಜನೆಯನ್ನು ರೂಪಿಸಿಕೊಳ್ಳಬೇಕು. ಪ್ರತಿ ಹದಿನೈದು ದಿನಕ್ಕೊಮ್ಮೆ ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡಿ ಪ್ರಗತಿಯನ್ನು ಪರಿಶೀಲಿಸಿ, ಅಗತ್ಯ ಸಲಹೆ ಹಾಗೂ ಸಮನ್ವಯ ಕಾರ್ಯಗಳನ್ನು ಕೈಗೊಳ್ಳುವುದು, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ಹಾಗೂ ಸರ್ಕಾರದ ಕಾರ್ಯದರ್ಶಿಗಳು (ಪಂ. ರಾಜ್) ರವರು ಮಾಸಿಕ ಪ್ರಗತಿ ಪರಿಶೀಲನೆಯನ್ನು ಕೈಗೊಳ್ಳಬೇಕು ಎಂದು ಸಚಿವರು ಅಧಿಕಾರಿಗಳಿಗೆ ಸೂಚನೆ ನೀಡಿದ ಸಚಿವರು ಬದ್ಧತಾಪೂರ್ಣವಾಗಿ ಕಾರ್ಯನಿರ್ವಹಿಸುವ ಮೂಲಕ ಕಾಯಕ ಗ್ರಾಮ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಬೇಕೆಂದು ಸಲಹೆ ಮಾಡಿದರು. ಕಾಯಕ ಗ್ರಾಮ ಅನುಷ್ಠಾನದಿಂದ ಆಶಿಸಲಾಗಿರುವ ಸುಧಾರಣೆಗಳ ಬಗ್ಗೆ ವಿವರಗಳನ್ನು ಹೊಂದಿದ ಕೈಪಿಡಿಯನ್ನು ಸಚಿವರು ಬಿಡುಗಡೆ ಮಾಡಿದರು. ಅಧಿಕಾರಿಗಳು ತಮ್ಮ ಪಾಲಿನ ಈ ವಿಶೇಷ ಜವಾಬ್ದಾರಿಯನ್ನು ಹೆಚ್ಚಿನ ಹೊಣೆಗಾರಿಕೆ ಎಂದು ಭಾವಿಸದೆ ಉತ್ಸಾಹದಿಂದ ಅನುಷ್ಠಾನಗೊಳಿಸಬೇಕೆಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಾರ್ಯದರ್ಶಿ ಸಮೀರ್ ಶುಕ್ಲಾ ಹೇಳಿದರು. ಪಂಚಾಯತ್ ರಾಜ್ ಇಲಾಖೆಯ ಕಾರ್ಯದರ್ಶಿ ಡಿ.ರಂದೀಪ್, ಪಂಚಾಯತ್ ರಾಜ್ ಆಯುಕ್ತೆ ಡಾ. ಅರುಂಧತಿ ಚಂದ್ರಶೇಖರ್ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## 70 ನೇ ಕನ್ನಡ ರಾಜ್ಯೋತ್ಸವ

ದಕ್ಷಿಣ ಕನ್ನಡದ ಶ್ರೀಮತಿ ಸಿಂಧು ಗುಜರನ್ ಮತ್ತು ಮೈಸೂರಿ ಎಲ್. ಮಹದೇವಪ್ಪ ಉಡಿಗಾಲ ಅವರಿಗೆ ರಾಜ್ಯೋತ್ಸವ ಪ್ರಶಸ್ತಿ ಲಭಿಸಿದೆ.

ಸಂಗೀತ ಕ್ಷೇತ್ರದಿಂದ ಕೊಪ್ಪಳದ ದೇವೆಂದ್ರಕುಮಾರ ಪತ್ತಾರ್ ಹಾಗೂ ಬೀದರಿನ ಮಡಿವಾಳಯ್ಯ ಸಾಲಿ ಭಾಜನರಾಗಿದ್ದಾರೆ.

ನೃತ್ಯ ಕ್ಷೇತ್ರದಿಂದ ಮೈಸೂರಿನ ಪ್ರೊ. ಕೆ. ರಾಮಮೂರ್ತಿ ರಾವ್ ಚಲನಚಿತ್ರ ಮತ್ತು ಕಿರುತೆರೆ ಕ್ಷೇತ್ರದಿಂದ ದಕ್ಷಿಣ ಕನ್ನಡದ ಪ್ರಕಾಶ್ ರಾಜ್ ಕೊಡಗಿನ ಶ್ರೀಮತಿ ವಿಜಯಲಕ್ಷ್ಮಿ ಸಿಂಗ್ ಆಡಳಿತ ಕ್ಷೇತ್ರದಿಂದ ಬೆಂಗಳೂರು ದಕ್ಷಿಣ (ರಾಮನಗರ)ದ ಹೆಚ್. ಸಿದ್ದಯ್ಯ ಭಾ.ಆ.ಸೇ., (ನಿ), ವೈದ್ಯಕೀಯ ಕ್ಷೇತ್ರದಿಂದ ತುಮಕೂರಿನ ಡಾ. ಆಲಮ್ಮ ಮಾರಣ್ಣ ಮತ್ತು ಬೆಂಗಳೂರು ಗ್ರಾಮಾಂತರದ ಡಾ. ಜಯರಂಗನಾಥ್ ಭಾಜನರಾದರೆ, ಸಮಾಜಸೇವೆ ಕ್ಷೇತ್ರದಿಂದ ವಿಜಯನಗರದ ಶ್ರೀಮತಿ ಸೂಲಗಿತ್ತಿ ಈರಮ್ಮ, ಬೆಂಗಳೂರು ಗ್ರಾಮಾಂತರದ

ಶ್ರೀಮತಿ ಫಕ್ಕೀರಿ, ದಕ್ಷಿಣ ಕನ್ನಡದ ಶ್ರೀಮತಿ ಕೋರಿನ್ ಆಂಟೋನಿಯಟ್ ರಸ್ನಾ, ಉಡುಪಿಯ ಡಾ. ಎನ್. ಸೀತಾರಾಮ ಶೆಟ್ಟಿ ಮತ್ತು ಶಿವಮೊಗ್ಗದ ಕೋಣಂದೂರು ಲಿಂಗಪ್ಪ ಅವರಿಗೆ ಪ್ರಶಸ್ತಿ ಲಭಿಸಿದೆ.

ಸಂಕೀರ್ಣ ಕ್ಷೇತ್ರದಿಂದ ದಕ್ಷಿಣ ಕನ್ನಡದ ಉಮೇಶ ಪಂಬದ, ಧಾರವಾಡದ ಡಾ. ರವೀಂದ್ರ ಕೋರಿಶೆಟ್ಟರ್, ಬೆಂಗಳೂರಿನ ಕೆ. ದಿನೇಶ್, ತುಮಕೂರಿನ ಶಾಂತರಾಜು, ರಾಯಚೂರಿನ ಜಾಫರ್ ಮೊಹಿಯುದ್ದೀನ್ ಬೆಂಗಳೂರು ಗ್ರಾಮಾಂತರದ ಪೆನ್ನ ಓಬಳಯ್ಯ, ಬಳ್ಳಾರಿಯ ಶ್ರೀಮತಿ ಶಾಂತಿ ಬಾಯಿ. ಕೆ, ಮತ್ತು ಬೆಳಗಾವಿಯ ಪುಂಡಲೀಕ ಶಾಸ್ತ್ರೀ (ಬುಡಬುಡಕೆ) ಅವರು ಭಾಜನರಾದರೆ, ಹೊರನಾಡು / ಹೊರದೇಶ ಕ್ಷೇತ್ರದಿಂದ ಸೌದಿಯ ಜಕರಿಯ ಬಜಪೆ ಮುಂಬೈನ ಪಿ.ವಿ. ಶೆಟ್ಟಿ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಪರಿಸರ ಕ್ಷೇತ್ರದಿಂದ ಚಾಮರಾಜನಗರದ ರಾಮೇಗೌಡ ಮತ್ತು ಯಾದಗಿರಿಯ ಮಲ್ಲಿಕಾರ್ಜುನ ನಿಂಗಪ್ಪ ಕೃಷಿ ಕ್ಷೇತ್ರದಿಂದ ಹಾವೇರಿ ಡಾ. ಎಸ್.ವಿ. ಹಿತ್ತಲಮನಿ ಮತ್ತು ಹಾಸನದ ಎಂ.ಸಿ. ರಂಗಸ್ವಾಮಿ ಪ್ರಶಸ್ತಿಗೆ ಭಾಜನರಾದರೆ ಮಾಧ್ಯಮ ಕ್ಷೇತ್ರದಿಂದ ಬೆಂಗಳೂರಿನ ಕೆ. ಸುಬ್ರಮಣ್ಯ, ಮೈಸೂರಿನ ಅಂಶಿ ಪ್ರಸನ್ನ ಕುಮಾರ್, ದಕ್ಷಿಣ ಕನ್ನಡದ ಬಿ.ಎಂ. ಹನೀಫ್ ಮತ್ತು ಮಂಡ್ಯ ಜಿಲ್ಲೆಯ ಎಂ. ಸಿದ್ದರಾಜು ಅವರಿಗೆ ರಾಜ್ಯೋತ್ಸವ ಪ್ರಶಸ್ತಿ ಲಭಿಸಿದೆ.

ವಿಜ್ಞಾನ/ ತಂತ್ರಜ್ಞಾನ ಕ್ಷೇತ್ರದಿಂದ ಚಿಕ್ಕಬಳ್ಳಾಪುರದ ರಾಮಯ್ಯ, ದಾವಣಗೆರೆಯ ಏರ್ ಮಾರ್ಷಲ್ ಫೀಲೀಫ್ ರಾಜಕುಮಾರ್ ಮತ್ತು ಗದಗದ ಡಾ. ಆರ್.ವಿ.ನಾಡಗೌಡ, ಸಹಕಾರ ಕ್ಷೇತ್ರದಿಂದ ಕೊಪ್ಪಳದ ಶೇಖರಗೌಡ ವಿ ಮಾಲಿಪಾಟೀಲ್ ಅವರು ಭಾಜನರಾಗಿದ್ದಾರೆ.

ಯಕ್ಷಗಾನ ಕ್ಷೇತ್ರದಿಂದ ಉಡುಪಿಯ ಕೋಟ ಸುರೇಶ ಬಂಗೇರ ಮತ್ತು ಐರಬೈಲ್ ಆನಂದ ಶೆಟ್ಟಿ ಹಾಗೂ ಉತ್ತರ ಕನ್ನಡದ ಕೃಷ್ಣ ಪರಮೇಶ್ವರ ಹೆಗಡೆ (ಕೆ.ಪಿ.ಹೆಗಡೆ) ಬಯಲಾಟ ಕ್ಷೇತ್ರದಿಂದ ಹಾಸನದ ಗುಂಡೂರಾಜ್ ಅವರಿಗೆ ಲಭಿಸಿದೆ.

ರಂಗಭೂಮಿ ಕ್ಷೇತ್ರದಿಂದ ಬೆಂಗಳೂರು ದಕ್ಷಿಣ (ರಾಮನಗರ)ದ ಹೆಚ್. ಎಂ. ಪರಮಶಿವಯ್ಯ, ವಿಜಯಪುರದ ಎಲ್.ಬಿ. ಶೇಖ್ (ಮಾಸ್ತರ್), ಬೆಂಗಳೂರಿನ ಬಂಗಾರಪ್ಪ ಖುದಾನ್‌ಪುರದ ದಕ್ಷಿಣ ಕನ್ನಡದ ಮೈಮ್ ರಮೇಶ್, ಮತ್ತು ರಾಯಚೂರಿನ ಶ್ರೀಮತಿ ಡಿ. ರತ್ನಮ್ಮ ದೇಸಾಯಿ ಅವರು ಭಾಜನರಾಗಿದ್ದಾರೆ.

ಶಿಕ್ಷಣ ಕ್ಷೇತ್ರದಿಂದ ಬೆಂಗಳೂರಿನ ಡಾ. ಎಂ.ಆರ್. ಜಯರಾಮ್, ಮೈಸೂರಿನ ಡಾ. ಎನ್.ಎಸ್. ರಾಮೇಗೌಡ ಕಲಬುರಗಿಯ ಎಸ್.ಬಿ. ಹೊಸಮನಿ ಬೆಳಗಾವಿಯ ಶ್ರೀಮತಿ ರಾಜ್ ಶ್ರೀ ನಾಗರಾಜು, ಕ್ರೀಡಾ ಕ್ಷೇತ್ರದಿಂದ ಬೆಂಗಳೂರಿನ ಆಶೀಶ್ ಕುಮಾರ್ ಬಲ್ಲಾಳ್, ಮೈಸೂರಿನ ಎಂ. ಯೋಗೇಂದ್ರ ಮತ್ತು ಕೊಡಗಿನ ಡಾ. ಬಬಿನಾ ಎನ್. ಎಂ. (ಯೋಗ) ನ್ಯಾಯಾಂಗ ಕ್ಷೇತ್ರದಿಂದ ಬಾಗಲಕೋಟೆಯ ನ್ಯಾ. ಪಿ.ಬಿ. ಭಜಂತ್ರಿ (ಪವನ್ ಕುಮಾರ್ ಭಜಂತ್ರಿ), ಶಿಲ್ಪಕಲೆ ಕ್ಷೇತ್ರದಿಂದ ಯಾದಗಿರಿಯ ಬಸಣ್ಣ ಮೋನಪ್ಪ ಬಡಿಗೇರ ಮತ್ತು ಬಾಗಲಕೋಟೆಯ ನಾಗಲಿಂಗಪ್ಪ ಜಿಗಂಗೂರ ಅವರು ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಚಿತ್ರಕಲೆ ಕ್ಷೇತ್ರದಿಂದ ವಿಜಯನಗರದ ಬಿ. ಮಾರುತಿ ಮತ್ತು ಕರಕುಶಲ ಕ್ಷೇತ್ರದಿಂದ ಮೈಸೂರಿನ ಶ್ರೀಮತಿ ಎಲ್. ಹೇಮಾಶೇಖರ್ ಅವರು 70 ನೇ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೆ 2025ನೇ ಸಾಲಿಗೆ ಭಾಜನರಾಗಿದ್ದಾರೆ .

## ನಿಯಂತ್ರಣವಿಲ್ಲ: ಬೊಮ್ಮಾಯಿ

ಪ್ರತಿಕ್ರಿಯಿಸಿದ ಅವರು, ಕಾಂಗ್ರೆಸ್ ರಾಜ್ಯದಲ್ಲಿದ್ದಾಗ ಯಾವಾಗಲೂ ಇಲ್ಲಿಂದ ಹಣ ಕಳಿಸುವ ಪರಂಪರೆ ಇದೆ. ತೆಲಂಗಾಣ ರಾಜ್ಯದಲ್ಲೂ ದುಡ್ಡಿಲ್ಲ. ಕಾಂಗ್ರೆಸ್ಸಿನವರಿಗೆ ಕರ್ನಾಟಕ ಹಿಂಡುವ ಆಕಳಾಗಿದೆ ಎಂದರು.

ರಾಜ್ಯದಲ್ಲಿ ದಲಿತ ಸಿಎಂ ಆಗಬೇಕು ಎಂಬ ಕೂಗು ಕೇಳಿ ಬರುತ್ತಿರುವ ವಿಚಾರವಾಗಿ ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ದಲಿತ ಸಿಎಂ ಆಗಲಿ ಅದಕ್ಕೆ ಸಂತೋಷ. ಆದರೆ, ಇದ್ದ ಸಿಎಂ ಅವರೇ ಕೆಲಸ ಮಾಡುತ್ತಿಲ್ಲ. ಕರ್ನಾಟಕದ ಹಣೆಬರಹ ಕಾಂಗ್ರೆಸ್ ಕೈಯಲ್ಲಿ ಎಂದೆಂದೂ ಉದ್ಧಾರವಾಗಲು ಸಾಧ್ಯವಿಲ್ಲ ಎಂದರು.

## ಬಾಲಕಿಯರಿಗೆ ಎಚ್‌ಪಿವಿ ಲಸಿಕೆ ಅಭಿಯಾನ

ಗರ್ಭಕಂಠದ ಕ್ಯಾನ್ಸರ್‌ನಿಂದಾಗಿ ವರ್ಷಕ್ಕೆ ಸುಮಾರು 75,000 ಮಹಿಳೆಯರು ಮೃತಪಡುತ್ತಿದ್ದಾರೆ. ಅವುಗಳನ್ನು ಮುಂದುವರಿದ ಹಂತದಲ್ಲಿ ಪತ್ತೆ ಮಾಡಲಾಗುತ್ತದೆ. ಆರಂಭ ಹಂತದಲ್ಲಿ ಪತ್ತೆ ಹಚ್ಚಿದರೆ ಸಂಪೂರ್ಣವಾಗಿ ತಡೆಗಟ್ಟಬಹುದು ಎಂದು ಸ್ತ್ರೀರೋಗ ತಜ್ಞೆ ಮತ್ತು ಎಚ್‌ಡಿಆರ್ ಆರೋಗ್ಯ ರಕ್ಷಣಾ ಪ್ರತಿಷ್ಠಾನದ ನಿರ್ದೇಶಕಿ ಡಾ. ಹೇಮಾ ದಿವಾಕರ್ ಹೇಳುತ್ತಾರೆ. ಹೆಣ್ಣುಮಕ್ಕಳಿಗೆ ಲಸಿಕೆ ಹಾಕುವಾಗ ಪರೀಕ್ಷಿಸಬೇಕಾದ ಅಂಶಗಳಿವೆಯೇ ಎಂದು ಕೇಳಿದಾಗ, ಇದು ಪೋಲಿಯೊದಂತಹ ಸಾರ್ವತ್ರಿಕ ರೋಗನಿರೋಧಕ ಶಕ್ತಿಯಾಗಿದ್ದು, 9 ರಿಂದ 14 ವರ್ಷ ವಯಸ್ಸಿನ ಹೆಣ್ಣುಮಕ್ಕಳು ಲಸಿಕೆ ಪಡೆಯಲು ಉತ್ತಮ ಸಮಯ. ಈ ಅಭಿಯಾನದ ಸಮಯದಲ್ಲಿ ಎಚ್‌ಪಿವಿನ್ನು ಪತ್ತೆ ಹಚ್ಚಲು ತಾಯಂದಿರನ್ನು ಪರೀಕ್ಷಿಸಲಾಗುತ್ತದೆ. ನಮ್ಮ ಅಭಿಯಾನಗಳಲ್ಲಿ ತಾಯಂದಿರನ್ನು ಪರೀಕ್ಷಿಸುವುದು ಮತ್ತು ಅವರ ಹೆಣ್ಣುಮಕ್ಕಳಿಗೆ ಲಸಿಕೆ ಹಾಕುವುದು ಸೇರಿದೆ. ಭಾರತದಲ್ಲಿ ಹೆಣ್ಣುಮಕ್ಕಳಿಗೆ ಎರಡು ಡೋಸ್‌ಗಳನ್ನು ನೀಡಲಾಗುತ್ತದೆ, ಎರಡನೇ ಡೋಸ್ ನ್ನು ಮೊದಲ ಡೋಸ್‌ನ ಆರು ತಿಂಗಳ ಅವಧಿಯಲ್ಲಿ ನೀಡಲಾಗುತ್ತದೆ. ಮಕ್ಕಳಿಗೆ ಲಸಿಕೆ ಹಾಕಿದರೆ ಅವರಿಗೆ ಗರ್ಭಕಂಠದ ಕ್ಯಾನ್ಸರ್ ಬಾಧಿಸುವುದಿಲ್ಲ. 2030 ರ ವೇಳೆಗೆ ಅದನ್ನು ನಿರ್ಮೂಲನೆ ಮಾಡಬಹುದು ಎಂದರು. ಈ ಅಭಿಯಾನಗಳ ಸಮಯದಲ್ಲಿ ತಾಯಂದಿರನ್ನು ಪರೀಕ್ಷಿಸುವುದರಿಂದ ಗರ್ಭಕಂಠದಲ್ಲಿ ಎಚ್‌ಪಿವಿ ವೈರಸ್ ಇರುವಿಕೆಯ ಅವಧಿಯನ್ನು ತಿಳಿಯಲು ಸಹಾಯ ಮಾಡುತ್ತದೆ. ಯಾವುದೇ ಕ್ಯಾನ್ಸರ್ ಪೂರ್ವಭಾವಿ ಕೋಶಗಳಿವೆಯೇ ಮತ್ತು ಮುಂದಿನ ಚಿಕಿತ್ಸೆಯ ವಿಧಾನವನ್ನು ನಿರ್ಧರಿಸಲು ಸಹಾಯ ಮಾಡುತ್ತದೆ ಎಂದು ಡಾ. ಹೇಮಾ ಹೇಳಿದರು. ಡಾ. ಹೇಮಾ ಮತ್ತು ಸ್ತ್ರೀರೋಗ ತಜ್ಞರ ತಂಡವು ರಾಜ್ಯಾದ್ಯಂತ ವೈದ್ಯರಿಗೆ ತರಬೇತಿ ನೀಡಿದೆ. ಮೈಸೂರು, ಬೆಂಗಳೂರು, ಹಾಸನ, ಬೀದರ್ ಮತ್ತು ಕಲಬುರಗಿಯ ಸರ್ಕಾರಿ ಶಾಲೆಗಳಲ್ಲಿ ಓದುತ್ತಿರುವ 7,000 ಕ್ಕೂ ಹೆಚ್ಚು ಹೆಣ್ಣುಮಕ್ಕಳಿಗೆ ಲಸಿಕೆ ಹಾಕಿದೆ. ನಾವು ಶಿಕ್ಷಕರು, ವಿದ್ಯಾರ್ಥಿಗಳು, ಪೋಷಕರು, ಧಾರ್ಮಿಕ ಮುಖಂಡರು ಅಥವಾ ನಿರ್ದಿಷ್ಟ ಪ್ರದೇಶ, ಜಿಲ್ಲೆ ಅಥವಾ ತಾಲ್ಲೂಕಿನ ರಾಜಕಾರಣಿಗಳು ಸೇರಿದಂತೆ ನಾಲ್ಕು ಹಂತದ ಜಾಗೃತಿ ಕಾರ್ಯಕ್ರಮಗಳನ್ನು ರೂಪಿಸುತ್ತೇವೆ. ಹೆಣ್ಣುಮಕ್ಕಳಿಗೆ ಲಸಿಕೆ ನೀಡುವ ಮೊದಲು ನಾವು ಪೋಷಕರ ಒಪ್ಪಿಗೆಯನ್ನು ಪಡೆಯುತ್ತೇವೆ. ಖಾಸಗಿ ಸಂಸ್ಥೆಗಳು ಮತ್ತು ವ್ಯಕ್ತಿಗಳಿಗೆ 500 ರೂಪಾಯಿ ಶುಲ್ಕವನ್ನು ವಿಧಿಸಲಾಗುತ್ತದೆ. ಉಳಿದ ಮೊತ್ತವನ್ನು ನಾವು ಭರಿಸುತ್ತೇವೆ ಎಂದರು.

## ನ್ಯಾ. ಸೂರ್ಯಕಾಂತ್ ನೇಮಕ

ಸೂರ್ಯಕಾಂತ್ ಸಿಜೆ ಆಗಿ ಅಧಿಕಾರ ವಹಿಸಿಕೊಳ್ಳಲಿದ್ದಾರೆ.

ಗವಾಯಿ ಅವರಿಗೂ ಮುನ್ನ ಸಂಜೀವ್ ಖನ್ನಾ, ಡಿ.ವೈ ಚಂದ್ರಚೂಡ್, ಉದಯ್ ಉಮೇಶ್ ಲಲಿತ್, ಎನ್.ವಿ ರಮಣ ಸಿಜೆಗಳಾಗಿ ಕರ್ತವ್ಯ ನಿರ್ವಹಿಸಿದ್ದರು.

# ಯದಲಾಪೂರ ಗ್ರಾಮದಲ್ಲಿ ಗ್ಯಾರಂಟಿ ಯೋಜನೆಗಳ ಕ್ರಾಂತಿ



ಮಲ್ಲಮ್ಮ ನುಡಿ ವಾರ್ತೆ

ಬೀದರ್. ಅ. 30 : ರಾಜ್ಯ ಸರ್ಕಾರದ ಜನಪರ ಕಾರ್ಯಕ್ರಮಗಳಾದ ಗ್ಯಾರಂಟಿ ಯೋಜನೆಗಳನ್ನು ಪ್ರತಿ ಮನೆಗೂ ತಲುಪಿಸುವ ನಿಟ್ಟಿನಲ್ಲಿ ಮಾನ್ಯ ಮಾಜಿ ಶಾಸಕರಾದ ಸನ್ಮಾನ್ಯ ಶ್ರೀ ಅಶೋಕ ಖೇಣಿ ಸರ್ ರವರ ಮಾರ್ಗದರ್ಶನದಲ್ಲಿ ಬೀದರ ದಕ್ಷಿಣ ಕ್ಷೇತ್ರದ ತಾಲ್ಲೂಕ ಪಂಚ ಗ್ಯಾರಂಟಿ ಉಪಾಧ್ಯಕ್ಷರಾದ ಶ್ರೀ ರಾಜಕುಮಾರ ಮಡಕಿ ಹಾಗೂ ಸದಸ್ಯರ ನೇತೃತ್ವದಲ್ಲಿ ನಮ್ಮ ನಡೆ ಹಳ್ಳಿ ಕಡೆ ಕಾರ್ಯಕ್ರಮವನ್ನು ಬೀದರ ದಕ್ಷಿಣ ವಿಧಾನಸಭಾ ಕ್ಷೇತ್ರದ ಯದಲಾಪೂರ್ ಗ್ರಾಮದಲ್ಲಿ ಕರ್ನಾಟಕ ಸರ್ಕಾರದ ಪಂಚ್ ಗ್ಯಾರಂಟಿ ಯೋಜನೆಗಳಾದ,

**ಶಕ್ತಿ ಯೋಜನೆ:** ಮಹಿಳೆಯರಿಗೆ ಉಚಿತ ಪ್ರಾಮಾಣದ ಸೌಲಭ್ಯ ಕಲ್ಪಿಸುವುದು. ಮತ್ತು ಮಹಿಳೆಯರಿಗೆ ಆರ್ಥಿಕ ಮತ್ತು ಸಾಮಾಜಿಕ ಸಬಲೀಕರಣ ನೀಡುವುದು.

**ಅನ್ನಭಾಗ್ಯ ಯೋಜನೆ:** ಪಡಿತರ ಚೀಟಿ ತಿದ್ದುಪಡಿಗೆ ಸಂಬಂಧಿಸಿದಂತೆ ಗ್ರಾಮ ಒನ್ ಕೇಂದ್ರಗಳಲ್ಲಿ ಎದುರಾಗುತ್ತಿದ್ದ ತೊಂದರೆಗಳನ್ನು ನಿವಾರಿಸುವಲ್ಲಿ ತಂಡವು ಸಕ್ರಿಯವಾಗಿ ಕೆಲಸ ಮಾಡಿದೆ. ಅಲ್ಲದೆ, ಕಳ್ಳ ಸಾಗಣಿಕೆಯಂತಹ ಪ್ರಕರಣಗಳ ಬಗ್ಗೆಯೂ ನಿಗಾ ವಹಿಸಿ, ಅಧಿಕಾರಿಗಳ ಗಮನಕ್ಕೆ ತರುತ್ತಿದೆ.

**ಗೃಹ ಲಕ್ಷ್ಮಿ :** ಕುಟುಂಬದ ಮಹಿಳಾ ಮುಖ್ಯಸ್ಥರಿಗೆ ಆರ್ಥಿಕ ನೆರವು ನೀಡಿ, ಅವರ ಸಬಲೀಕರಣ ಮಾಡುವುದು,

**ಗೃಹ ಜ್ಯೋತಿ:** ರಾಜ್ಯದ ಪ್ರತಿ ಮನೆಗೆ ಉಚಿತ ವಿದ್ಯುತ್ ಒದಗಿಸಿ, ವಿದ್ಯುತ್ ಬಿಲ್ ಹೊರೆಯಿಂದ ಮುಕ್ತಿ ನೀಡುವುದು. ಮತ್ತು


**ಯುವನಿಧಿ ಯೋಜುನೆ:** ಮಹತ್ವದ ಬಗ್ಗೆ ಮನೆ ಮನೆಗೆ ತೆರಳಿ ಜನರಲ್ಲಿ ತಿಳಿಸಲಾಯಿತು. ಈ ಸಂದರ್ಭದಲ್ಲಿ ಕಮಿಟಿಯ ಸದಸ್ಯರಾದ ಶಿವಕುಮಾರ ಕುತ್ತಾಬಬಾದ್, ಸೇವಾದಳ್ ಅಧ್ಯಕ್ಷರಾದ ಮೋಹಿನ್ ಪಾಠಣ್, ಮುಖಂಡರಾದ ಸುರೇಶ ಪಾಟೀಲ್, ನಾಗೇಶ್ ಸಲಭ, ಪವನ ಬಾಪೂರೆ, ಸೇರಿ ಅನೇಕ ಗ್ರಾಮಸ್ಥರು ಪಾಲ್ಗೊಂಡಿದರು.

# ಇಂದು ಲ್ಯಾಪಟಾಪ್ ವಿತರಣೆ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ.30 : ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಖೆ, 2023–24ನೇ ಸಾಲಿನಲ್ಲಿ ಪ್ರಥಮ ಸೆಮಿಸ್ಟರಿಗೆ ಪ್ರವೇಶ ಪಡೆದಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ (ಎಸ್.ಸಿ.ಪಿ/ಟಿ.ಎಸ್.ಪಿ. ಯೋಜನೆಯಡಿ) ಉಚಿತ ಲ್ಯಾಪಟಾಪ್ ವಿತರಣೆ ಕಾರ್ಯಕ್ರಮವನ್ನು ದಿನಾಂಕ: 31–10–2025 ರಂದು ಬೆಳಿಗ್ಗೆ 11 ಗಂಟೆಗೆ ಸರಕಾರಿ ಪಾಲಿಟೆಕ್ನಿಕ್ ಮೈಲೂರ ರಸ್ತೆ ಬೀದರ ಇಲ್ಲಿ ಹಮ್ಮಿಕೊಳ್ಳಲಾಗಿದೆ. ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ.ಖಂಡ್ರೆ ಅವರು ವಿದ್ಯಾರ್ಥಿಗಳಿಗೆ ಲ್ಯಾಪಟಾಪ್ ವಿತರಿಸಲಿದ್ದಾರೆ. ಉನ್ನತ ಶಿಕ್ಷಣ ಸಚಿವರಾದ ಡಾ. ಎಂ.ಸಿ. ಸುಧಾಕರ ಅವರು ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸಲಿದ್ದಾರೆ. ಪೌರಾಡಳಿತ ಹಾಗೂ ಹಜ್ ಸಚಿವ ರಹೀಮ್ ಖಾನ್ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಬೀದರ ಲೋಕಸಭಾ ಸದಸ್ಯ ಸಾಗರ ಈಶ್ವರ ಖಂಡ್ರೆ, ಔರಾದ (ಬಿ) ಶಾಸಕ ಪ್ರಭು ಬಿ.ಚವ್ಹಾಣ್, ಬಸವಕಲ್ಯಾಣ ಶಾಸಕ ಶರಣು ಸಲಗರ, ಬೀದರ ದಕ್ಷಿಣ ಶಾಸಕ ಡಾ. ಶೈಲೇಂದ್ರ ಕೆ.ಬೆಲ್ದಾಳೆ, ಹುಮನಾಬಾದ ಶಾಸಕ, ಡಾ. ಸಿದ್ದು ಪಾಟೀಲ ಹಾಗೂ ವಿಧಾನ ಪರಿಷತ್ ಸದಸ್ಯರುಗಳಾದ ಡಾ. ಚಂದ್ರಶೇಖರ ಬಿ.ಪಾಟೀಲ, ಶಶೀಲ ಜಿ.ನಮೋಶಿ, ಭೀಮರಾವ ಬಿ.ಪಾಟೀಲ, ಡಾ. ಎಂ.ಜಿ.ಮೂಳೆ, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷ ಮಾಲಾ ನಾರಾಯಣರಾವ, ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಕೃಷ್ಣಾ ಮೇಲ್ದಂಡೆ ಯೋಜನೆ (ಕಾಡಾ) ಭೀಮರಾಯನ ಗುಡಿ ಕಲಬುರಗಿಯ ಅಧ್ಯಕ್ಷರಾದ ಬಾಬು ಹೊನ್ನನಾಯ್ಕ, ಬೀದರ ನಗರಸಭೆ ಅಧ್ಯಕ್ಷ ಮಹಮ್ಮದ ಗೌಸ, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಬೆಂಗಳೂರು ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಆಯುಕ್ತರಾದ ಮಂಜುಶ್ರೀ ಎನ್. ಬೀದರ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಬೆಂಗಳೂರು ತಾಂತ್ರಿಕ ಶಿಕ್ಷಣ ಇಲಾಖೆಯ ನಿರ್ದೇಶಕ ಪ್ರಸನ್ನ ಹೆಚ್., ಬೀದರ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ್ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ಅವರುಗಳು ಭಾಗವಹಿಸಲಿದ್ದಾರೆ.

# ನ.2ರಂದು ಡಾ.ಚನ್ನವೀರ ಶಿವಾಚಾರ್ಯರ 63ನೇ ಜನ್ಮದಿನೋತ್ಸವ



ಬೀದರ್. ಅ. 30 : ಜಿಲ್ಲೆಯ ಬಸವಕಲ್ಯಾಣ ತಾಲೂಕಿನ ಸಿರಗಾಪೂರ ಗ್ರಾಮದಲ್ಲಿ ದಿನಾಂಕ 02. 11.2025 ರಂದು ರವಿವಾರ ಬೆಳಗ್ಗೆ 11 ಗಂಟೆಗೆ "ಶಿವಾಚಾರ್ಯ ರತ್ನ" "ಧರ್ಮರತ್ನ" "ದಾಸೋಹ ರತ್ನ" "ಸದ್ಧರ್ಮ ಶಿಖಾಮಣಿ" "ಸಮನ್ವಯ ಸಂತ" ಪರಮ ಪೂಜ್ಯ ಶ್ರೀ ಷ. ಬ್ರ. ಡಾ. ಚನ್ನವೀರ ಶಿವಾಚಾರ್ಯರು ಸಂಸ್ಥಾನ ಹಿರೇಮಠ, ಸುಕ್ಷೇತ್ರ ಹಾರಕೂಡ ಇವರ 63 ಜನ್ಮದಿನೋತ್ಸವ ಮತ್ತು ತುಲಾಭಾರ ಕಾರ್ಯಕ್ರಮ ಜರುಗಲಿದೆ ಸಮಾರಂಭದ ಸಮ್ಮುಖವನ್ನು ಪೂಜ್ಯ ಶ್ರೀ ಮ.ನಿ.ಪ್ರ. ಶಿವಲಿಂಗ ಮಹಾಸ್ವಾಮಿಗಳು ಸಂಸ್ಥಾನ ಮಠ ಖೇಳಗಿ ವಹಿಸುವರು.

ಬಸವಕಲ್ಯಾಣ ಶಾಸಕರಾದ ಸನ್ಮಾನ್ಯ ಶ್ರೀ ಶರಣು ಸಲಗರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಸನ್ಮಾನ್ಯ ಶ್ರೀ ಈಶ್ವರ ಬಿ. ಖಂಡ್ರೆ, ಅರಣ್ಯ ಜೀವಶಾಸ್ತ್ರ ಮತ್ತು ಪರಿಸರ ಸಚಿವರು ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರು ಕರ್ನಾಟಕ ಸರ್ಕಾರ ಇವರು ಸಮಾರಂಭ ಉದ್ಘಾಟಿಸಲಿದ್ದಾರೆ.

ಮುಖ್ಯ ಅಥಿತಿಗಳಾಗಿ ಸನ್ಮಾನ್ಯ ಶ್ರೀ ಸಾಗರ ಖಂಡ್ರೆ, ಲೋಕಸಭಾ ಸದಸ್ಯರು ಬೀದರ. ಸನ್ಮಾನ್ಯ ಶ್ರೀ ಬಿ. ಆರ್. ಪಾಟೀಲ ಶಾಸಕರು ಅಳಂದ. ಸನ್ಮಾನ್ಯ ಶ್ರೀ ಮಾರುತಿರಾವ ಮುಳೆ, ವಿಧಾನ ಪರಿಷತ್ ಸದಸ್ಯರು ಸನ್ಮಾನ್ಯ ಡಾ॥ ಸಿದ್ದಲಿಂಗಪ್ಪ ಪಾಟೀಲ ಶಾಸಕರು ಹುಮನಾಬಾದ. ಸನ್ಮಾನ್ಯ ಶ್ರೀ ಬಸವರಾಜ ಮತ್ತಿಮೂಡ, ಶಾಸಕರು ಕಲಬುರಗಿ ಗ್ರಾಮೀಣ ಮತಕ್ಷೇತ್ರ. ಸನ್ಮಾನ್ಯ ಡಾ॥ ಅವಿನಾಶ ಜಾಧವ ಶಾಸಕರು ಚಿಂಚೋಳಿ. ಸನ್ಮಾನ್ಯ ಶ್ರೀ ಚಂದ್ರಶೇಖರ ಪಾಟೀಲ ವಿಧಾನ ಪರಿಷತ್ ಸದಸ್ಯರು, ಸನ್ಮಾನ್ಯ ಶ್ರೀ ಭೀಮರಾವ ಪಾಟೀಲ ವಿಧಾನ ಪರಿಷತ್ ಸದಸ್ಯರು ಭಾಗವಹಿಸುವರು.

# ಸರ್ಕಾರಿ ಶಾಲಾ ಸಹ ಶಿಕ್ಷಕರ ಕೋರಿಕೆ ವರ್ಗಾವಣೆ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ.30 : 2024–25ನೇ ಸಾಲಿನ ಸರ್ಕಾರಿ ಪ್ರಾಥಮಿಕ ಶಾಲಾ ಸಹ ಶಿಕ್ಷಕರು ಹಾಗೂ ಮುಖ್ಯ ಶಿಕ್ಷಕರ ಮತ್ತು ಸರ್ಕಾರಿ ಪ್ರೌಢ ಶಾಲಾ ಶಿಕ್ಷಕರ ಕೋರಿಕೆ ವರ್ಗಾವಣೆಗಳನ್ನು ಹಮ್ಮಿಕೊಳ್ಳುವ ಸಂಬಂಧ ಅಧಿಸೂಚನೆಯಲ್ಲಿ ವರ್ಗಾವಣೆ ಪ್ರಕ್ರಿಯೆಯನ್ನು ನಿರ್ವಹಿಸಲು ಮಾರ್ಗಸೂಚಿ ಪರಿಷ್ಕೃತ ವರ್ಗಾವಣೆ ವೇಳಾಪಟ್ಟಿ–04ನ್ನು ಅನುಬಂಧ–2ರಲ್ಲಿ ಹೊರಡಿಸಿರುವ ಪ್ರಯುಕ್ತ 2024–25ನೇ ಸಾಲಿನ ಸರ್ಕಾರಿ ಪ್ರಾಥಮಿಕ ಪ್ರೌಢ ಶಾಲಾ ಸಹ ಶಿಕ್ಷಕರ ಕೋರಿಕೆ ವರ್ಗಾವಣೆ ಕೌನ್ಸಲಿಂಗ್‌ನ್ನು ನವೆಂಬರ್.4 ರಿಂದ ನವೆಂಬರ್.7 ರವರೆಗೆ ಈ ಕೆಳಗಿನ ವೇಳಾಪಟ್ಟಿಯಂತೆ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಡಯಟ್ ಬೀದರದಲ್ಲಿ ಹಮ್ಮಿಕೊಳ್ಳಲಾಗಿರುತ್ತದೆ ಎಂದು ಬೀದರ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು (ಆಡಳಿತ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ನವೆಂಬರ್.4 ರಂದು ಪೂರ್ವಾಹ್ನ 10 ಗಂಟೆಗೆ ಪ್ರಾಥಮಿಕ ಶಾಲಾ ವಿಶೇಷ ಶಿಕ್ಷಕ ವೃಂದ (1 ರಿಂದ ಮುಗಿಯುವವರೆಗೆ), ಪೂರ್ವಾಹ್ನ 10.30 ಗಂಟೆಗೆ ಪ್ರಾಥಮಿಕ ಶಾಲಾ ದೈಹಿಕ ಶಿಕ್ಷಕ ವೃಂದ (1 ರಿಂದ ಮುಗಿಯುವವರೆಗೆ), ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕ ವೃಂದ ಪೂರ್ವಾಹ್ನ 11 ಗಂಟೆಗೆ (1 ಮುಗಿಯುವವರೆಗೆ), ಪ್ರಾಥಮಿಕ ಶಾಲಾ ಸಹ ಶಿಕ್ಷಕ ವೃಂದ ಪೂರ್ವಾಹ್ನ 12.30 ಗಂಟೆಗೆ (1 ರಿಂದ 300 ರವರೆಗೆ) ನಡೆಯಲಿದೆ. ನವೆಂಬರ್.5 ರಂದು ಪೂರ್ವಾಹ್ನ 9 ಗಂಟೆಗೆ ಪ್ರಾಥಮಿಕ ಶಾಲಾ ಸಹ ಶಿಕ್ಷಕ ವೃಂದ (301 ರಿಂದ 900 ರವರೆಗೆ). ನವೆಂಬರ್.6 ರಂದು ಪೂರ್ವಾಹ್ನ 9 ಗಂಟೆಗೆ ಪ್ರಾಥಮಿಕ ಶಾಲಾ ಸಹ ಶಿಕ್ಷಕ ವೃಂದ (901 ರಿಂದ ಮುಗಿಯುವವರೆಗೆ). ಹಾಗೂ ನವೆಂಬರ್.7 ರಂದು ಪೂರ್ವಾಹ್ನ 10 ಗಂಟೆಗೆ ಪ್ರೌಢ ಶಾಲಾ ವಿಶೇಷ ಶಿಕ್ಷಕ ವೃಂದ (1 ರಿಂದ ಮುಗಿಯುವವರೆಗೆ), ಪೂರ್ವಾಹ್ನ 12 ಗಂಟೆಗೆ ಪ್ರೌಢ ಶಾಲಾ ದೈಹಿಕ ಶಿಕ್ಷಕ ವೃಂದ (1 ರಿಂದ ಮುಗಿಯುವವರೆಗೆ), ಪೂರ್ವಾಹ್ನ 1 ಗಂಟೆಗೆ ಪ್ರೌಢ ಶಾಲಾ ಸಹ ಶಿಕ್ಷಕ ವೃಂದ (1 ರಿಂದ ಮುಗಿಯುವವರೆಗೆ) ನಡೆಯಲಿವೆ. ಸರ್ಕಾರಿ ಪ್ರಾಥಮಿಕ ಪ್ರೌಢ ಶಾಲಾ ಸಹ ಶಿಕ್ಷಕರು ವರ್ಗಾವಣೆ ಕೌನ್ಸಲಿಂಗ್ ಸಂಬಂಧಿಸಿದ ಪ್ರಾಥಮಿಕ ಮತ್ತು ಪ್ರೌಢ ವಿಭಾಗದ ವಿಷಯ ನಿರ್ವಾಹಕರು, ಸಂಬಂಧಿಸಿದ ವರ್ಗಾವಣೆ ನೋಡಲ್ ಅಧಿಕಾರಿಗಳು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳು ಕಡ್ಡಾಯವಾಗಿ ಹಾಜರಾಗಬೇಕು. ಕೋರಿಕೆ ವರ್ಗಾವಣೆ ಅಂತಿಮ ಪಟ್ಟಿಯಲ್ಲಿರುವ ಶಿಕ್ಷಕರು ನಿಗದಿತ ವೇಳಾಪಟ್ಟಿಯಂತೆ ಕೌನ್ಸಲಿಂಗ್‌ನಲ್ಲಿ ಹಾಜರಾಗಿ ಸ್ಥಳ ಆಯ್ಕೆ ಮಾಡಿಕೊಳ್ಳಬೇಕು. ಒಂದು ವೇಳೆ ನಿಗದಿತ ಸಮಯಕ್ಕೆ ಹಾಜರಾಗದಿದ್ದಲ್ಲಿ ಗೈರು ಹಾಜರಿ ಎಂದು ಪರಿಗಣಿಸಲಾಗುವುದು ನಂತರದಲ್ಲಿ ಕೌನ್ಸಲಿಂಗಕ್ಕೆ ಹಾಜರಾಗಲು ಅವಕಾಶ ಇರುವುದಿಲ್ಲ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

# ನವೀಕರಣಕ್ಕೆ ಅರ್ಜಿ ಸಲ್ಲಿಸಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ.30 : ಆಯುಕ್ತರು ಶಾಲಾ ಶಿಕ್ಷಣ ಇಲಾಖೆ ಬೆಂಗಳೂರು ಅವರ ಸುತ್ತೋಲೆಯಂತೆ 2025–26ನೇ ಸಾಲಿನಲ್ಲಿ ಖಾಸಗಿ ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳ ಪ್ರಥಮ ಮಾನ್ಯತೆ ಮತ್ತು ಮಾನ್ಯತೆ ನವೀಕರಣವನ್ನು ಶಿಕ್ಷಣ ಕಾಯ್ದೆ–1983 ಮತ್ತು ಆರ್.ಟಿ.ಇ. ನಿಯಮ–2012ರಂತೆ ಇಲಾಖೆ ನಿಗದಿ ಪಡಿಸಿರುವ ತಂತ್ರಾಂಶದ ಮುಖಾಂತರ ಅರ್ಜಿ ಸಲ್ಲಿಸಲು ದಿನಾಂಕ:23–10–2025 ರಿಂದ 22–11–2025 ರವರೆಗೆ ಅವಕಾಶ ಕಲ್ಪಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಜಿಲ್ಲೆಯ ಎಲ್ಲಾ ಖಾಸಗಿ ಅನುದಾನಿತ /ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಆಡಳಿತ ಮಂಡಳಿಯವರು ಇಲಾಖೆ ನಿಗದಿ ಪಡಿಸಿರುವ ತಂತ್ರಾಂಶದ ಮುಖಾಂತರ ಆನ್–ಲೈನ್ ಅರ್ಜಿ ಸಲ್ಲಿಸಬಹುದಾಗಿದೆ. ಯಾವುದೇ ಕಾರಣಕ್ಕೂ ಭೌತಿಕ ಪ್ರಸ್ತಾವನೆ ಸಲ್ಲಿಸಲು ಅವಕಾಶ ಇರುವುದಿಲ್ಲ ಎಂದು ಬೀದರ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು (ಆಡಳಿತ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 70ನೇ ಕನ್ನಡ ರಾಜೋತ್ಸವ ರಾಜ್ಯ ಮಟ್ಟದ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ ಬೀದರ್. ಅ. 30 : ಬೀದರ ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದ ಎದುರುಗಡೆ ಶ್ರೀ ಚಂದೂರ ಮೈಸಮ್ಮ ಸಾಮಾಜಿಕ ಸಾಂಸ್ಕೃತಿ ಹಾಗೂ ಕಲಾ ಚಾರಿಟೇಬಲ್ ಟ್ರಸ್ಟ್, ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಬೀದರ ಇವರ ಸಂಯುಕ್ತಾಶ್ರಯದಲ್ಲಿ 70ನೇ ಕನ್ನಡ ರಾಜೋತ್ಸವ ಹಾಗೂ ಬೀದರ ಸಾಂಸ್ಕೃತಿಕ ಸಂಗಮ ಕಾರ್ಯಕ್ರಮವು ನವೆಂಬರ್ 1 ರಂದು ಸಂಜೆ 7:00 ಗಂಟೆಗೆ ಜರುಗಲಿದ್ದು, ದಿವ್ಯ ಸಾನಿದ್ಯ ಪೂಜ್ಯ ಜ್ಞಾನ ಸಾಗರ ಭಂತೆಜೀ, ಪೂಜ್ಯ ಶ್ರೀ ರಶೀದ್ ಮುತ್ಯಾ ಕಾರ್ಯಕ್ರಮದ ಉದ್ಘಾಟನೆ ಅರಣ್ಯ, ಪರಿಸರ ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಈಶ್ವರ ಖಂಡ್ರೆ, ಕಾರ್ಯಕ್ರಮದ ಅಧ್ಯಕ್ಷತೆ ಶ್ರೀ ಉಮೇಶ ಸ್ವಾರಳ್ಳಿಕರ್, ಘನ ಉಪಸ್ಥಿತಿ ಪೌರಾಡಳಿ ಹಾಗೂ ಹಜ್ ಸಚಿವರಾದ ಶ್ರೀ ರಹೀಂಖಾನ್, ಮುಖ್ಯ ಅತಿಥಿಗಳಾಗಿ ಲೋಕಸಭಾ ಸದಸ್ಯರಾದ ಶ್ರೀ ಸಾಗರ ಖಂಡ್ರೆ, ಔರಾದ (ಬಿ) ಶಾಸಕರಾದ ಶ್ರೀ ಪ್ರಭು ಚವ್ಹಾಣ್, ಬೀದರ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಕೆ. ಬೆಲ್ದಾಳೆ, ಹುಮನಾಬಾದ ಶಾಸಕರಾದ ಶ್ರೀ ಸಿದ್ಧಲಿಂಗಪ್ಪಾ ಎನ್. ಪಾಟೀಲ್, ಮಾಜಿ ಶಾಸಕರಾದ ಬಂಡೆಪ್ಪಾ ಖಾಶೆಂಪೂರ, ಮಾಜಿ ವಿಧಾನ ಪರಿಷತ್ತ್ ಸದಸ್ಯರಾದ ಶ್ರೀ ವಿಜಯಸಿಂಗ್, ಜೆಡಿಎಸ್ ಮುಖಂಡರಾದ ಸೂರ್ಯಕಾಂತ ನಾಗಮಾರಪಳ್ಳಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಸೋಮಶೇಖರ ಬಿರಾದಾರ, ಮಾಜಿ ಜಿಲ್ಲಾ ಪಂಚಾಯತ ಉಪಾಧ್ಯಕ್ಷರಾದ ಶ್ರೀ ಲಕ್ಷ್ಮಣರಾವ್ ಬುಳ್ಳಾ, ಮಾಜಿ ಜಿಲ್ಲಾ ಪಂಚಾತಯ ಸದಸ್ಯರಾದ ಶ್ರೀ ವಿದ್ಯಾಸಾಗರ ಶಿಂಧೆ, ಬಾಬು ಮಲ್ಕಾಪೂರೆ ಹಾಗೂ ಅತಿಥಿಗಳಾಗಿ



ಕೆ.ಎಸ್.ಆರ್.ಸಿ. ಮಾಜಿ ನಿರ್ದೇಶಕರಾದ ಶ್ರೀ ವಿಲಾಸ ಮೋರೆ, ಉದ್ಯಮಿಗಳಾದ ಶ್ರೀ ಚಂದ್ರಶೇಖರ ಹೆಬ್ಬಾಳೆ, ಬೀದರ ಉತ್ತರ ಮುಖಂಡರಾದ ಶ್ರೀ ಶಶಿಕುಮಾರ ಪೊಲೀಸ್ ಪಾಟೀಲ್ ಚೌಳಿ, ನಗರಸಭೆ ಸದಸ್ಯರಾದ ಶ್ರೀ ರಾಜಾರಾಮ ಚಿಟ್ಟಾ, ಶಶಿಕುಮಾರ ಹೊಸಳ್ಳಿ, ದಿಗಂಬರ ಮಡಿವಾಳ, ಕಾಂಗ್ರೆಸ್ ಯುವ ನಾಯಕರಾದ ಶ್ರೀ ಧನರಾಜ ಹಂಗರಗಿ, ಶಂಭುಲಿಂಗ ಕುದರೆ, ಅನೀಲ ಕಾಳೆ, ಸಂತೋಷ ಕುಮಾರ ಸೂರ್ಯವಂಶಿ, ರಾಜಕುಮಾರ ಮೋರೆ, ಬಾಬು ಅಣದೂರೆ, ಸುರೇಶ ಮೋರೆ, ಕನ್ನಡ ರಾಜೋತ್ಸವ ಹಾಗೂ ಬೀದರ ಚರಿತ್ರೆಯ ಬಗ್ಗೆ ಉಪನ್ಯಾಸ ನೀಡಲಿರುವ ಪ್ರೊ. ಶಿವಶರಣಪ್ಪಾ ಹುಗ್ಗೆ ಪಾಟೀಲ್, ಕಾಮಿಡಿ ಕಲಾವಿದ ರಘುಪ್ರೀಯ, ಸಾಹಿತಿ ಡಾ. ಸುಬ್ಬಣ್ಣ ಕರಕನಳ್ಳಿ ಹಾಗೂ ಚಲನಚಿತ್ರ ನಟರು ಹಾಗೂ ಕಿರುತೆರೆ ಕಲಾವಿದರು ಹಾಗೂ ಜಾನಪದ ಕಲಾವಿದರು, ಲಂಬಾಣಿ ಕಲಾವಿದರು, ನೃತ್ಯ ಕಲಾವಿದರು, ಗಾಯಕರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು, ತಪ್ಪದೇ ಬೀದರ ಜಿಲ್ಲೆಯ ಎಲ್ಲಾ ನಾಗರಿಕ ಬಂಧುಗಳು ಕಾರ್ಯಕ್ರಮದಲ್ಲಿ ಭಾಗವಹಿಸಲು ಕಾರ್ಯಕ್ರಮದ ಆಯೋಜಕರಾದ ಗಜ ಸೂರ್ಯ ಮನ್ನಾಏಖೇಳ್ಳಿ ರವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.



ಇಂದು ಬೆಂಗಳೂರಿನಲ್ಲಿ, ನೂತನವಾಗಿ ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿಯ ಅಧ್ಯಕ್ಷರಾಗಿ ಆಯ್ಕೆಯಾದ ಸನ್ಮಾನ್ಯ ಶ್ರೀ ಶರಣಪ್ಪ ಸಲದಾಪೂರ ಅವರು.ಕರ್ನಾಟಕ ಸರ್ಕಾರದ ಸಣ್ಣ ಕೈಗಾರಿಕೆ ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶರಣಬಸಪ್ಪಗೌಡ ದರ್ಶನಪುರ ಸಾಹೇಬರೊಂದಿಗೆ. ಕರ್ನಾಟಕ ರಾಜ್ಯದ ಮುಖ್ಯಮಂತ್ರಿಯಾದ ಸನ್ಮಾನ್ಯ ಶ್ರೀ ಸಿದ್ದರಾಮಯ್ಯ ರವರಿಗೆ ಭೇಟಿಯಾಗಿ ಬೆಟ್ಟಿಯಾಗಿ ಸನ್ಮಾನಿಸಿದರು. ಈ ಸಂದರ್ಭದಲ್ಲಿ ವಿಧಾನಸಭಾ ಸದಸ್ಯರು, ಪಕ್ಷದ ಮುಖಂಡರು ಹಾಗೂ ಗಣ್ಯರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

### ಪ್ರಜಾಪ್ರಭುತ್ವದೇಶವಾದ ಭಾರತದಲ್ಲಿ ಮತದಾನಕ್ಕೆ ವಿಶೇಷ ಪ್ರಾತಿನಿಧ್ಯ ನೀಡಲಾಗಿದೆ

## ಮಹಾನಗರ ಪಾಲಿಕೆಯಆಯುಕ್ತ ಅವಿನಾಶ ಶಿಂಧೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಅ.30–ಅತಿ–ದೊಡ್ಡ ಪ್ರಜಾಪ್ರಭುತ್ವದೇಶವಾದ ಭಾರತದಲ್ಲಿ ಮತದಾನಕ್ಕೆ ವಿಶೇಷ ಪ್ರಾತಿನಿಧ್ಯನೀಡಲಾಗಿದೆ.ಮತದಾರರು ಪ್ರಜ್ಞಾವಂತ ಅಭ್ಯರ್ಥಿಗಳನ್ನು ತಮ್ಮ ಮತವನ್ನು ಚಲಾಯಿಸುವ ಮೂಲಕ ಸಮರ್ಥ ಅಭ್ಯರ್ಥಿಗಳ ಆಯ್ಕೆ ಮಾಡುವಲ್ಲಿ ಮತದಾರರ ಪಟ್ಟಿ ಮಹತ್ವ ಪಡೆದಿದೆಎಂದು ಮಹಾನಗರ ಪಾಲಿಕೆಯಆಯುಕ್ತ ಅವಿನಾಶ ಶಿಂಧೆ ಅವರು ಹೇಳಿದರು.



ಗುರುವಾರದಂದುಭಾರತಚುನಾವಣಾಆಯೋಗ ಜಿಲ್ಲಾಡಳಿತ, ಮತ್ತುಜಿಲ್ಲಾಸ್ವೀಪ ಸಮಿತಿ,ಕಲಬುರಗಿ ಹಾಗೂ ಸರಕಾರಿಕೈಗಾರಿಕಾತರಬೇತಿ ಸಂಸ್ಥೆ (ಪುರುಷ) ನೋಡಲ್ ಸಂಸ್ಥೆ, ಕಲಬುರಗಿಇವರ ಸಹಯೋಗದಲ್ಲಿಕರ್ನಾಟಕಈಶಾನ್ಯ ಶಿಕ್ಷಕರ ಮತಕ್ಷೇತ್ರದ ಮತದಾರರ ಪಟ್ಟಿತಯಾರಿಸುವಕುರಿತಂತೆಕಾರ್ಯಾಗಾರಅಭಿಯಾನವನ್ನು "ಮತದಾನಕ್ಕಿಂತ ಇನ್ನೊಂದಿಲ್ಲ ನಾನು ಖಚಿತವಾಗಿ ಮತದಾನ ಮಾಡುವೆ"ಎಂಬ ಘೋಷಾ ವಾಕ್ಯದೊಂದಿಗೆಕರ್ನಾಟಕಜರ್ಮನ್‌ತಾಂತ್ರಿಕತರಬೇತಿ ಸಂಸ್ಥೆ (ಕೆ.ಜಿ.ಟಿ.ಟಿ.ಐ ಕಲಬುರಗಿ) ಜ್ಯೋತಿಯನ್ನುಬೆಳಗಿಸಿಕಾರ್ಯಾಗಾರಕ್ಕೆ ಚಾಲನೆಯನ್ನುನೀಡಿಮಾತನಾಡಿದರು.

ಅದಕ್ಕಾಗಿ ಮತದನಕ್ಕೆಅರ್ಹ ಪಡೆದವರುಂಯಾರೊಬ್ಬರು ಮತದಾನದಿಂದವಂಚಿತರಾಗಬಾರದು. ಅದಕ್ಕಾಗಿ ಫಾರ್ಮ್ ನಂ 19 ನ್ನು ಭರ್ತಿ ಮಾಡಿಎಲ್ಲರು ನೋಂದಾಯಿತರಾಗಬೇಕುಎಂದು ಹೇಳಿದರು.ಕರ್ನಾಟಕಈಶಾನ್ಯಕ್ಷೇತ್ರದ ಮತದಾರರ ಪಟ್ಟಿತಯಾರಿಗೆಎಲ್ಲರು ಸಹಕಾರ ನೀಡಿ ನಿರ್ದಿಷ್ಟ ಪಡಿಸಿದ ಕಾಲಮಿತಿಯಲ್ಲಿ ಶೇಕಡಾ ನೂರರಷ್ಟುಗುರಿಯನ್ನುತಲುಪಲುಎಲ್ಲಾ ಸಹಕಾರ ನೀಡಬೇಕು.

ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಬಯಸುವಅರ್ಹ ಪ್ರತಿಯೊಬ್ಬರುಅರ್ಜಿ ನಮೂನೆ 19 ರಡಿಅರ್ಜಿ ಸಲ್ಲಿಸಬೇಕು. ಶೈಕ್ಷಣಿಕಸಂಸ್ಥೆಗಳಲ್ಲಿ 2025ರ ನವೆಂಬರ್ 1ಕ್ಕೆ ಆರು ವರ್ಷಗಳ ಅವಧಿಯಲ್ಲಿಒಟ್ಟುಕನಿಷ್ಠ ಮೂರು ವರ್ಷ ಬೋಧನಾ ವೃತ್ತಿಯಲ್ಲಿ ನಿರತರಾಗಿರಬೇಕು.ಈ ಬಗ್ಗೆ ಆಯಾ ಶೈಕ್ಷಣಿಕ ಸಂಸ್ಥೆಗಳಿಂದ ಅನುಬಂಧ– 2ರಲ್ಲಿ ಪ್ರಮಾಣ ಪತ್ರ ಸಲ್ಲಿಸಬೇಕು.ಸಂಸ್ಥೆಯ ಮುಖ್ಯಸ್ಥರಿಂದದೃಢೀಕರಣ ಪತ್ರ ಸಲ್ಲಿಸಬೇಕುಎಂದು ಹೇಳಿದರು.

ನವೆಂಬರ್ 3 ರಂದು ಮಿಂಚಿನ ನೋಂದಣಿಅಭಿಯಾನನಡೆಯಲಿದೆಎಂದು ಹೇಳಿದರು.

ಸರಕಾರಿಕೈಗಾರಿಕಾತರಬೇತಿಸಂಸ್ಥೆಯ ಪ್ರಾಚಾರ್ಯರಾದಮುರಳಿದರ್ ರತ್ನಗಿರಿಯವರುಕಾರ್ಯಕ್ರಮದಅಧ್ಯಕ್ಷತೆಯನ್ನು ವಹಿಸಿ ಮಾತನಾಡಿ, ನಮ್ಮ ವ್ಯಾಪ್ತಿಯಲ್ಲಿ 12 ಸರಕಾರಿಕೈಗಾರಿಕಾ ಸಂಸ್ಥೆಗಳು, 09 ಅನುದಾನಿತ ಸಂಸ್ಥೆಗಳು ಮತ್ತು 45 ಅನುದಾನರಹಿತ ಕಾಲೇಜುಗಳಿದ್ದು. ಈಗಾಗಲೇ ಶೇಕಡಾ 50 ರಷ್ಟು ಮತದಾರರ ನೋಂದಣಿಯಾಗಿದ್ದುಇನ್ನುಇಂತಹ ಕಾರ್ಯಾಗಾರಗಳ ಮೂಲಕ ನಿರ್ದಿಷ್ಟಪಡಿಸಿದ ಶೇಕಡಾ ನೂರರಷ್ಟುಗುರಿಯನ್ನುತಲುಪಲುಎಲ್ಲರ ಸಹಕಾರಮತ್ತುಇಂತಹಕಾರ್ಯಾಗಾರಗಳ ಜಾಗೃತಿಯಿಂದಯಾರೊಬ್ಬಅರ್ಹ ಮತದಾರರು ಮತದಾನದಿಂದ ವಂಚಿತರಾಗಬಾರದುಅದಕ್ಕಾಗಿ ಪ್ರತಿಯೊಬ್ಬಅರ್ಹ ಮತದಾರರು ಫಾರ್ಮ್ ನಂಬರ್ 19 ನ್ನು ಭರ್ತಿ ಮಾಡಿ ನೋಂದಾಯಿಸಿಕೊಳ್ಳಬೇಕು ಎಂದು ಹೇಳಿದರು.

ಕಲಬುರಗಿ ವಿಭಾಗೀಯಕಛೇರಿಯಉಪನಿರ್ದೇಶಕರಾದರುಬಿನಾ ಪರ್ವಿನ್‌ಅವರು ಮತದಾರ ಪಟ್ಟಿ ನೋಂದಣಿಅಭಿಯಾನಕಾರ್ಯಗಾರದಕುರಿತುಪ್ರಸ್ತಾವಿಕ ಮಾತುಗಳನ್ನಾಡಿದರು.

ಕಾರ್ಯಕ್ರಮದಪ್ರಾರ್ಥನೆಗೀತೆಯನ್ನುಲಲಿತಾ ಪಾಟಿಲ್,ನಿರೂಪಣೆಯನ್ನುಕಿರಿಯತರಬೇತಿ ಅಧಿಕಾರಿಗಳಾದ ವಿಜಯಕುಮಾರ ಮೇಳಕುಂದಿ, ಅತಿಥಿಗಳ ಸ್ವಾಗತ ಭಾಷಣವನ್ನುತರಬೇತಿಅಧಿಕಾರಿ ಭಾರತಿ, ವಂದನಾರ್ಪಣೆಯನ್ನು ಅಣ್ಣಾರಾವ್‌ಅವರು ನೆರವೇರಿಸಿದರು.

ವೇದಿಕೆ ಮೇಲೆ ಜಿಲ್ಲಾ ಪಂಚಾಯತಿಯಉಪಕಾರ್ಯದರ್ಶಿಗಳಾದ ಲಕ್ಷಣಶೃಂಗೇರಿ,ಕಲಬುರಗಿತಾಲೂಕು ಪಂಚಾಯತ್‌ಕಾರ್ಯನಿರ್ವಾಹಕ ಅಧಿಕಾರಿಗಳಾದ ಎಂ.ಡಿ ಸಯ್ಯದ್ ಪಟೇಲ್,ಕರ್ನಾಟಕಜರ್ಮನ್‌ತಾಂತ್ರಿಕ ಸಂಸ್ಥೆಯ ನಿರ್ದೇಶಕರಾದ ಸ್ಯಾಮುವೈಲ್ ಪ್ರಶಾಂತಕುಮಾರ್,ಸರಕಾರಿಕೈಗಾರಿಕಾತರಬೇತಿ ಆಡಳಿತ ಅಧಿಕಾರಿಗಳಾದ ಸುರೇಶ ವಗ್ಗೆ,ವಿ.ಇ.ಎಸ್‌ಕೈಗಾರಿಕಾತರಬೇತಿ ಸಂಸ್ಥೆಯ ಪ್ರಾಚಾರ್ಯರಾದ ಶಕೀಲ ಅನ್ಸಾರಿ,ಸರಕಾರಿಕೈಗಾರಿಕೆ ಸಂಸ್ಥೆಯ ಪ್ರಚಾರ್ಯರು,ಉಪನ್ಯಾಸಕರು ಸಿಬ್ಬಂದಿಗಳು ಭಾಗವಹಿಸಿದ್ದರು.

## ಪತ್ರಕರ್ತರ ಸಂಘದ ಚುನಾವಣೆಯಲ್ಲಿ, ಜಿಲ್ಲಾ ಘಟಕದ ಪದಾಧಿಕಾರಿಗಳು ಅವಿರೋಧ ಆಯ್ಕೆ..!



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಕರ್ನಾಟಕಕಾರ್ಯನಿರತ ಪತ್ರಕರ್ತರ ಸಂಘದ 2025–28ನೇ ಸಾಲಿನ ಚುನಾವಣೆಯಲ್ಲಿ ಕೊಪ್ಪಳ ಜಿಲ್ಲಾ ಘಟಕದ ಎಲ್ಲಾ ಪದಾಧಿಕಾರಿಗಳು ಅವಿರೋಧವಾಗಿ ಆಯ್ಕೆ ಗೊಂಡಿದ್ದಾರೆ ಎಂದು ಚುನಾವಣಾ ಅಧಿಕಾರಿ ದುರ್ಗಪ್ಪ ತಿಪ್ಪನಾಳ ಪ್ರಕಟಿಸಿದ್ದಾರೆ.

ಕೊಪ್ಪಳ ಜಿಲ್ಲಾ ಘಟಕದ ಅಧ್ಯಕ್ಷ ಸ್ಥಾನಕ್ಕೆ ಹನುಮಂತ ಹಳ್ಳಿಕೇರಿ ಆ ವಿರೋಧ ಆಯ್ಕೆಗೊಂಡರೆ, ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ನಾಗರಾಜ್ ವೈ ಪುನರ್ ಆಯ್ಕೆಗೊಂಡಿದ್ದಾರೆ. ರಾಜ್ಯ ಕಾರ್ಯಕಾರಣಿ ಸಮಿತಿ ಸದಸ್ಯ ಸ್ಥಾನಕ್ಕೆ ವೀರಣ್ಣ ಕಳ್ಳಿಮನಿ ಅವರು ಅವಿರೋಧ ಆಯ್ಕೆಗೊಂಡಿದ್ದಾರೆ.

ಅದರಂತೆ ಇನ್ನುಳಿದ ಸ್ಥಾನಗಳಿಗೆ ಕೂಡ ಆವಿರೋಧ ಆಯ್ಕೆಗೊಂಡಿದ್ದು ಜಿಲ್ಲಾ ಉಪಾಧ್ಯಕ್ಷರಾಗಿ ಕೊಪ್ಪಳ ಕೇಂದ್ರ ಸ್ಥಾನದ ರಾಜು ಬಿ.ಆರ್, ಕಾರಟಗಿಯ ಎಚ್, ಚಾಂದಸಿಂಗ್ ರಜಪೂತ ಮತ್ತು ಗಂಗಾವತಿಯ ಪ್ರಸನ್ನದೇಸಾಯಿ ಆಯ್ಕೆಗೊಂಡಿದ್ದಾರೆ.

ಜಿಲ್ಲಾ ಕಾರ್ಯದರ್ಶಿ ಸ್ಥಾನಕ್ಕೆ ಕೊಪ್ಪಳ ಕೇಂದ್ರಸ್ಥಾನದ ರುದ್ರಗೌಡ ಪಾಟೀಲ್, ಕುಷ್ಟಗಿಯ ರವೀಂದ್ರ ಬಾಕಳೆ ಮತ್ತು ಗಂಗಾವತಿಯ ವೃಷಬೇಂದ್ರ ಸ್ವಾಮಿ ಹಿರೇಮಠ್ ಮತ್ತು ಖಜಾಂಚಿಯಾಗಿ ಕೊಪ್ಪಳದ ಫಕೀರಪ್ಪಗೋಟೂರ ಆಯ್ಕೆಗೊಂಡಿ–ದ್ದಾರೆ.

ಉಳಿದಂತೆ ಜಿಲ್ಲಾ ಕಾರ್ಯಕಾರಿ ಸಮಿತಿಯ ಒಟ್ಟು 15 ಸ್ಥಾನದಲ್ಲಿ 13 ಜನ ಸದಸ್ಯರು ಮಾತ್ರ ತಮ್ಮ ಉಮೇದುವಾರಿಕೆ ನಾಮಪತ್ರ ಸಲ್ಲಿಸಿದ್ದಾರೆ.ಇದರಲ್ಲಿ ಕೊಪ್ಪಳದ ಬ್ರಹ್ಮಾನಂದ ಬಡಿಗೇರ್, ಸಿದ್ದು ಹಿರೇಮಠ,ಶಿವಕುಮಾರ್ ಹಿರೇಮಠ, ಕುಕನೂರಿನ ಬಸವರಾಜ್ ಕೊಡ್ಲಿ, ಆಲಾವುದ್ದೀನ್ ಎಮ್ಮಿ, ಕೊಪ್ಪಳದ ಧರ್ಮಣ್ಣ ಹಟ್ಟಿ, ಗಂಗಾವತಿಯ ಜೆ.ವಸಂತ್ ಕುಮಾರ್ ,ಕೊಪ್ಪಳದ ಮೊಹಮ್ಮದ್ ಅಖಿಲ್ ಉಡೇವು, ಗಂಗಾವತಿಯ ಹನುಮೇಶ್ ಬಟಾರಿ, ಕುಷ್ಟಗಿಯ ಬಸವರಾಜ ಪಲ್ಲೇದ, ಗಂಗಾವತಿಯ ಕೆ.ಎಂ ,ಶರಣಯ್ಯ ಸ್ವಾಮಿ, ಕೊಪ್ಪಳದ ಮಂಜುನಾಥ್ ಪೂಜಾರ್ ಮತ್ತು ಮಂಜುನಾಥ್ ಗೊಂಡಬಾಳ ಅವಿರೋಧ ಆಯ್ಕೆಗೊಂಡಿದ್ದಾರೆ ಎಂದು ಜಿಲ್ಲಾ ಚುನಾವಣಾ ಅಧಿಕಾರಿ ದುರ್ಗಪ್ಪ ತಿಪ್ಪನಾಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಹಿರಿಯ ಪತ್ರಕರ್ತರುಗಳಾದ ಎಂ ಸಾಧಿಕ ಅಲಿ, ಎಚ್.ಎಸ್ ಹರೀಶ್, ಜಿ.ಎಸ್. ಗೋನಾಳ್, ಎನ್. ಎಂ. ದೊಡ್ಡಮನಿ, ಶಿವರಾಜ್ ನುಗದೋಣಿ, ಗಂಗಾವತಿಯ ವೆಂಕಟೇಶ್ ಕುಲಕರ್ಣಿ, ಕೃಷ್ಣ ವಿರಾಪುರ ,ವಿಶ್ವನಾಥ ಬೆಳಗಲ್ಮಠ, ಎಂ.ಜೆ ಶ್ರೀನಿವಾಸ, ಶಿವಪ್ಪ ನಾಯಕ್ ,ನಾಗರಾಜ್ ಇಂಗಳಗಿ, ಕಾರಟಗಿಯ ಸಿದ್ದನಗೌಡ, ಶರಣಪ್ಪ, ಕನಕಗಿರಿಯ ಮಧುಸೂದನ ರೆಡ್ಡಿ, ಸೇರಿದಂತೆ ಅನೇಕರು ಪಾಲ್ಗೊಂಡಿದ್ದು ನೂತನ ಪದಾಧಿಕಾರಿಗಳೆಲ್ಲರಿಗೂ ಸನ್ಮಾನಿಸಿ ಶುಭ ಕೋರಿದರು.

## ನ. 2 ರಂದು ಪಾದುಕಾ ದರ್ಶನ, ಗುರುಪೂಜಾ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು,ಅ.30–ಜಗದ್ಗುರು ರಾಮಾನಂದಾಚಾರ್ಯ ಶ್ರೀ ಸ್ವಾಮಿ ನರೇಂದ್ರಾಚಾರ್ಯಜಿಯವರಪಾದುಕಾ ದರ್ಶನ ಹಾಗೂ ಗುರುಪೂಜಾ ಸಮಾರಂಭ ನ. 2ರಂದು ಬೆಳಿಗ್ಗೆ 10 ಗಂಟೆಗೆ ನಗರದ ಎಲ್.ವಿ.ಡಿ ಕಾಲೇಜ್ ಎದುರಿನ ರಾಧಾಕೃಷ್ಣ ಕಲ್ಯಾಣ ಮಂಟಪದಲ್ಲಿ ಜರುಗಲಿದೆ ಎಂದು ಅಂಬಿಕಾ ರೆಡ್ಡಿ ಅವರು ಹೇಳಿದರು.



ಅವರಿಂದುನಗರದಸುದ್ದಿಗಾರರೊಂದಿಗೆ ಮಾತನಾಡುತ್ತಾ, ಬೆಳಿಗ್ಗೆ 7 ಗಂಟೆಗೆ ನಾಗರೇಶ್ವರ ದೇವಾಲಯದಿಂದ ಪಾದುಕೆಯಮೆರವಣಿಗೆಪ್ರಾರಂಭವಾಗಿ ಮಂಟಪದವರೆಗೆ ಸಾಗಲಿದೆ.ನಂತರ ಪಾದುಕಾ ದರ್ಶನ, ಗುರುಪೂಜಾ, ಆರತಿ ಸಮಾರಂಭ, ಪ್ರವಚನ, ಉಪಾಸಕ ದೀಕ್ಷೆ, ದರ್ಶನ ಹಾಗೂ ಪುಷ್ಪವೃಷ್ಟಿ ನಡೆಯಲಿದೆ ಎಂದು ಅವರು ತಿಳಿಸಿದರು.ಕಾರ್ಯಕ್ರಮವನ್ನು ಜಗದ್ಗುರು ರಾಮಾನಂದಾಚಾರ್ಯ ಸಂಪ್ರದಾಯ ಭಕ್ತ ಸೇವಾ ಮಂಡಳಿ, ರಾಯಚೂರು–ಕರ್ನಾಟಕಆಯೋಜಿಸಿದೆ.

ಅಧ್ಯಾತ್ಮಿಕ ಚಿಂತನ ಮತ್ತು ಸಂದೇಶ

ಅಂಬಿಕಾ ಯಾದವ ರೆಡ್ಡಿಯವರು ಮಾತನಾಡಿ, ಇಂದಿನ ಭೌತಿಕ ಯುಗದಲ್ಲಿ ಮನುಷ್ಯ ವಿಜ್ಞಾನದಲ್ಲಿ ಮುಂದುವರಿದಿದ್ದರೂ, ಮಾನಸಿಕ ಶಾಂತಿ ಮತ್ತು ಆಧ್ಯಾತ್ಮಿಕ ಸುಖದಿಂದ ದೂರವಾಗುತ್ತಿದ್ದಾನೆ ಎಂದು ವಿಷಾದ ವ್ಯಕ್ತಪಡಿಸಿದರು.

ಮಾನವನಿಗೆ ನಿಜವಾದ ಶಾಂತಿ, ಆತ್ಮತೃಪ್ತಿ ಮತ್ತು ಸಮಾಧಾನ ದೊರಕಬೇಕೆಂದರೆಗುರುಮಾರ್ಗವನ್ನು ಅನುಸರಿಸಬೇಕು. ಗುರುಚರಣ ಹಿಡಿದಾಗ ಮಾತ್ರ ಜೀವನದಲ್ಲಿ ಸಾತ್ವಿಕತೆ, ಶಾಂತಿ ಮತ್ತು ಪ್ರಗತಿ ಸಾಧ್ಯ" ಎಂದು ಹೇಳಿದರು.ಅವರು ಮುಂದುವರಿದು

ಗುರುಮಾರ್ಗದಲ್ಲಿರುವಾಗನವವಿಧ ಭಕ್ತಿ ಬೆಳೆಯುತ್ತದೆ. ಭಕ್ತಿಯಿಂದ ಸಕಾರಾತ್ಮಕ ಶಕ್ತಿ, ಇಚ್ಛಾಶಕ್ತಿ ಮತ್ತು ನೇತೃತ್ವದ ಗುಣಗಳು ಬೆಳೆಯುತ್ತವೆ. ಭಕ್ತಿ ಜೀವನದಲ್ಲಿ ಶಿಸ್ತು, ಸಮಯಪಾಲನೆ ಮತ್ತು ಪರೋಪಕಾರದ ಮನೋಭಾವವನ್ನು ತರಲು ಸಹಾಯಕವಾಗುತ್ತದೆ" ಎಂದರು. ಅವರು ಜಗದ್ಗುರು ಸ್ವಾಮಿ ನರೇಂದ್ರಾಚಾರ್ಯಜಿಯವರ ಸೂತ್ರವನ್ನು ಉಲ್ಲೇಖಿಸಿ

ಕಣ್ಣು ವಿಜ್ಞಾನದಲ್ಲಿಡಿ, ಮನಸ್ಸು ಅಧ್ಯಾತ್ಮದಲ್ಲಿಡಿ, ಬುದ್ಧಿ ವ್ಯವಹಾರದಲ್ಲಿಡಿ ಎಂಬ ಮಂತ್ರವನ್ನು ಅನುಸರಿಸಿದರೆ ಜೀವನದಲ್ಲಿ ಸುಖ, ಶಾಂತಿ, ಸಮಾಧಾನ ಮತ್ತು ಧೈರ್ಯ ದೊರೆಯುತ್ತದೆ ಎಂದು ಹೇಳಿದರು.ಸಾಮಾಜಿಕ ಉಪಕ್ರಮ ಪಾದುಕಾ ದರ್ಶನದ ಅಂಗವಾಗಿ ಸಾಮಾಜಿಕ ಸೇವಾ ಚಟುವಟಿಕೆಯಾಗಿ ಏಳು ಮಹಿಳೆಯರಿಗೆ ಹೋಲಿಗೆತಯಾರಿಕಾ ಯಂತ್ರಗಳನ್ನು ವಿತರಿಸಲಾಗುವುದು. ಈ ಉಪಕ್ರಮದಲ್ಲಿ ಯಾವುದೇ ಜಾತಿ–ಧರ್ಮದ ಭೇದವಿಲ್ಲದೆ ಎಲ್ಲಾ ಮಹಿಳೆಯರು ಪಾಲ್ಗೊಳ್ಳಬಹುದಾಗಿದೆ ಎಂದರು ಈ ಸಂದರ್ಭದಲ್ಲಿ ರೆಡ್ಡಿ, ತಿಮ್ಮಪ್ಪ, ಚಂದ್ರಶೇಖರ್, ಸಂತೋಷ ನಾಗಪರ್ ಶ್ರೀಧರ್ ಗೋಶಿಲೆ ಸೇರಿದಂತೆ ಉಪಸ್ಥಿತರಿದ್ದರು.



ಬಸವಕಲ್ಯಾಣ :– ತಾಲೂಕಿನ ಸಿರಗಾಪೂರ ಗ್ರಾಮದ ಶ್ರೀ ಮಹದೇವ ದೇವಸ್ಥಾನದ ಆವರಣದಲ್ಲಿ ನವಂಬರ್ 2 ರಂದು ಜರುಗಲಿರುವ ಹಾರಕೂಡ ಶ್ರೀಗಳ 63ನೇ ಜನ್ಮದಿನೋತ್ಸವದ ಪ್ರಚಾರಕ್ಕಾಗಿ ಸಿದ್ಧಪಡಿಸಿದ ರಥಕ್ಕೆ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಗುರುವಾರ ಬೆಳಗ್ಗೆ ಹಾರಕೂಡ ಶ್ರೀಮಠದ ಆವರಣದಲ್ಲಿ ಪೂಜೆ ಚಾಲನೆ ನೀಡಿದರು.ಇದೇ ಸಂದರ್ಭದಲ್ಲಿ ಬೇಲೂರಿನ ಉರಿಲಿಂಗ ಪೆದ್ದಿ ಮಠದ ಪೂಜ್ಯ ಶ್ರೀ ಪಂಚಾಕ್ಷರಿ ಸ್ವಾಮಿಗಳು, ಸಿರಗಾಪೂರ ಗ್ರಾಮದ ಪ್ರಮುಖರಾದ ರಾಜಕುಮಾರ ಬಿರಾದಾರ ಸಿರಗಾಪೂರ, ರಾಜಕುಮಾರ ಯಾಚೆ, ಮಹಾಂತಪ್ಪ ಶ್ರೀಚಂದ, ಈಶ್ವರ ಮಠಪತಿ, ಮಾರುತಿ ಸಜ್ಜನ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

## ಡಾ. ವಿಜಯಕುಮಾರ್ ಗೋಪಾಳೆಗೆ ಸರ್ವೋತ್ತಮ ಸೇವಾ ಪ್ರಶಸ್ತಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಸರಕಾರಿ ಸ್ವಾಯತ್ತ ಕಾಲೇಜಿನ ಗ್ರಂಥಪಾಲಕ ಮತ್ತು ಎನ್.ಸಿ.ಸಿ. ಅಧಿಕಾರಿಯಾಗಿ ಶೈಕ್ಷಣಿಕ ಕ್ಷೇತ್ರದಲ್ಲಿ ನೀಡಿದ ಶ್ರೇಷ್ಠ ಸೇವೆ, ಯುವಕರ ಅಭಿವೃದ್ಧಿಗೆ ನೀಡಿದ ಅಮೂಲ್ಯ ಕೊಡುಗೆಗಾಗಿ ಜಿಲ್ಲಾ ಮಟ್ಟದ "ಸರ್ವೋತ್ತಮ ಸೇವಾ ಪ್ರಶಸ್ತಿ –2025" ಗೌರವಕ್ಕೆ ಡಾ.ವಿಜಯಕುಮಾರ ಬಿ.ಗೋಪಾಳೆ ಅವರು ಆಯ್ಕೆಯಾಗಿರುವುದು ನಿಜಕ್ಕೂ ಹೆಮ್ಮೆಯ ವಿಷಯ. ಅವರ ನಿಷ್ಠೆ, ಶ್ರಮ ಮತ್ತು ಶಿಸ್ತಿನ ಮೌಲ್ಯಗಳು ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿವೆ. ಈ ಗೌರವವು ಅವರ ವೃತ್ತಿಪರತೆ, ಪ್ರಾಮಾಣಿಕತೆಮತ್ತುಸಮಾಜಸೇವೆಯ ಪ್ರತಿಬಿಂಬವಾಗಿದೆ. ಎಂದು ಪ್ರಾಶುಂಪಾಲರಾದ ಡಾ.ಸವಿತಾ ತಿವಾರಿ,ಎಲ್ಲಾನಿಕಾಯದಡೀನರು,ಎಲ್ಲಾ ವಿಭಾಗದ ಮುಖ್ಯಸ್ಥರು,ವಿದ್ಯಾರ್ಥಿಗಳು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.


### ಪೌರಾಡಳಿತ ಇಲಾಖೆ

### ಪುರಸಭೆ ಕಾರ್ಯಾಲಯ, ಹುಮನಾಬಾದ ಜಿ॥ ಬೀದರ

ಸಂಖ್ಯೆ:ಪುಸಹು/ಎಸ್‌ಬಿಎಂ–2/ಐ.ಇ.ಸಿ./ಸಿಆರ್– 2025–26 ದಿನಾಂಕ:29–10–2025

**ಸಾರ್ವಜನಿಕ ಪ್ರಕಟಣೆ**

ಉಲ್ಲೇಖ: (1) ಸರ್ಕಾರದ ಆದೇಶ ಸಂಖ್ಯೆ:ನಅಇ 229 ಸಿಎಸ್‌ಎಸ್ 2021 (2) ಬೆಂಗಳೂರು ದಿನಾಂಕ:07–03–2025

(2) ಮಾನ್ಯ ರಾಜ್ಯ ಅಭಿಯಾನ ನಿರ್ದೇಶಕರು ಸ್ವಚ್ಛ ಭಾರತ ಮಿಷನ್ (ನ) ನಗರಾಭಿವೃದ್ಧಿ ಇಲಾಖೆ ಬೆಂಗಳೂರು ರವರ ಪತ್ರ ಸಂಖ್ಯೆ:1394347/DMA/SWM/SBM-2/293/2021 ದಿನಾಂಕ:12–03–2025.

(3) ಮಾನ್ಯ ಜಿಲ್ಲಾಧಿಕಾರಿಗಳು ಬೀದರ ಇವರ ಆದೇಶ ಸಂಖ್ಯೆ:ಜಿನಕೋ/IEC/CB/CR-25/2024-25 ದಿನಾಂಕ: 19–03–2025.

* * * * *

ಮೇಲಿನ ವಿಷಯ ಹಾಗೂ ಉಲ್ಲೇಖದನ್ವಯ ಹುಮನಾಬಾದ ಪುರಸಭೆ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ ಮಿಷನ್ (ನ) 2.0 ಯೋಜನೆಯ (IEC) ಮಾಹಿತಿ ಶಿಕ್ಷಣ ಮತ್ತು ಸಂಹನೆ ಘಟಕದಡಿಯಲ್ಲಿ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಯ ಕುರಿತು ನಗರ ಸ್ಥಳೀಯ ಮಟ್ಟದಲ್ಲಿ ವಿವಿಧ ಬಗೆಯ IEC ಚಟುವಟಿಕೆಗಳನ್ನು ಕೈಗೊಳ್ಳಲು ಡೇ–ನ್ಮಲ್ ಯೋಜನೆಯ ಸ್ವ–ಸಹಾಯ ಸಂಘದ ಸದಸ್ಯರುಗಳನ್ನು ಕಮ್ಯೂನಿಟಿ ಮುಬಲೈಸರ್‌ಗಳನ್ನು (COMMUNITY MOBILIZER) ಮಾಸಿಕ ಗೌರವಧನ ಆಧಾರದ ಮೇಲೆ ತಾತ್ಕಾಲಿಕ ಸೇವೆ ಪಡೆದುಕೊಳ್ಳಲು ಉಲ್ಲೇಖಗಳಲ್ಲಿ ಸರ್ಕಾರ ಅವಕಾಶ ಕಲ್ಪಿಸಿದಂತೆ ಈ ಕೆಳಗಿನ ಅರ್ಹತೆ ಇರುವ ಅಸಕ್ತ ಮಹಿಳಾ ಅಅಭ್ಯರ್ಥಿಗಳು ತಮ್ಮ ಎಲ್ಲಾ ಅಗತ್ಯ ದಾಖಲಾತಿಯೊಂದಿಗೆ ದಿನಾಂಕ:06–11–2025ರ ಕಛೇರಿ ಅವಧಿಯೋಳಗೆ ನಿಗಧಿತ ಅರ್ಜಿ ನಮೂನೆ ಕಛೇರಿಯಿಂದ ಪಡೆದು ಮುಖ್ಯಾಧಿಕಾರಿಗಳು ಪುರಸಭೆ ಹುಮನಾಬಾದ ವಿಳಾಸಕ್ಕೆ ದ್ವಿ ಪ್ರತಿಯಲ್ಲಿ ಸಲ್ಲಿಸುವುದು.

| | | |
|---|---|---|
| 1 | COMMUNITY MOBILIZER ಹುದ್ದೆಗಳ ಸಂಖ್ಯೆ | 6 |
| 2 | ಮಾಸಿಕ ಗೌರವಧನ ಪ್ರತಿ ಅಭ್ಯರ್ಥಿಗೆ | ರೂ. 17420/– |
| 3 | ವಿದ್ಯಾರ್ಹತೆ | ಕನಿಷ್ಠ SSLC/10th Pass ಕನ್ನಡ ಭಾಷೆ ಓದು ಬರಹ ಹೊಂದಿದವರು ಅರ್ಜಿ ಸಲ್ಲಿಸಬಹುದು. |
| 4 | ಅವಧಿ | 3 ವರ್ಷ ಯೋಜನೆ ಜಾರಿ ಇರುವವರೆಗೆ |
| 5 | ಅರ್ಹತೆ ಹಾಗೂ ಕಾರ್ಯ ಸಂಕ್ಷಿಪ್ತ ವಿವರ | 18–45 ವರ್ಷ ವಯೋಮಾನ ಮಹಿಳೆಯಾಗಿರಬೇಕು ಡೇ–ನ್ಮಲ್ ಯೋಜನೆಯ ಸ್ವ–ಸಹಾಯ ಸಂಘದ ಸಕ್ರೀಯ ಸದಸ್ಯರಾಗಿರಬೇಕು. Computer Literacy OF MS Office & MS Excel in Kannada OR English ನಗರ ಸ್ವಚ್ಛತೆ ಮತ್ತು ನೈರ್ಮಲ್ಯದ ಕುರಿತು ಘನ ತ್ಯಾಜ್ಯ ವಸ್ತುಗಳ ಕುರಿತು ದ್ರವ ಮತ್ತು ಒಣ ತ್ಯಾಜ್ಯ ನಿರ್ವಹಣೆ, ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ, ಬಳಸಿದ ನೀರು ನಿರ್ವಹಣೆ ಹಾಗೂ ಸ್ವಚ್ಛ ಸರ್ವೇಕ್ಷಣೆ, ODF, ODF++, WATER+, (STAR RATING) ಇವುಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು IEC ಚಟುವಟಿಕೆಗಳನ್ನು ಕೈಗೊಳ್ಳಲು ಆಸಕ್ತಿ ಹೊಂದಿರಬೇಕು. ಹುಮನಾಬಾದ ಪುರಸಭೆಯ ಎಲ್ಲಾ ವಾರ್ಡ್‌ಗಳ ಕ್ಷೇತ್ರ ಪರಿಚಯ ಹೊಂದಿರಬೇಕು. ಮುಂಜಾನೆ ಪಟ್ಟಣದ ನೈರ್ಮಲ್ಯ ಕಾರ್ಯ ನಡೆಯುವ ಅವಧಿಯಲ್ಲಿ ತ್ಯಾಜ್ಯ ನಿರ್ವಹಣೆ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯದಲ್ಲಿ ತೊಡಗುವುದು. ಪಟ್ಟಣದ ಘನ ಹಾಗೂ ದ್ರವ ತ್ಯಾಜ್ಯದ ನಿರ್ವಹಣೆಯಲ್ಲಿ ಸಕಾರದ ನಿರ್ದೇಶನ ಹಾಗೂ ಮೇಲಾಧಿಕಾರಿಗಳ ನಿರ್ದೇಶನ ಪ್ರಕಾರ ಕಾರ್ಯನಿರ್ವಹಿಸುವುದು ಅವಶ್ಯವಿರುತ್ತದೆ. |
| 6 | ನಿಗದಿತ ನಮೂನೆಯಲ್ಲಿ ಅರ್ಜಿಯೊಂದಿಗೆ ದ್ವೀ ಪ್ರತಿಯಲ್ಲಿ ಅರ್ಜಿಗೆ ಲಗತ್ತಿಸುವ ದಾಖಲೆಗಳು | 1) ಇತ್ತೀಚಿನ 4 ಭಾವಚಿತ್ರ (PASS PORT SIZE PHOTO) |
| | | 2) ಆಧಾರ್ ಕಾರ್ಡ್, ಮತದಾರರ ಗುರುತಿನ ಚೀಟಿ, ಪಡಿತರ ಚೀಟಿ, ಪ್ಯಾನ್ ಕಾರ್ಡ್,<br>3) ವಿದ್ಯಾರ್ಹತೆ ದಾಖಲೆ ಅಂಕಪಟ್ಟಿಗಳು, ಳಥ.<br>4) ಕಂಪ್ಯೂಟರ್ ತರಬೇತಿ ಹೊಂದಿದ ಬಗ್ಗೆ ಪ್ರಮಾಣ ಪತ್ರ.<br>5) ಡೇ–ನಲ್ಮ್ ಯೋಜನೆಯ ಸ್ವ–ಸಹಾಯ ಸಂಘದ ಸದಸ್ಯರಾಗಿರುವ ಬಗ್ಗೆ ಸಂಘದ ಪ್ರಮಾಣ ಪತ್ರ)<br>6) ರಾಷ್ಟ್ರೀಕೃತ ಬ್ಯಾಂಕ್ ಪಾಸ್‌ಬುಕ್ ಪ್ರತಿ.<br>7) ಅನುಭವ ಪ್ರಮಾಣ ಪತ್ರ. |

ಈ ಮೇಲಿನಂತೆ ಸಾರ್ವಜನಿಕ ಪ್ರಕಟಣೆ ಹೊರಡಿಸಲಾಗಿದ್ದು, ಆಸಕ್ತಿ ಹಾಗೂ ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಬಹುದಾಗಿದ್ದು, ಸಲ್ಲಿಕೆಯಾದ ಅರ್ಜಿಗಳಲ್ಲಿ ಅರ್ಹ ಅಭ್ಯರ್ಥಿಗಳ ಪಟ್ಟಿ ಹಾಗೂ ದಾಖಲಾತಿಯನ್ನು ಜಿಲ್ಲಾ ಮಟ್ಟದ ಕಛೇರಿ ಜಿಲ್ಲಾ ನಗರಾಭಿವೃದ್ಧಿ ಕೋಶ ಬೀದರ ಇವರಲ್ಲಿ ಸಲ್ಲಿಸಲಾಗುವುದು ಅಂತಿಮ ಅಭ್ಯರ್ಥಿಯ ಆಯ್ಕೆಯನ್ನು ಜಿಲ್ಲಾ ಮಟ್ಟದಲ್ಲಿ ಅಂತಿಮಗೊಳಿಸಲಾಗುವುದು ಆಯ್ಕೆಯಾದ ಅಭ್ಯರ್ಥಿಗಳಿಗೆ ಷರತ್ತು ಹಾಗೂ ನಿಂಬಂಧನೆ ಪ್ರಕಾರ ಸೇವೆ ಪಡೆಯಲು ನಿಯಮಾನುಸಾರ ಆದೇಶ ನೀಡಲು ಕ್ರಮ ವಹಿಸಲಾಗುವುದು ತಿಳಿಯಿರಿ.

ಸಹಿ/–
(ಪಾರ್ವತಿ ಗಂಡ ಮಡಿವಾಳಪ್ಪ)
ಅಧ್ಯಕ್ಷರು
ಪುರಸಭೆ ಹುಮನಾಬಾದ

ಸಹಿ/–
(ವನಿತಾಬಾಯಿ)
ಮುಖ್ಯಾಧಿಕಾರಿಗಳು
ಪುರಸಭೆ ಹುಮನಾಬಾದ


## ಹೋರಾಟಗಾರರ ವಿರುದ್ಧ ಸುಳ್ಳು ಪ್ರಕರಣ ದಾಖಲು ಸರಕಾರ ನಡೆ ಖಂಡನೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು,ಅ.30–ಮೈಸೂರು ಜಿಲ್ಲೆಯ ಟಿ.ನರಸೀಪುರ ವಿಧಾನಸಭಾ ಕ್ಷೇತ್ರದ ಸಮುದಾಯದ ದೃವನೇತಾರ ದಿ:ಎನ್ ರಾಚಯ್ಯನವರ ಸಮಾಧಿ ಸ್ಥಳದಲ್ಲಿ ತಂಡದ ರೂವಾರಿ ಬಿ.ಆರ್ ಭಾಸ್ಕರ್ ಪ್ರಸಾದ ಇವರ ನಾಯಕತ್ವದಲ್ಲಿ ನಡೆದ ಸಮಾವೇಶದಲ್ಲಿ ಸರಕಾರ ಉದ್ದೇಶಪೂರ್ವಕವಾಗಿಒಳಮೀಸಲಾತಿ ಹೋರಾಟಗಾರರ ಮೇಲೆ ಸುಳ್ಳು ಪ್ರಕರಣ ದಾಖಲಿಸಲಾಗಿದೆ ಎಂದು ಒಳಮೀಸಲಾತಿ ಹೋರಾಟ ಸಮತಿ ಮುಖಂಡರು ಎಸ್.ನರಸಿಂಹಲು ಅವರು ಹೇಳಿದರು. ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡುತ್ತಾ,ಸುಮಾರು 6 ಸಾವಿರ ಜನರು ಸಮಾವೇಶದಲ್ಲಿ ಪಾಲ್ಗೊಂಡು ಒಳಮೀಸಲಾತಿ ಜಾರಿ ಸರಕಾರದ ನಿರ್ಲಕ್ಷ ಧೋರಣೆ ಖಂಡಿಸಿ ಪ್ರತಿಭಟನೆ ನಡೆಸಲಾಯಿತು. ಸರಕಾರ ಒಳಮೀಸಲಾತಿ ಮೀನಾಮೇಷ ಎನಿಸುತ್ತಿದೆ ಎಂದು ಸರಕಾರ ನಡೆಯನ್ನು ತೀವ್ರವಾಗಿ ಖಂಡಿಸಿದರು. ಸಮಾಜ ಕಲ್ಯಾಣ ಸಚಿವರು ಹೆಚ್.ಸಿ.ಮಹಾದೇವಪ್ಪ ರವರು ಹೋರಾಟಗಾರರು ಯಾರು ಬೀದಿಗಳಿದು ಹೋರಾಟ ಮಾಡುವುದು ಬೇಡ ಕೂತು ಸಮಸ್ಯೆ ಬಗೆಹರಿಸುವುದು ಸೂಕ್ತ ಎಂದರು.

ನಾವು ಸಮಾಜ ಕಲ್ಯಾಣ ಸಚಿವರ ಹತ್ತಿರ ಮಾತನಾಡಲು ನಮ್ಮ ನಿಯೋಗವನ್ನು ಕರೆದುಕೊಂಡು ಹೋಗಿಲ್ಲ ಎಂದು ಹೇಳಿದರು. ವಕೀಲರು ಮರಡೀಪುರ ರವಿಕುಮಾರ ಮತ್ತು ಗೋಪಾಲಪುರ ಮಂಜುನಾಥ ಇವರು ಪ್ರತಿಭಟನೆಯಲ್ಲಿ ಭಾಗವಹಿಸಿಲ್ಲ ಆದರೂ ಇವರ ಮೇಲೆ ಕೂಡ ಪ್ರಕರಣ ದಾಖಲಾಗಿದೆ.ಇದು ಸುಳ್ಳು ದೂರು ಸತ್ಯಕ್ಕೆ ದೂರವಾದದ್ದು ಮತ್ತು ಮರುದಿನ ಬೆಂಗಳೂರಿನ ವಿಧಾನ ಸೌದ ಪೋಲಿಸರು ನಮ್ಮನ್ನು ಬಂದಿಸಿ ನಮ್ಮ ಮೇಲೆ ಗುಂಡಾ ಪ್ರಕರಣ ದಾಖಲು ಮಾಡಿರುತ್ತಾರೆ ಏನು ಮಾಡುತ್ತಿದೆ ಸರ್ಕರ ಯಾವ ಕಡೆ ಸಾಗುತ್ತಿದೆ ಸರ್ಕಾರ ಸರ್ಕಾರದ ನಿಲುವೇನು ನ್ಯಾಯ ಕೇಳಲು ಹೋದರೆ ಅಕ್ರಮವಾಗಿ ಬಂದಿಸಿ ಸುಳ್ಳು ಪ್ರಕರಣ ದಾಖಲಿಸಿ ಕಾಂಗ್ರೆಸ್ ನಿಜಾ ಬಣ್ಣ ಪ್ರದರ್ಶನ ಮಾಡುತ್ತಿದೆ ನಾವೇನು ಬಯೋತ್ಪಾದಕರೇ. ಸರಕಾರ ಈ ಎಲ್ಲ ಸುಳ್ಳು ಕೇಸ್ ವಾಪಸ್ ತೆಗುದುಕೊಳ್ಳಬೇಕು ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ತಕ್ಕ ಪಾಠ ಕಲಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.ಈ ಸಂದರ್ಭದಲ್ಲಿ ಹನುಮೇಶ್ ಆರೋಲಿ ಚಿದಾನಂದಪ್ಪ ರಾಮಕೃಷ್ಣ ಪ್ರಸಾದ್ ಆಂಜನೇಯ ಬಾಪುರ ಇದ್ದರು.


## ಸರ್ಕಾರ ಹತ್ತಿ ಕರಿದಿ ಕೇಂದ್ರ ಪ್ರಾರಂಭಿಸಿದು ಕರ್ನಾಟಕ ಪ್ರಾಂತ ರೈತ ಸಂಘ ಹರ್ಷ ಭೀಮರಾಯ ಪೂಜಾರಿ.

ಮಲ್ಲಮ್ಮ ನುಡಿ ವಾರ್ತೆ



ಶಹಾಪುರ ನೋಂದಣಿ ಅಕ್ಟೋಬರ್ 31 ಕೊನೆಯ ದಿನಾಂಕ ಎಂದು ಪ್ರಕಟಣೆ ಮಾಡಿರುವುದು ಕೇಂದ್ರ ಮತ್ತು ರಾಜ್ಯ ಸರ್ಕಾರ ರೈತರಿಗೆ ಮೂಗಿಗೆ ತುಪ್ಪ ವರಿಸುವ ಕೆಲಸ ಮಾಡುತ್ತಿದೆ ತಾಲೂಕಿನಾದ್ಯಂತ ದಿನನಿತ್ಯ ಮಳೆಯಾಗುವುದರಿಂದ ಮತ್ತು ಕಾರ್ಮಿಕರ ಕೊರತೆಯಿಂದ ರೈತರ ಫಸಲು ಇನ್ನೂ ಹೊಲಗಳಲ್ಲಿ ಹಾಗೆ ಇದೆ ಅದಕ್ಕಾಗಿ ತಕ್ಷಣ ಮಾನ್ಯ ಜಿಲ್ಲಾಧಿಕಾರಿಗಳು ಯಾದಗಿರಿ ಜಿಲ್ಲೆಯ ಯಾದಗಿರಿ ಮಧ್ಯಪ್ರವೇಶ ಮಾಡಿ ಕಪಾಸ್ ಕಿಸಾನ್ ಯಾಪ್ ನಲ್ಲಿ ನೋಂದಣಿ ಮಾಡಿಸಿಕೊಳ್ಳಲು ಡಿಸೆಂಬರ್ 20ರವರೆಗೆ ವಿಸ್ತರಿಸಲು ಕರ್ನಾಟಕ ಪ್ರಾಂತ ರೈತ ಸಂಘ ತಾಲೂಕ ಸಮಿತಿ ಮನವಿ ಮಾಡಿಕೊಳ್ಳುತ್ತದೆ ದಿನಾಂಕವನ್ನು ವಿಸ್ತರಣೆ ಮಾಡದೇ ಹೋದಲ್ಲಿ ಕರ್ನಾಟಕ ಪ್ರಾಂತ ರೈತ ಸಂಘ ತಾಲೂಕ ಸಮಿತಿ ನೇತೃತ್ವದಲ್ಲಿ ಬೃಹತ್ ಹೋರಾಟ ನಡೆಸಬೇಕಾಗುತ್ತದೆ ಎಂದು ಕರ್ನಾಟಕ ಪ್ರಾಂತ ರೈತ ಸಂಘ ಜಿಲ್ಲಾ ಸಂಘಟನಾ ಕಾರ್ಯದರ್ಶಿ , ಭೀಮರಾಯ ಪೂಜಾರಿ ಆಗ್ರಹಿಸಿದರು.

## ಜಿಲ್ಲಾಡಳಿತದಿಂದ ಒನಕೆ ಓಬವ್ವ ಜಯಂತಿ ಅರ್ಥಪೂರ್ಣ ಆಚರಣೆ: ಎಡಿಸಿ ಮಹಮ್ಮದ್ ಝುಬೇರ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.30–ಸರ್ಕಾರದ ನಿರ್ದೇಶನದಂತೆ ಜಿಲ್ಲಾಡಳಿತದಿಂದ ವೀರವನಿತೆ ಒನಕೆ ಓಬವ್ವ ಜಯಂತಿ ಕಾರ್ಯಕ್ರಮವನ್ನು ನ.11 ರಂದು ಜಿಲ್ಲಾ ಕೇಂದ್ರದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್.ಎನ್ ಝುಬೇರ್ ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ವಿಡೀಯೋ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಿದ್ದ ಒನಕೆ ಓಬವ್ವ ಜಯಂತಿ ಕಾರ್ಯಕ್ರಮದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನ.11 ರಂದು ಬೆಳಿಗ್ಗೆ 11 ಗಂ–ಟೆಗೆ ಸಾಂಸ್ಕೃತಿಕ ಸಮುಚ್ಚಯದ ಹೊಂಗಿರಣ ಸಭಾಂಗಣದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಎಲ್ಲಾ ಅಗತ್ಯ ಸಿದ್ದತೆ ಮಾಡಿಕೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ವೀರವನಿತೆ ಒನಕೆ ಓಬವ್ವ ಜಯಂತಿ ಕಾರ್ಯಕ್ರಮವನ್ನು ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಜಯಂತಿ ಆಚರಿಸಬೇಕು ಎಂದು ನಿರ್ದೇಶನ ನೀಡಿದ ಅವರು, ಜಯಂತಿ ಕಾರ್ಯಕ್ರಮಕ್ಕೆ ಎಲ್ಲರೂ ತಪ್ಪದೇ ಸ್ವ–ಇಚ್ಛೆಯಿಂದ ಪಾಲ್ಗೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವೀರವನಿತೆ ಒನಕೆ ಓಬವ್ವ ಅವರ ಜೀವನ ಯಶೋಗಾಥೆ ತಿಳಿಸಲು ವಿಶೇಷ ಉಪನ್ಯಾಸಕರಾಗಿ ಸಾಹಿತಿ ಡಿ.ವೆಂಕಮ್ಮ ಅವರನ್ನು ಸಭೆಯಲ್ಲಿ ಆಯ್ಕೆ ಮಾಡಲಾಯಿತು.

ಕಾರ್ಯಕ್ರಮಲ್ಲಿ ವಚನಸಂಗೀತ, ಲಘು ಉಪಹಾರ, ಕುಡಿಯುವ ನೀರಿನ ವ್ಯವಸ್ಥೆ ಕೈಗೊಳ್ಳುವಂತೆ ಸೂಚಿಸಿದರು. ಕಾಲೇಜು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಭಾಗವಹಿಸುವಂತೆ ಡಿಡಿಪಿಐ, ಡಿಡಿಪಿಯು ಅಧಿಕಾರಿಗಳು ಕ್ರಮವಹಿಸಬೇಕು ಎಂದು ತಿಳಿಸಿದರು.

ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ವ್ಯಕ್ತಿಗಳು ಹಾಗೂ ವಿದ್ಯಾರ್ಥಿಗಳನ್ನು ಕಾರ್ಯಕ್ರಮದಲ್ಲಿ ಸನ್ಮಾನಿಸಲು ಅರ್ಹರನ್ನು ಆಯ್ಕೆ ಮಾಡಿ ಪಟ್ಟಿ ನೀಡಬೇಕು. ಶಿಷ್ಟಾಚಾರದನ್ವಯ ಆಹ್ವಾನ ಪತ್ರಿಕೆ ಮುದ್ರಿಸಿ, ಗಣ್ಯರನ್ನು ಆಹ್ವಾನಿಸಬೇಕು ಎಂದರು.

ಈ ವೇಳೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಇತರರು ಉಪಸ್ಥಿತರಿದ್ದರು.

# ರಾಜ್ಯಮಟ್ಟದ ಯುವಜನೋತ್ಸವಕ್ಕೆ ಸಿದ್ಧತೆ ವ್ಯವಸ್ಥಿತವಾಗಿ ಮಾಡಿ:ಜಿಲ್ಲಾಧಿಕಾರಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಅ:30: ಬರುವ ಡಿಸೆಂಬರ್ ಮಾಹೆಯ ಮೊದಲ ವಾರದಲ್ಲಿ ಆಯೋಜಿಸುವ ರಾಜ್ಯ ಮಟ್ಟದ ಯುವಜನೋತ್ಸವ ಕಾರ್ಯಕ್ರಮಕ್ಕಾಗಿ ಸಿದ್ದತೆಗಳನ್ನು ಈಗಿನಿಂದಲೇ ಆರಂಭಿಸುವಂತೆ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ರಾಜ್ಯ ಮಟ್ಟದ ಯುವಜನೋತ್ಸವ ಆಯೋಜನೆ ಕುರಿತು ಪೂರ್ವಭಾವಿ ಸಿದ್ಧತಾ ಸಭೆ ನಡೆಸಿ ಅವರು ಮಾತನಾಡಿದರು.

ಈಗಾಗಲೇ ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು,ತಮಗೆ ನೀಡಿದ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿಭಾಯಿಸಬೇಕು.ಮುಖ್ಯಕಾರ್ಯಕ್ರಮಕ್ಕೆ ಮಾನ್ಯ ಮುಖ್ಯಮಂತ್ರಿಗಳು ಆಗಮಿಸುವುದರಿಂದ ಶಿಷ್ಟಾಚಾರದಂತೆ ಎಲ್ಲವ್ಯವಸ್ಥೆಗಳನ್ನುಮಾಡಿಕೊಳ್ಳಬೇಕು ಎಂದು ಸೂಚಿಸಿದರು.

ವಿಶೇಷವಾಗಿ ಈ ಕಾರ್ಯಕ್ರಮಕ್ಕೆ ಆಗಮಿಸುವ ಗಣ್ಯರು ಹಾಗೂ ಅಧಿಕಾರಿಗಳಿಗೆಮತ್ತುವಿದ್ಯಾರ್ಥಿಗಳಿಗೆ ವಸತಿಸೌಲಭ್ಯಅಚ್ಚುಕಟ್ಟಾಗಿಮಾಡಬೇಕು. ಊಟೋಪಚಾರ,ಸಾರಿಗೆ ವ್ಯವಸ್ಥೆ, ಕಾರ್ಯಕ್ರಮದ ವೇದಿಕೆ ಸಿದ್ದತೆ, ವಿದ್ಯುತ್,ವಿವಿಧ ಇನ್ನಿತರ ಆರೇಳು ಕಡೆ ವೇದಿಕೆ ಕಾರ್ಯಕ್ರಮಗಳಿಗೆ ಸಿದ್ಧತೆ ಮಾಡಿಕೊಳ್ಳಬೇಕು. ಸುರಕ್ಷತಾ ಕ್ರಮಗಳನ್ನು ವ್ಯವಸ್ಥಿತವಾಗಿ ನಿಭಾಯಿಸುವಂತೆ ಅವರು ಸೂಚನೆ ನೀಡಿದರು.ಆಯಾ ಸಮಿತಿಗಳ ಮೂಲಕ ಯೋಜನಾಬದ್ಧವಾಗಿ ಕಾರ್ಯನಿರ್ವಹಿಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಬೇಕು.ಅಧಿಕಾರಿಗಳು ಪರಸ್ಪರ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು. ನುರಿತ ವೈದ್ಯರೊಂದಿಗೆ ಅಂಬ್ಯುಲೆನ್ಸ್,ಅಗ್ನಿ ಶಾಮಕ ವಾಹನ, ಸೂಕ್ತ ಪೋಲಿಸ್ ಬಂದೋಬಸ್ತ್,

ಇನ್ನಿತರ ಸುರಕ್ಷತಾ ಕ್ರಮಗಳು, ಜಿಲ್ಲಾ ಕ್ರೀಡಾಂಗಣದಲ್ಲಿನ ಸಿದ್ಧತೆಗಳು, ವೇದಿಕೆ,ಆಸನಗಳ ಸಿದ್ಧತೆ ಬಗ್ಗೆಯೂ ಕ್ರಮ ಕೈಗೊಳ್ಳುವಂತೆ ಅವರು ಸೂಚಿಸಿದರು.ಸಭೆಯಲ್ಲಿ ಯುವಜನ ಸೇವಾ ಹಾಗೂ ಕ್ರೀಡಾಧಿಕಾರಿ ರಾಜು ಬಾವಿಹಳ್ಳಿ ಸ್ವಾಗತಿಸಿ ಅವಶ್ಯಕ ಮಾಹಿತಿ ನೀಡಿದರು.ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ,ಎಸ್.ಪಿ ಪೃಥ್ವಿಕ್ ಶಂಕರ್, ಅಪರ ಜಿಲ್ಲಾಧಿಕಾರಿ ರಮೇಶ ಕೋಲಾರ್, ಸಹಾಯಕ ಆಯುಕ್ತ ಶ್ರೀಧರ್ ಗೋಟುರ್,ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ವಿಜಯಕುಮಾರ್ ಮಡ್ಡೆ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಅಕ್ರಮ ಕೃತ್ಯಗಳಲ್ಲಿ ತೊಡಗಿದವರ ಪತ್ತೆಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಅ 30 : ಸಾಮಾಜಿಕ ಜಾಲತಾಣವಾದ ವಾಟ್ಸ್ ಆಪ್ ಮೂಲಕ ನಕಲಿ ಮೊಬೈಲ್ ಸಂಖ್ಯೆಯಿಂದ ಜಿಲ್ಲಾಧಿಕಾರಿಯ ಹೆಸರು ಮತ್ತು ಭಾವ ಚಿತ್ರವನ್ನು ಬಳಸಿ ಅಧಿಕಾರಿಗಳಿಂದ ಹಣ ಕೇಳಿರುವವರ ವಿರುದ್ಧ ಕಾನೂನು ಕ್ರಮಗೊಳ್ಳಲಾಗುತ್ತಿದೆ ಎಂದು ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ತಿಳಿಸಿದ್ದಾರೆ.

ಸಾಮಾಜಿಕ ಜಾಲತಾಣವಾದ ವಾಟ್ಸ್ ಆಪ್ ಡಿಪಿಯಲ್ಲಿ ಜಿಲ್ಲಾಧಿಕಾರಿಗಳ ಹೆಸರು ಮತ್ತು ಫೋಟೋ ಬಳಸಿ ಬೇರೆ ನಕಲಿ ಮೊಬೈಲ್ ಸಂಖ್ಯೆ 84922021308, 84886912413 ಮೂಲಕ ನಕಲಿ ಖಾತೆಗಳನ್ನು ರಚಿಸಿ ಜಿಲ್ಲೆಯಲ್ಲಿ ಇರುವ ವಿವಿಧ ಸರ್ಕಾರಿ ಅಧಿಕಾರಿಗಳು, ನೌಕರರಿಗೆ ವಾಟ್ಸ್ ಆಪ್ ಮೂಲಕ ಸಂದೇಶವನ್ನು ಕಳುಹಿಸುತ್ತಾ, ನಂತರ ಹಣವನ್ನು ವರ್ಗಾಯಿಸುವಂತೆ ತಿಳಿಸುತ್ತಿದ್ದು, ಈ ಮಾಹಿತಿ ಕುರಿತು ವಿವಿಧ ಅಧಿಕಾರಿಗಳು ದೂರವಾಣಿ ಮೂಲಕ ತಿಳಿಸಿರುವುದು ಕಂಡುಬಂದಿರುತ್ತದೆ.

ಜಿಲ್ಲೆಯಲ್ಲಿನ ಸರ್ಕಾರಿ ಅಧಿಕಾರಿಗಳು, ನೌಕರರಿಗೆ ಮೋಸದ ಉದ್ದೇಶದಿಂದ ನಕಲಿ ವಾಟ್ಸ್ ಆಪ್ ಮೊಬೈಲ್ ಸಂಖ್ಯೆಯ ಮೂಲಕ ಹಣವನ್ನು ವರ್ಗಾಯಿಸುವಂತೆ ಕೇಳುತ್ತಿರುವುದರಿಂದ ಜಿಲ್ಲಾಡಳಿತ ಗೌರವಕ್ಕೆ ಧಕ್ಕೆ ತರುತ್ತಿದ್ದೆ, ಆದ್ದರಿಂದ ಇಂತಹ ಅಕ್ರಮ ಕೃತ್ಯಗಳಲ್ಲಿ ತೊಡಗಿರುವುವರನ್ನು ಪತ್ತೆ ಹಚ್ಚಿ ಭಾರತೀಯ ದಂಡ ಸಂಹಿತ ಹಾಗೂ ಮಾಹಿತಿ ತಂತ್ರ ಜ್ಞಾನ ಕಾಯ್ದೆ ಅಡಿಯಲ್ಲಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವರ್ಗಾವಣೆ ಅಂಕಪಟ್ಟಿ ಪತ್ತೆಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.30: ತಾಲೂಕಿನ ಭೋಪ್ಪಳಗೇಡ್ ಗ್ರಾಮದನಿವಾಸಿಯಾದ ಅಜಯ ತಂದೆ ರಮೇಶ ಅವರು ದಿನಾಂಕ:20/10/25ರಂದು ಬೆಳಕುಣಿ (ಬಿ) ಬಸ್ಸ ನಿಲ್ದಾಣದಲ್ಲಿ

ತಮ್ಮ ಪಿ.ಯು. ಸಿ ವರ್ಗಾವಣೆ ಪತ್ರ (ಟಿ.ಸಿ) ಮತ್ತು ಅಂಕ ಪಟ್ಟಿ ಕಳೆದು ಕೊಂಡಿರು

ಬಗ್ಗೆ ದಿನಾಂಕ:28/10/25ರಂದು ಪೊಲೀಸ ಠಾಣೆಯಲ್ಲಿ ದೂರು ನಿಡಿರುತ್ತಾನೆ.

ಸಾರ್ವಜನಿಕರಿಗೆ ತನ್ನ ಪಿ.ಯು.ಸಿ ವರ್ಗಾವಣೆ ಪತ್ರ (ಟಿ.ಸಿ) 1962334 ಮತ್ತು ಅಂಕ ಪಟ್ಟಿ ರೆಜಿಸ್ಟರ್ ನಂಬರ್ 216812. ಹೊಂದಿರುವ ದಾಖಲಾತಿ

ಸಿಕ್ಕರೆ ಮೊಬೈಲ್ ನಂಬರ್ 7022127549ಗೆ ಮಾಹಿತಿ ನೀಡುವಂತೆ ಪ್ರಕಟಣೆಗೆ ತಿಳಿಸಿದ್ದಾರೆ.

# ರಾಜಕುಮಾರ ತರಿ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಬೀದರ್. ಅ. 30 : ಚಿಟಗುಪ್ಪ ತಾಲ್ಲೂಕಿನಮೀನಕೇರಾದರಾಜಕುಮಾರ ತರಿ ಅವರನ್ನು ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ ನಿಯಮಿತದ ನಿರ್ದೇಶಕರಾಗಿ ನೇಮಕ ಮಾಡಲಾಗಿದೆ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ 1 ಆರ್. ಲತಾ ಮುಂದಿನ ಆದೇಶದ ವರೆಗೆ ಈ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

47 ವರ್ಷದ ರಾಜಕುಮಾರ ತರಿ ಒಂದೂವರೆ ದಶಕದಿಂದ ಕಾಂಗ್ರೆಸ್ ಪಕ್ಷದ ಸಂಘಟನಾತ್ಮಕ ಚಟುವಟಿಕೆಗಳಲ್ಲಿತೊಡಗಿಸಿಕೊಂಡಿದ್ದಾರೆ. ಸದ್ಯ ಕಾಂಗ್ರೆಸ್ ಜಿಲ್ಲಾ ಘಟಕದ ಕಾರ್ಯದರ್ಶಿಯಾಗಿದ್ದಾರೆ.

ತಮ್ಮನ್ನುನಿಗಮದನಿರ್ದೇಶಕರಾಗಿ ನೇಮಕ ಮಾಡಿದ್ದಕ್ಕೆಮುಖ್ಯಮಂತ್ರಿ ಸಿದ್ದರಾಮಯ್ಯ, ಅರಣ್ಯ ಸಚಿವ ಈಶ್ವರ ಖಂಡ್ರೆ, ನಿಗಮದ ಅಧ್ಯಕ್ಷ ವಿಜಯಾನಂದ ಕಾಶಪ್ಪನವರ್, ಮಾಜಿ ಶಾಸಕ ಅಶೋಕ ಖೇಣಿ ಹಾಗೂ ಪಕ್ಷದ ಮುಖಂಡರಿಗೆ ಅವರು ಕೃತಜ್ಞತೆ ತಿಳಿಸಿದ್ದಾರೆ.

# ಅಕ್ರಮ ಹತ್ತಿ ಖರೀದಿ ಕೇಂದ್ರಗಳಿಗೆ ಕಡಿವಾಣ ಹಾಕಿ: ಪ್ರದೀಪ್ ಅಣಬಿ

ಮಲ್ಲಮ್ಮ ನುಡಿ ವಾರ್ತೆ

ಶಹಾಪೂರ :ಅ.30:ತಾಲೂಕಿನಾದ್ಯಂತಹ ಅಕ್ರಮವಾಗಿ ಹತ್ತಿ ಖರೀದಿ ಕೇಂದ್ರಗಳು ದಿನೇ ದಿನೇ ಹೆಚ್ಚಾಗುತ್ತಿವೆ. ಶಹಾಪುರದಿಂದ ಯಾದಗಿರಿ ಮಾರ್ಗ, ಶಹಾಪುರದಿಂದ ಕಲಬುರಗಿ ಮಾರ್ಗ ಹಾಗೂ ಶಹಾಪುರದಿಂದ ಸುರಪುರ ಮಾರ್ಗ ಮಧ್ಯೆದಲ್ಲಿ ಇಂತಹ ಅಕ್ರಮ ಹತ್ತಿ ಕೇಂದ್ರಗಳು ತಲೆ ಎತ್ತಿವೆ. ನಮ್ಮ ತಾಲ್ಲೂಕಿನಲ್ಲಿ ಕೆಲವರು ಸರ್ಕಾರದ ನಿಯಮಾನುಸಾರ ಪರವಾನಗಿ ಪಡೆಯದೇ ಅಕ್ರಮವಾಗಿ ಹತ್ತಿ ಖರೀದಿ ಕೇಂದ್ರಗಳನ್ನು ಆರಂಭಿಸಿ ರೈತರ ಶೋಷಣೆಗೆ ಕಾರಣರಾಗುತ್ತಿದ್ದಾರೆ.

ಇಂತಹ ಅಕ್ರಮ ಕೇಂದ್ರಗಳಲ್ಲಿ ತೂಕದ ಅಕ್ರಮ, ಕಡಿಮೆ ದರ ನೀಡುವುದು, ಮತ್ತು ರೈತರ ಶ್ರಮದ ಫಲಕ್ಕೆ ನ್ಯಾಯ ನೀಡದ ಪರಿಸ್ಥಿತಿ ಉಂಟಾಗಿದೆ. ರೈತರು ಈಗಾಗಲೇ ಅತಿವೃಷ್ಟಿಯಿಂದ ಬೆಳೆಹಾನಿಯಾಗಿ ರೈತರು ಸಾಲದಲ್ಲಿ ಬೆಳೆದ ಅಲ್ಪಸ್ವಲ್ಪ ಬೆಳೆಗೆ ಸರಿಯಾದ ಬೆಲೆ ಸಿಗುವಂತಾಗಲಿ. ರೈತರು ಇಂತಹ ಅಕ್ರಮ ಹತ್ತಿ ಕೇಂದ್ರಗಳಿಗೆ ಯಾವುದೇ ಭದ್ರತೆಯಿಲ್ಲದೇ ಮಾರಾಟ ಮಾಡುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಅವರು ಪರಾರಿಯಾದರೆ ಯಾರು ಹೊಣೆ ಎಂದು ತಿಳಿಯುತ್ತಿಲ್ಲ. ಇದರಿಂದ ಅಕ್ರಮ ಹತ್ತಿ ಮಾರಾಟ ಮಾಡುವವರಿಗೆ ಯಾರು ಕೇಳುವವರಿಲ್ಲದಂತಾಗಿದೆ. ಹೀಗಾಗಿ ಸರಕಾರದಿಂದಲೇ ಹೊಸ ಹತ್ತಿ ಮಾರಾಟ ಕೇಂದ್ರವನ್ನು ಸ್ಥಾಪಿಸಬೇಕು. ಅಕ್ರಮ ಹತ್ತಿ ಕೇಂದ್ರಗಳಿಗೆ




ತಕ್ಷಣ ಸ್ಥಳ ಪರಿಶೀಲನೆ ನಡೆಸಿ ಇಂತಹ ಅಕ್ರಮ ಹತ್ತಿ ಖರೀದಿ ಕೇಂದ್ರಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕಾಗಿ ವಿನಂತಿಸುತ್ತೇವೆ. ಕೂಡಲೇ ಬೆಂಬಲ ಬೆಲೆ ಕ್ವಿಂಟಲ್‌ಗೆ 15 ಸಾವಿರ ನಿಗದಿಪಡಿಸಿ ರೈತರಿಗೆ ಬೆನ್ನೆಲುಬಾಗಿ ನಿಲ್ಲಬೇಕೆಂದು ಮನವಿ ಮಾಡಿದರು.

ಈ ಸಂಧರ್ಭದಲ್ಲಿ ಪ್ರದೀಪ ಅಣಬಿ, ಭೋಜಪ್ಪ ಮುಂಡಾಸ, ಅಂಬ್ರೇಶ ಶಿರವಾಳ, ಸುರೇಶ ಹಳಿಸಗರ ಇನ್ನಿತರ ಸಂಘದ ಸದಸ್ಯರು ಹಾಜರಿದ್ದರು

# ಸಚಿವರಾದ ಈಶ್ವರ ಬಿ.ಖಂಡ್ರೆ ಅವರ ಬೀದರ ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ.30 : ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆಅವರು ಅಕ್ಟೋಬರ್.31 ಹಾಗೂ ನವೆಂಬರ್. 1 ರಂದು ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿರುತ್ತಾರೆ.

ಅಕ್ಟೋಬರವ.31ರಂದು ಬೆಳಿಗ್ಗೆ10.30ಗಂಟೆಗೆ ಬೀದರ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿ ನಡೆಸಲಿದ್ದಾರೆ. ಬೆಳಿಗ್ಗೆ 11.30 ಗಂಟೆಗೆ ಬೀದರನ ಸರಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಹಮ್ಮಿಕೊಂಡಿರುವ ಸರಕಾರಿ ಪಾಲಿಟೇಕ್ನಿಕ್ ಕಾಲೇಜು ವಿದ್ಯಾರ್ಥಿಗಳಿಗೆ ಲ್ಯಾಪ ಟಾಪ್ ವಿತರಣೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ 12 ರಿಂದ 1 ಗಂಟೆಯವರೆಗೆಬೀದರನಸ್ಥಳೀಯಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ2 ಗಂಟೆಗೆ ಭಾಲ್ಕಿ ತಲ್ಲೂಕಿನ ದಾಡಗಿ ಗ್ರಾಮದಲ್ಲಿ ಆಯೋಜಿಸಿರುವ ದಾಡಗಿ–ಉಚ್ಚಾ ರಸ್ತೆ ಕಾಮಗಾರಿ ಚಾಲನಾ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ 3 ಗಂಟೆಗೆ ಭಾಲ್ಕಿಯಲ್ಲಿ ಕರ್ನಾಟಕ ರಾಜ್ಯ ನಿವೃತ್ತ ಸರಕಾರಿ ನೌಕರರ ಸಂಘ (ರಿ) ಸರ್ವ ಸದಸ್ಯರ ಸಭೆ ಹಾಗೂ ಹಿರಿಯ ನಾಗರೀಕರ ಸನ್ಮಾನ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ನಂತರ ಮಧ್ಯಾಹ್ನ 4 ರಿಂದ ರಾತ್ರಿ 7 ಗಂಟೆಯವರೆಗೆ ಭಾಲ್ಕಿಯ ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸಿ ಅಲ್ಲಿಯೇ ವಾಸ್ತವ್ಯ ಹೂಡಲಿದ್ದಾರೆ.

ನವೆಂಬರ್.1 ರಂದು ಬೆಳಿಗ್ಗೆ 9 ಗಂಟೆಗೆ ಬೀದರ ಜಿಲ್ಲಾ ನೆಹರು ಕ್ರೀಡಾಂಗಣದಲ್ಲಿ ಕನ್ನಡ ರಾಜ್ಯೋತ್ಸವ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಬೆಳಿಗ್ಗೆ 11.30 ಗಂಟೆಗೆ ಬೀದರನ ಕನ್ನಡ ಸಾಂಸ್ಕೃತಿಕ ಉತ್ಸವ ಪೋಸ್ಟರ್ ಬಿಡುಗಡೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ 12 ರಿಂದ 3 ಗಂಟೆಯವರೆಗೆ ಬೀದರನ ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಸಂಜೆ 4 ಗಂಟೆಗೆ ಬೀದರನ ಹುಲಸೂರದಲ್ಲಿ ಪ್ರಜಾಸೌಧ ಕಟ್ಟಡದ ಭೂಮಿ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಸಂಜೆ 6 ಗಂಟೆಗೆ ಹುಲಸೂರನಿಂದ ಭಾಲ್ಕಿಗೆ ಪ್ರಯಾಣಿಸಿ ಅಲ್ಲಿಯೇ ವಾಸ್ತವ್ಯ ಹೂಡಲಿದ್ದಾರೆ.

ನವೆಂಬರ್.2 ರಂದು ಬೆಳಿಗ್ಗೆ 11 ಗಂಟೆಗೆ ಬಸವಕಲ್ಯಾಣದ ಶಿರಗಾಪೂರದಲ್ಲಿ ಪರಮ ಪೂಜ್ಯ ಶ್ರೀ ಷ.ಬ್ರ.ಡಾ.ಚನ್ನವೀರ ಶಿವಾಚರ್ಯರ 63ನೇ ಜನ್ಮದಿನೋತ್ಸವ ಮತ್ತು ತುಲಾಭಾರ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ 2 ಗಂಟೆಗೆ ಭಾಲ್ಕಿ ತಲ್ಲೂಕಿನ ಧನ್ನೂರ (ಎಚ್) ದಲ್ಲಿ ಸೆಂಟ್ ಪೌಲ್ ಮೆಥೋಡಿಸ್ಟ್ ಚರ್ಚಿನ 33ನೇ ವಾರ್ಷಿಕ ಆರಾಧನೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ 4 ರಿಂದ 6 ರವರೆಗೆ ಬೀದರನ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ನಂತರ ಭಾಲ್ಕಿಗೆ ಪ್ರಯಾಣಿಸಿ ಅಲ್ಲಿಯೇ ವಾಸ್ತವ್ಯ ಹೂಡಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಂ.ಬಿ ಪಾಟೀಲರ ಕುರಿತ ಯತ್ನಾಳ ಹೇಳಿಕೆಗೆ ಬುಳ್ಳಾ ಖಂಡನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ್. ಅ. 30 : ರಾಜ್ಯದ ಭಾರಿ ಕೈಗಾರಿಕೆ ಖಾತೆ ಸಚಿವರಾದ ಎಂ.ಬಿ ಪಾಟೀಲ ಅವರ ಕುರಿತು ವಿಜಯಪುರ ನಗರ ಶಾಸಕರು ಹಾಗೂ ಮಾಜಿ ಕೇಂದ್ರ ಸಚಿವ ಬಸವನಗೌಡ ಪಾಟೀಲ ಯತ್ನಾಳ ಅವರು ನೈಕ್ಸಲೈಟ್ ಎಂಬ ಅಸಂಸ್ಕೃತ ಪದ ಬಳಿಕೆ ಮಾಡಿರುವುದನ್ನು ಜಾಗತಿಕ ಲಿಂಗಾಯತ ಸಮನ್ವಯ ಸಮಿತಿಯ ಉಪಾಧ್ಯಕ್ಷ ಬಸವರಾಜ ಬುಳ್ಳಾ ಖಂಡಿಸಿದ್ದಾರೆ.

ಗುರುವಾರ ನಗರದ ಜಿಲ್ಲಾ ಪತ್ರಿಕಾಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಯತ್ನಾಳ ಓರ್ವ ಅಸುಸಂಸ್ಕೃತ ವ್ಯಕ್ತಿ. ಇಂಥ ಮನಸ್ಥಿತಿ ಇರುವುದರಿಂದಲೇ ಬಿಜೆಪಿಯವರು ಇವರನ್ನು ಪಕ್ಷದಿಂದ ಉಚ್ಚಾಟಿಸಿದ್ದಾರೆ. 2028ರಲ್ಲಿ ವಿಜಯಪುರ ಜನರು ಯತ್ನಾಳರನ್ನು ಸೋಲಿಸಿ ಮನೆಗೆ ಕಳಿಸುವುದರಲ್ಲಿ ಸಂದೇಹವಿಲ್ಲವೆಂದು ತಿಳಿಸಿದರು.

ಎಂ.ಬಿ ಪಾಟೀಲ ಅವರು ಲಿಂಗಾಯತರ ಬಲಿಷ್ಟನಾಯಕ. ಅದರಲ್ಲಿ ಎರಡು ಮಾತಿಲ್ಲ. ಹಾಗಾಗಿ ಬೆಂಗಳೂರಿನಲ್ಲಿ ಬಸವ ಸಂಸ್ಕೃತಿ ಅಭಿಯಾನದ ಬೃಹತ್ ಸಮಾವೇಶ ಜರುಗಿತು. ಆ ಸಮಾವೇಶದಲ್ಲಿ ಎಂ.ಬಿ ಪಾಟೀಲರು ಐದಾರು ಬಸ್‌ಗಳ ಮೂಲಕ ಅಲ್ಲಿಯ ಬೆರಳೆಣಿಕೆಯಷ್ಟು ಜನರನ್ನು ಕರೆಸಿದ್ದಾರೆ. ಒಟ್ಟಾರೆ ಸಮಾವೇಶದಲ್ಲಿ ಕೇವಲ ಐದಾರು ಸಾವಿರ ಜನರಿದ್ದರು ಎಂಬ ಯತ್ನಾಳೆ ಹೇಳಿಕೆ ಹಾಸ್ಯಾಸ್ಪದ. ಬರೀ ಬೀದರ್‌ನಿಂದ ಪ್ರತ್ಯೇಕ ರೈಲನ್ನು ಈ ಕಾರ್ಯಕ್ರಮಕ್ಕಾಗಿ ಓಡಿಸುವ ಮೂಲಕ ಇಲ್ಲಿಂದಲೆ ಸಾವಿರಾರು ಬಸವ ಭಕ್ತರು ಸಮಾವೇಶದಲ್ಲಿ ಪಾಲ್ಗೊಂಡಿದ್ದು ಯತ್ನಾಳಗೆ ಗೊತ್ತಾಗಲಿಲ್ಲವೇ? ಎಂದು ಪ್ರಶ್ನೆ ಮಾಡಿದರು.

ಯತ್ನಾಳ ನಿತ್ಯ ಹೊಸ ಹೊಸ ಹೇಳಿಕೆನೀಡುತ್ತತಾನು ಒಬ್ಬ ಹೀರೊ ಎನಿಸಿಕೊಳ್ಳಲಿಕ್ಕೆ ಹೊರಟಿದ್ದಾರೆ. ಆದರೆ ವಿಜಯಪುರ ಜನ ತುಂಬ ಬುದ್ಧಿವಂತರಿದ್ದು, ಇವರ ನಿತ್ಯದ ನಡೆ ಅವಲೋಕಿಸುತ್ತಿದ್ದಾರೆ. ಇಂಥವರ ನಡೆಯನ್ನು ಜನ ಮುಂದೊಂದುದಿನತಿರಸ್ಕರಿಸುವುದು ಗ್ಯಾರಂಟಿ. ಯತ್ನಾಳ ಅವರ ಬಾಯಿ ಹಾಗೂ ಮೆದುಳಿಗೆ ಕನೆಕ್ಷನ್ ಇಲ್ಲ. ಹಾಗಾಗಿ ಸ್ವಲ್ಪ ದಿನದಲ್ಲಿ ಅವರು ಹುಚ್ಚರಾಗುವುದು ಪಕ್ಕಾ ಎಂದರು.

ನಮ್ಮದು ಸುಸಂಸ್ಕೃತ ನಾಡು. ಬಸವಣ್ಣನವರು ಬಾಳಿ ಬದುಕಿದ ನೆಲೆ ಇದು. ಇಂಥ ನೆಲದಲ್ಲಿ ಈ ರೀತಿಯ ಅವಿವೇಕಿತನ ಉಳ್ಳವರು ಬದುಕುತ್ತಿರುವುದು ದೊಡ್ಡ ದುರಂತ. ಇದು ಹೀಗೆ ಮುಂದುವರೆದರೆ ಬಸವಾನುಯಾಯಿಗಳು ಉಗ್ರ ಅವತಾರ ತಾಳಿ ಈ ಚಳಿಗಾಲದಲ್ಲಿ ಯತ್ನಾ:ಳರ ಚಳಿ ಬಿಡಿಸುತ್ತಾರೆಂಬುದು ಅರಿವಿರಲಿ. ನಮ್ಮ ನಾಡಿನಲ್ಲಿ ಮಠಾಧೀಶರಿಗೆ ಅಪಾರ ಗೌರವವಿದೆ. ಆದರೆ ಇತ್ತಿಚೀಗೆ ಕನೇರಿ ಸ್ವಾಮಿಜಿಗಳು ಬಸವ ಸಂಸ್ಕೃತಿ ಅಭಿಯಾನ ಕುರಿತು ತುಚ್ಚ ಪದ ಬಳಿಕೆ ಮಾಡಿ ನಿಂದಿಸಿರುವುದು ಇಡೀ ಕಾವಿಧಾರಿಗಳಿಗೆ ಮಾಡಿದ ಘೋರ ಅಪಮಾನ. ಸ್ವಾಮಿಜಿಗಳ ನಡೆಯನ್ನು ಸಹ ತಿವ್ರವಾಗಿ ಖಂಡಿಸುವುದಾಗಿ ಬುಳ್ಳಾ ತಿಳಿಸಿದ್ದಾರೆ.

# ವೈದ್ಯಕೀಯ ಶಿಬಿರದ ಲಾಭ ಪಡೆದು ಸ್ವಾವಲಂಬಿ ಜೀವನ ನಡೆಸಿ: ಮರುಳಸಿದ್ದಾರಾಧ್ಯ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ :ಅ:30: ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಯಾದಗಿರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ , ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ,ಜಿಲ್ಲಾ ಹಿರಿಯ ನಾಗರೀಕರ ಹಾಗೂ ವಿಕಲಚೇತನರ ಇಲಾಖೆ ಹಾಗೂ ಎಪಿಡಿ ಸಂಸ್ಥೆ ಇವರ ಸಂಯುಕ್ತ ಆಶ್ರಯದಲ್ಲಿ ಯಾದಗಿರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ,ಜಿಲ್ಲಾ ಆಸ್ಪತ್ರೆ ಯಾದಗಿರಿ ಇಲ್ಲಿ ವೈದ್ಯಕೀಯ ಶಿಬಿರ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಜಿಲ್ಲೆಯ ಎಲ್ಲಾ ಅಂಗವಿಕಲರ ಅನುಕೂಲಕ್ಕಾಗಿಜಿಲ್ಲೆಯಲ್ಲಿಮೊದಲಬಾರಿಗೆ ಈ ಒಂದು ವೈದ್ಯಕೀಯ ಶಿಬಿರ ಆಯೋಜಿಸಲಾಗಿದೆ ,ಇದರ ಸದುಪಯೋಗವನ್ನುಪಡೆಯಬೇಕೆಂದು ಪ್ರಾಸ್ತಾವಿಗಾಗಿ ಶ್ರೀ ಶರಣಪ್ಪ ಪಾಟೀಲ್, ಜಿಲ್ಲಾ ಅಂಗವಿಕಲ ಕಲ್ಯಾಣ ಅಧಿಕಾರಿಗಳು ಹೇಳಿದರು.

ಕಾರ್ಯಕ್ರಮವನ್ನು ಸಸಿಗೆ ನೀರೆರೆಯುವುದರ ಮೂಲಕ ಉಧ್ಘಾಟಿಸಿದ, ಜಿಲ್ಲಾ ಪ್ರಧಾನ ಹಾಗೂ ಸತ್ರ ನ್ಯಾಯಾಧೀಶರಾದ ಶ್ರೀ ಮರುಳಸಿದ್ಧಾರಾಧ್ಯ ಅವರು

ಜಿಲ್ಲಾ ಅಸ್ಪತ್ರೆಯಲ್ಲಿ ಇಂತಹ ಕಾರ್ಯಕ್ರಮವೂ ವಿವಿಧ ಇಲಾಖೆಗಳ ಸಹಕಾರದೊಂದಿಗೆ ಅಯೋಜಿಸಲಾಗಿದೆ. ಇದರ ಸದುಪಯೋಗ ಪಡೆದು ಸ್ವಾವಲಂಭಿ ಜೀವನ ನಡೆಸಬೇಕೆಂದು ನುಡಿದರು.

ನಂತರ ಮಾತನಾಡಿದ ವೈದ್ಯಕೀಯ ವಿಜ್ಞಾನ ಸಂಸ್ಥೆಯ ನಿರ್ದೇಶಕ ಡಾ–ಕ್ಟರ್ ಸಂದೀಪ್ ಅವರು, ಜಿಲ್ಲೆಯ ವಿಕಲಚೇತನರು ಹಾಗೂ ಹಿರಿಯ ನಾಗರಿಕರು ಇದರ ಸದುಪಯೋಗ ಪಡೆಯಬೇಕೆಂದು ತಿಳಿಸಿ, ಇದ–ಕ್ಕೆ ಎಲ್ಲಾ ರೀತಿಯ ಸೌಲಭ್ಯಗಳ ಸಹಕಾರ ನೀಡಲು ಏಮ್ಸ್ ಸದಾ ಸಿದ್ಧ. ಮುಂದಿನ ದಿನಗಳಲ್ಲಿ ಇಂತಹ ಕಾರ್ಯಕ್ರಮಗಳನ್ನು ವ್ಯವಸ್ಥಿತವಾಗಿ ಇನ್ನೂ ಹೆಚ್ಚು ಪರಿಣಾಮಕಾರಿಯಾಗಿ ಆಯೋಜಿಸಲಾಗುವುದು ಎಂದು ತಿಳಿಸಿದರು.

ನಂತರ ನಶಾಮುಕ್ತ ಭಾರತ ಅಭಿಯಾನದ ಪ್ರತಿಜ್ಞಾವಿಧಿಯನ್ನು ಶ್ರೀ ಶರಣಪ್ಪ ಪಾಟೀಲ್ ಜಿಲ್ಲಾ ಅಂಗವಿಕಲ ಕಲ್ಯಾಣ ಅಧಿಕಾರಿಗಳು ಬೋಧಿಸಿದರು.

ಕಾರ್ಯಕ್ರಮ ನಿರೂಪಣೆಯನ್ನು ಶ್ರೀಮತಿ ಶಾಂತಾ ರವರು ಮಾಡಿದರು. ಕಾರ್ಯಕ್ರಮದಲ್ಲಿ ಗೌರವಾನ್ವಿತ ಶ್ರೀ ಮರಿಯಪ್ಪ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅವರು ಸ್ವಾಗತಿಸಿದರು.

ಈ ಒಂದು ಕಾರ್ಯಕ್ರಮದಲ್ಲಿ ಡಾ. ಮಹೇಶ್ ಬಿರಾದಾರ್ ಡಿ.ಎಚ್.ಓ, ಡಾ. ಹನ್ಮಂತರೆಡ್ಡಿ ಟಿ.ಎಚ್.ಓ, ಎಪಿಡಿ ಸಿಬ್ಬಂದಿಗಳಾದ ಕು.

ಸಂಪ್ರೀತಾ ದೇವಪುತ್ರ, ನಾಗಪ್ಪ ಜಿ ಅವಟಿ, ರಮೇಶ ಕಟ್ಟಿಮನಿ, ರಮೇಶ ಹೊಸಳ್ಳಿ, ವಿರುಪಾಕ್ಷಿ, ಪ್ರಿಯದರ್ಶನ, ಅಂಗವಿಕಲ ಕಲ್ಯಾಣಾಧಿಕಾರಿಗಳ ಕಚೇರಿ ಸಿಬ್ಬಂದಿಗಳು, ಆಸ್ಪತ್ರೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

ವಿವಿಧ ಗ್ರಾಮಗಳಿಂದ ಬಂದಂತಹ ವಿಕಲಚೇನರಿಗೆ ಅವರ ಅಗತ್ಯಗಳಿಗೆ ಅನುಗುಣವಾಗಿ


ಮಾಪನ ಹಾಗೂ ಯುಡಿಐಡಿ ಕಾರ್ಡ್, ವೈದ್ಯಕೀಯ ನೆರವನ್ನು 198 ಜನ ವಿಕಲಚೇತನರು ಈ ಒಂದು ಶಿಬಿರದ ಪಡೆದರು.

# ರಾಜಕುಮಾರ ತರಿ ನೇಮಕಕ್ಕೆ ಲೋಕೇಶ ಮಂಗಲಗಿ ಹರ್ಷ

ಮಲ್ಲಮ್ಮ ನುಡಿ ವಾರ್ತೆ

ಬೀದರ್. ಅ. 30 : ಚಿಟಗುಪ್ಪ ತಾಲ್ಲೂಕಿನ ಮೀನಕೇರಾದ ರಾಜಕುಮಾರ ತರಿ ಅವರನ್ನು ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ ನಿಯಮಿತದ ನಿರ್ದೇಶಕರಾಗಿ ನೇಮಕ ಮಾಡಲಾಗಿದೆ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ 1 ಆರ್. ಲತಾ ಮುಂದಿನ ಆದೇಶದ ವರೆಗೆ ಈ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.



47ವರ್ಷದರಾಜಕುಮಾರ ತರಿಒಂದೂವರೆದಶಕದಿಂದ ಕಾಂಗ್ರೆಸ್‌ಪಕ್ಷದಸಂಘಟನಾತ್ಮಕ ಚ ಟು ವ ಟಿ ಕೆ ಗ ಳ ಲ್ಲಿ ತೊಡಗಿಸಿಕೊಂಡಿದ್ದಾರೆ.ಸದ್ಯ ಕಾಂಗ್ರೆಸ್ ಜಿಲ್ಲಾ ಘಟಕದ ಕಾರ್ಯದರ್ಶಿಯಾಗಿದ್ದಾರೆ.

ತಮ್ಮನ್ನು ನಿಗಮದ ನಿರ್ದೇಶಕರಾಗಿ ನೇಮಕ ಮಾಡಿದ್ದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅರಣ್ಯ ಸಚಿವ ಈಶ್ವರ ಖಂಡ್ರೆ, ಜಿಲ್ಲಾಧ್ಯಕ್ಷರಾದ ಬಸವರಾಜ ಜಾಬಶೆಟ್ಟಿ ನಿಗಮದ ಅಧ್ಯಕ್ಷ ವಿಜಯಾನಂದ ಕಾಶಪ್ಪನವರ್, ಮಾಜಿ ಶಾಸಕ ಅಶೋಕ ಖೇಣಿ ಹಾಗೂ ಪಕ್ಷದ ಮುಖಂಡರಿಗೆ ಲೋಕೇಶ ಮಂಗಲಗಿ ಜಿಲ್ಲಾ ವಕ್ತಾರರು ಎಸ್. ಸಿ(ವಿಭಾದ) ಕಾಂಗ್ರೆಸ್ ಸಮಿತಿ ಬೀದರ್ ಕೃತಜ್ಞತೆ ತಿಳಿಸಿದ್ದಾರೆ.

# ನಾಳೆ ಪೋಪ್ ರಾಯಭಾರಿ ಭಾಲ್ಕಿಗೆ ಆಗಮನ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.30: ಭಾರತ ಮತ್ತು ನೇಪಾಳದ ಪೋಪ್ ರಾಯಭಾರಿ ಲಿಯೋಪೋಲ್ಡೋ ಜರೆಲ್ಲಿಯವರು ಪಟ್ಟಣದ ಬಾಲಯೇಸು ಪುಣ್ಯಕ್ಷೇತ್ರಕ್ಕೆ ನ.1ರಂದು ಆಗಮಿಸಲಿದ್ದಾರೆ ಎಂದು ಬಾಲಯೇಸು ಪುಣ್ಯಕ್ಷೇತ್ರದ ಫಾದರ್ ಡೇವಿಂಡ್ ಆಂಟನಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿದ ಅವರು, ಭಾರತ ಮತ್ತು ನೇಪಾಳದ ಪೋಪ್ ರವರ ಪ್ರತಿನಿಧಿಯಾಗಿರುವ ಪೂಜ್ಯ ಲಿಯೋಪೋಲ್ಡೋ ಜರೆಲ್ಲಿ ಮಹಾಧರ್ಮಾಧ್ಯಕ್ಷರು, 2025ರ ನ.1 ರಂದು ಪ್ರಥಮ ಬಾರಿಗೆ ಭಾಲ್ಕಿಯ ಬಾಲಯೇಸು ಪುಣ್ಯ–ಕ್ಷೇತ್ರಕ್ಕೆ ಆಗಮಿಸಲಿದ್ದಾರೆ.

ಈ ನಿಮಿತ್ಯ ಅವರಿಗೆ ಭಾಲ್ಕಿ ಪಟ್ಟಣದ ಶಿವಾಜಿ ವೃತ್ತದಿಂದ ಮಹಾತ್ಮಾಗಾಂಧಿ ವೃತ್ತ, ಡಾ।ಬಿ.ಆರ್. ಅಂಬೇಡ್ಕರ್ ವೃತ್ತ, ಸಾಂಸ್ಕೃತಿಕ ನಾಯಕ ಬಸವಣ್ಣನವರ ವೃತ್ತ, ಸ್ವಾಮೀ ವಿವೇಕಾನಂದ ವೃತ್ತದ ಮೂಲಕ ಬಾಲಯೇಸು ಪುಣ್ಯಕ್ಷೇತ್ರದ ವರೆಗೆ ಬೈಕ್ ರ್ಯಾಲಿ ಮುಖಾಂತರ ಭವ್ಯವಾಗಿ ಸ್ವಾಗತಿಸಲಾಗುವುದು. ಇದೇವೇಳೆ ಅನೇಕ ಧ್ಯಾತ್ಮಿಕ ಕಾರ್ಯಕ್ರಮ, ಬಲಿಪೂಜೆ, ಪ್ರವಚನ ಕಾರ್ಯಕ್ರಮಗಳನ್ನು

ಹಮ್ಮಿಕೊಳ್ಳಲಾಗಿದೆ. ಬರುವ ಭಕ್ತಾದಿಗಳಿಗೆಜುಬ್ಲಿವರ್ಷದಸಂದರ್ಭದಲ್ಲಿ ಪೋಪ್ ರಾಯಭಾರಿಯವರು ವಿಶೇಷ ಆಶಿರ್ವಾದನೀಡಲಿದ್ದಾರೆ. ಭಕ್ತಾದಿಗಳು ಇದರ ಲಾಭವನ್ನು ಪಡೆದುಕೊಳ್ಳಬೇಕು ಎಂದು ತಿಳಿಸಿದ್ದಾರೆ.

# ಧರ್ಮ ದೇವರು ಗುರುವಿನಲ್ಲಿ ವಿಶ್ವಾಸ ಕಳೆದುಕೊಳ್ಳಬಾರದು: ಶ್ರೀ ರಂಭಾಪುರಿ ಜಗದ್ಗುರುಗಳು



ಮಲ್ಲಮ್ಮ ನುಡಿ ವಾರ್ತೆ

ಚನ್ನಗಿರಿ:ಸುಖ ಶಾಂತಿ ಸಂಪತ್ತು ಸದಾ ಬಯಸುವ ಮನುಷ್ಯ ಜೀವನದಲ್ಲಿ ಧರ್ಮ ದೇವರು ಮತ್ತು ಗುರುವಿನಲ್ಲಿ ಯಾವತ್ತೂ ವಿಶ್ವಾಸ ಕಳೆದುಕೊಳ್ಳಬಾರದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು. ಅವರು ಬುಧವಾರ ತಾಲೂಕಿನ ಕತ್ತಲಗೆರೆ ಗ್ರಾಮದಲ್ಲಿ ಶ್ರೀ ಯಳವಮ್ಮ ದೇವಸ್ಥಾನ ಉದ್ಘಾಟನೆ ಮೂರ್ತಿ ಪ್ರತಿಷ್ಠಾಪನೆ ಹಾಗೂ ಕಳಸಾರೋಹಣ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಧರ್ಮದ ದಿಕ್ಸೂಚಿ ಇಲ್ಲದೇ ಹೋದರೆ ಜೀವನದಲ್ಲಿ ಶಾಂತಿ ನೆಮ್ಮದಿ ದೊರಕದು. ವಿದ್ಯೆ ಕಲಿತರೆ ಸಾಲದು. ವಿವೇಕವೂ ಬೆಳೆಯಬೇಕು. ಅಂದಾಗ ಮಾತ್ರ ಮನುಷ್ಯ ಜೀವನ ಪರಿಪೂರ್ಣವಾಗಲು ಸಾಧ್ಯವಾಗುತ್ತದೆ. ಯುವ ಜನಾಂಗ ದೇವರು ಧರ್ಮದ ಮೇಲೆ ನಂಬಿಕೆ ಇಟ್ಟು ಶ್ರೀ ಗುರುವಿನ ಮಾರ್ಗದರ್ಶನದಲ್ಲಿ ಬಾಳಿದರೆ ಬದುಕಿನಲ್ಲಿ ಶ್ರೇಯಸ್ಸು ಮತ್ತು ಉನ್ನತಿ ಕಾಣಲು ಸಾಧ್ಯವಾಗುತ್ತದೆ. ಅಚಾರ್ಯರಾಗಲಿ ಮತ್ತು ಶರಣ–ರಾಗಲಿ ಕಾಯಕದ ಹಿರಿಮೆಯನ್ನು ಸಾರಿದ್ದಾರೆ. ಹುಟ್ಟು ಸಾವುಗಳ ಮಧ್ಯದ ಬದುಕು ಸಮೃದ್ಧಗೊಳ್ಳಲು ಗುರು ಜ್ಞಾನಾಮೃತ ಅವಶ್ಯವಾಗಿ ಬೇಕು. ಶ್ರೀ ಜಗದ್ಗುರು ರೇಣುಕಾಚಾರ್ಯರು ಉದಾತ್ತ ಜೀವನ ಸೂತ್ರಗಳನ್ನು ಬೋಧಿಸಿ ಸಕಲರನ್ನು ಉದ್ಧರಿಸಿದ್ದಾರೆ. ಸಂಸ್ಕಾರದ ಕೊರತೆಯಿಂದ ಜೀವನದ ನೈತಿಕ ಮೌಲ್ಯಗಳು ಅಧ:ಪತನದತ್ತ ಹೊರಟಿವೆ. ಜಾತಿ ಮತ ಪಂಥಗಳೆನ್ನದೇ ಸಂಸ್ಕಾರ ಸಂಸ್ಕೃತಿ ಪುನರುತ್ಥಾನಕ್ಕಾಗಿ ಎಲ್ಲರೂ ಶ್ರಮಿಸುವ ಅವಶ್ಯಕತೆಯಿದೆ ಎಂದರು. ಕಣ್ವಕುಪ್ಪಿ ಗವಿಮಠದ ಡಾ॥ ನಾಲ್ವಡಿ ಶಾಂತಲಿಂಗ ಶಿವಾಚಾರ್ಯರು ನೇತೃತ್ವ ವಹಿಸಿ ಮಾತನಾಡಿ ಮನುಷ್ಯ ಜೀವನದಲ್ಲಿ ವಿನಯ ಮತ್ತು ಕ್ರಿಯಾಶೀಲ ಗುಣಗಳನ್ನು ಬೆಳೆಸಿಕೊಳ್ಳಬೇಕು. ಮನುಷ್ಯ ಸುಂದರವಾದ ಮನೆ ಕಟ್ಟಬಲ್ಲ. ಆದರೆ ಆ ಮನೆಯಲ್ಲಿ ನೆಮ್ಮದಿಯಿಂದ ಬದುಕುವುದನ್ನು ಕಲಿತಿಲ್ಲ. ಮನೆ ದೊಡ್ಡದಿದ್ದರೂ ಮನಸ್ಸು ದೊಡ್ಡದಾಗುತ್ತಿಲ್ಲ. ಮನುಷ್ಯನಿಗೆ ವಿವೇಕ, ತ್ಯಾಗ, ಪ್ರಯತ್ನ, ಸದ್ಗುಣ ಮತ್ತು ಆಚರಣೆ ಆತನ ವಿಕಾಸಕ್ಕೆ ಕಾರಣವಾಗುತ್ತವೆ. ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಎಲ್ಲ ಸದ್ಭಕ್ತರ ಮೇಲಿರಲೆಂದು ಬಯಸಿದರು.

ಹೊನ್ನಾಳಿ ಹಿರೇಕಲ್ಮಠದ ಡಾ॥ ಚನ್ನಮಲ್ಲಿಕಾರ್ಜುನ ಶಿವಾಚಾರ್ಯರು, ಅವರಗೊಳ್ಳ ಪುರವರ್ಗ ಹಿರೇಮಠದ ಓಂಕಾರ ಶಿವಾಚಾರ್ಯರು, ದುಗ್ಗತ್ತಿ ವೀರಭದ್ರ ಸ್ವಾಮಿಗಳು, ಕತ್ತಲಗೆರೆ ಹಾಲಸಿದ್ದೇಶ್ವರ ಶ್ರೀಗಳು ಉಪಸ್ಥಿತರಿದ್ದರು. ರೈತ ಪರ ಚಿಂತಕ ತೇಜಸ್ವಿ ಪಟೇಲ್ ಮಾತನಾಡಿ ಧರ್ಮ ದೇವರಲ್ಲಿ ಶ್ರದ್ಧೆಯುಳ್ಳ ಭಕ್ತರು ತಾವಾಗಿದ್ದೀರಿ. ರಾಜಕಾರಣಿಗಳು ಇಷ್ಟು ಜನ ಸೇರಿಸಬೇಕಾದರೆ ಲಕ್ಷಾಂತರ ರೂಪಾಯಿ ಖರ್ಚು ಮಾಡಬೇಕಾಗುತ್ತದೆ. ಆದರೆ ಇಲ್ಲಿಗೆ ಆಗಮಿಸಿರುವ ಭಕ್ತರು ಸ್ವಯಂ ಪ್ರೇರಿತರಾಗಿ ಬಂದಿರುವುದು ತಮ್ಮಲ್ಲಿರುವ ಧರ್ಮ ನಿಷ್ಠೆಗೆ ಸಾಕ್ಷಿಯಾಗಿದೆ ಎಂದರು. ಗ್ರಾಮ ಪಂಚಾಯತಿ ಅಧ್ಯಕ್ಷ ಕೆ.ಎಂ. ಮಂಜಪ್ಪ, ಕಶೆಟ್ಟಿಯಳ್ಳಿಯ ಮಹಾರುದ್ರಯ್ಯ ಇನ್ನಿತರ ಗಣ್ಯರು ಉಪಸ್ಥಿತರಿದ್ದರು. ಶ್ರೀಮತಿ ಆರತಿ ಎಂ. ಇವರಿಂದ ಪ್ರಾರ್ಥನೆ ಜರುಗಿತು. ಶಿಕ್ಷಕ ಸಿದ್ಧೇಶ ಕೆ. ಸ್ವಾಗತಿಸಿದರು. ಸವಳಂಗ ಪಿಡಿಓ ಜಯಪ್ಪ ಎಂ. ನಿರೂಪಿಸಿದರು.

ಸಮಾರಂಭಕ್ಕೂ ಮುನ್ನ ಶ್ರೀ ಯಳವಮ್ಮ ದೇವಿ ಪ್ರತಿಷ್ಠಾಪಿಸಿ ನಂತರ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು ಆಶೀರ್ವಚನ ನೀಡಿ ಶುಭ ಹಾರೈಸಿದರು.

ವೈದ್ಯರ ಕಾರ್ಯಕ್ಷಮತೆಗೆ ಜಿಲ್ಲಾಧಿಕಾರಿ ನಿತೀಶ್ ಕೆ ಮೆಚ್ಚುಗೆ

# ರಾಯಚೂರು ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ತಿಂಗಳೊಳಗೆ ದಾಖಲೆಯ 200 ಹೆರಿಗೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 30: ಯಾವುದೇ ಖಾಸಗಿ ಆಸ್ಪತ್ರೆಗಳಿಗೆ ಹೋಲಿಕೆಗೆ ಅಸಾಧ್ಯವೆನ್ನುವಂತೆ ಅಕ್ಟೋಬರ್ ಒಂದೇ ತಿಂಗಳಲ್ಲಿ ರಾಯಚೂರು ನಗರದ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ 200 ಹೆರಿಗೆ ನಿರ್ವಹಣೆ ಮಾಡಲಾಗಿದೆ.

ಕರ್ನಾಟಕ ಸರಕಾರದ 'ನಿಮ್ಮ ಆರೋಗ್ಯ ನಮ್ಮ ಆದ್ಯತೆ' ಧ್ಯೇಯ್ಯವಾಕ್ಯಕ್ಕೆ ಬದ್ಧವಾಗಿ ಕೆಲಸ ಮಾಡಿದ್ದರಿಂದ ನಗರದ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಿಂದ ಈ ಕಾರ್ಯಸಾಧನೆ ಸಾಧ್ಯವಾಗಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಹರ್ಷ ವ್ಯಕ್ತಪಡಿಸಿದ್ದಾರೆ.

ಈ ಆಸ್ಪತ್ರೆಯು 2024ರ ಅಗಷ್ಟ 15 ರಂದು ರಾಯಚೂರ ನಗರದಲ್ಲಿ ಆರಂಭವಾಗಿ ವರ್ಷದೊಳಗೆ 1209 ಹೆರಿಗೆ ನಿರ್ವಹಿಸಿದ ಬೆನ್ನಲ್ಲೇ ಮತ್ತೊಂದು ಸಾಧನೆ ತೋರಿದೆ. ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ಹೆರಿಗೆ ನಿರ್ವಹಣೆ, ಮಕ್ಕಳ ಆರೈಕೆ ಚಿಕಿತ್ಸೆಗೆ ನಿರಂತರವಾಗಿ ಸಹಕರಿಸುತ್ತಿರುವ ಆಡಳಿತ ವೈದ್ಯಾಧಿಕಾರಿ ರೆಡಿಯಾಲಜಿಸ್ಟ್ ಡಾ.ಪ್ರಜ್ವಲ್‌ಕುಮಾರ, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ. ನಂದಿತಾ ಎಮ್ ಎನ್, ಆಸ್ಪತ್ರೆಯಲ್ಲಿನ ನಾಲ್ವರು ಪ್ರಸೂತಿ ತಜ್ಞರು, ಮೂವರು ಮಕ್ಕಳ ತಜ್ಞರು ಹಾಗೂ ನಗರದ ನವೋದಯ ವೈದ್ಯಕೀಯ ಮಹಾವಿದ್ಯಾಲಯದ ವೈದ್ಯರು, ಸ್ನಾತ್ತಕೋತ್ತರ ವೈದ್ಯ ವಿಧ್ಯಾರ್ಥಿಗಳ ಕಾರ್ಯ ಪ್ರಶಂಸನೀಯವಾಗಿದೆ.

ಉತ್ತಮ ಕಾರ್ಯ ನಿರ್ವಹಿಸುತ್ತಿರುವ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರಬಾಬು, ಐಇಸಿ ಚಟುವಟಿಕೆಗೆ ಹೆಚ್ಚಿನ ಒತ್ತು ಕೊಡುವ ಆರೋಗ್ಯ ಶಿಕ್ಷಣಾಧಿಕಾರಿ ಡಾ.ಈಶ್ವರ ದಾಸಪ್ಪನವರ ಸೇರಿದಂತೆ ರಾಯಚೂರ ಜಿಲ್ಲೆಯ ಅನೇಕ ವೈದ್ಯಾಧಿಕಾರಿಗಳು, ತಜ್ಞ ವೈದ್ಯರು, ವೈದ್ಯರು ಮತ್ತು ವೈದ್ಯಕೀಯ ಸಿಬ್ಬಂದಿ ತಂಡವಾಗಿ ಉತ್ತಮ ಕಾರ್ಯ ಮಾಡುತ್ತಿದ್ದರಿಂದಾಗಿ ರಾಯಚೂರು ಜಿಲ್ಲಾ ಆರೋಗ್ಯ ಕ್ಷೇತ್ರದಲ್ಲಿ ಉತ್ತಮ ಕಾರ್ಯಗಳಾಗುತ್ತಿವೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ವೈದ್ಯರ ಮತ್ತು ಸಿಬ್ಬಂದಿಯ ಕಾರ್ಯವೈಖರಿಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಸದುಪಯೋಗಕ್ಕೆ ಸಲಹೆ:ಬಡ,ಮಧ್ಯಮ ವರ್ಗದ ಜನರಿಗೆ ಅನಾರೋಗ್ಯವು ಸವಾಲಾಗಿ ಪರಿಣಮಿಸುತ್ತದೆ. ಈ ನಿಟ್ಟಿನಲ್ಲಿ ಸರ್ಕಾರ ಸ್ಪಂದಿಸಿ ಆರೋಗ್ಯ ಸೌಕರ್ಯ ಕಲ್ಪಿಸುತ್ತಿದೆ. ರಾಯಚೂರನಲ್ಲಿನ ತಾಯಿ ಮಕ್ಕಳ ಆಸ್ಪತ್ರೆಯು ಜನಸ್ನೇಹಿಯಾಗಿದೆ. ಅಲ್ಲಿನ ಸೌಕರ್ಯ ಪಡೆಯಲು ಪಕ್ಕದ ಯಾದಗಿರಿ, ತೆಲಂಗಾಣ ರಾಜ್ಯದ ಜಿಲ್ಲೆಯ ಜನರು ಆಗಮಿಸುತ್ತಿದ್ದಾರೆ. ಇದು ಅಲ್ಲಿನ ವೈದ್ಯಕೀಯ ಸೌಕರ್ಯ ಸರಿಯಾಗಿದೆ ಎಂಬುದನ್ನು ತಿಳಿಸುತ್ತದೆ. ರಾಯಚೂರ ಜಿಲ್ಲೆಯ ಜನರು ಇದನ್ನು ಅರಿತು ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಗೆ ಆಗಮಿಸಿ ಅಲ್ಲಿನ ವೈದ್ಯಕೀಯ ಸೌಕರ್ಯ ಪಡೆಯಬೇಕು ಎಂದು ಜಿಲ್ಲಾಧಿಕಾರಿಗಳು ಮನವಿ ಮಾಡಿದ್ದಾರೆ.

# ಬೆಂಬಲ ಬೆಲೆ ಯೋಜನೆಯಡಿ ಬಿಳಿಜೋಳ ಖರೀದಿಗೆ ಅಗತ್ಯ ಕ್ರಮವಹಿಸಿ: ನಿತೀಶ್ ಕೆ.




ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 28 (ಕರ್ನಾಟಕ ವಾರ್ತೆ): ಪ್ರಸಕ್ತ ಸಾಲಿನ ಮುಂಗಾರು ಮತ್ತು ಹಿಂಗಾರು ಋತುವಿನ ರೈತರಿಂದ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಬಿಳಿಜೋಳ ಖರೀದಿಸಲು ಅಗತ್ಯ ಕ್ರಮವಹಿಸಬೇಕೆಂದು ಜಿಲಾ ಟಾಸ್ಕ್ ಪೋರ್ಸ್ ಸಮಿತಿ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಅಕ್ಟೋಬರ್ 28ರಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ವಿಸಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಬಿಳಿಜೋಳ ಖರೀದಿ ಕುರಿತು ನಡೆದ ಜಿಲ್ಲಾ ಮಟ್ಟದ ಟಾಸ್ಕ್ ಫೋರ್ಸ್ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೇಂದ್ರ ಸರ್ಕಾರವು 2025–26ನೇ ಸಾಲಿನ ಮುಂಗಾರು ಋತುವಿನಲಿ ಪ್ರತಿ ಕ್ವಿಂಟಾಲ್ ಹೈಬ್ರಿಡ್ ಬಿಳಿಜೋಳಕ್ಕೆ 3699 ರೂ. ಹಾಗೂ ಮಾಲ್ದಂಡಿ ಬಿಳಿಜೋಳಕ್ಕೆ 3749 ರೂ.ಗಳನ್ನು ನಿಗದಿ ಮಾಡಿದೆ. ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಬಿಳಿಜೋಳವನ್ನು ಅಧಿಕೃತ ಖರೀದಿ ಏಜೆನ್ಸಿಯಾದ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತದ ಮುಖಾಂತರ ಖರೀದಿಸಲು ಅನುಮೋದನೆ ನೀಡಲಾಗಿದೆ ಎಂದರು.

ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಬಿಳಿಜೋಳ ಖರೀದಿಗೆ ಸಂಬಂಧಿಸಿದಂತೆ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ಮತ್ತು ನಿಗಮದ ವತಿಯಿಂದ ನೇಮಿಸಲಾಗುವ ಉಪ ಏಜೆನ್ಸಿಗಳಾದ ಟಿಎಪಿಎಮ್‌ಸಿ, ಪಿಎಸಿಎಸ್, ಎಫ್‌ಪಿಒಎಸ್, ಎಸ್‌ಹೆಚ್‌ಜಿಎಸ್‌ಗಳಿಂದ ಜಿಲ್ಲೆಯಲ್ಲಿ ಅಗತ್ಯಕ್ಕೆತಕ್ಕಂತೆ ಖರೀದಿ ಕೇಂದ್ರಗಳನ್ನು ತೆರೆದು ದಿನಾಂಕ:01.12.2025 ರಿಂದ 31.03.2026 ರವರೆಗೆ ಬಿಳಿಜೋಳ ಖರೀದಿಗೆ ಸಂಬಂಧಿಸಿದಂತೆ ರೈತರ ನೋಂದಣಿ ಕಾರ್ಯ ಕೈಗೊಳ್ಳಬೇಕು. ಹಾಗೂ ದಿನಾಂಕ:01.01.2026 ರಿಂದ 31.03.2026 ಅವಧಿಯವರೆಗೆ ಕೇಂದ್ರ ಸರ್ಕಾರವು ನಿಗಧಿಪಡಿಸಿರುವ ಎಫ್.ಎ.ಕ್ಯೂ ಮಾನದಂಡಗಳನ್ವಯ ಬಿಳಿಜೋಳ ಖರೀದಿ ಕಾರ್ಯ ಕೈಗೊಳ್ಳಬೇಕೆಂದರು.

ಸರ್ಕಾರದಿಂದ ನೇಮಿಸಲ್ಪಟ್ಟ ನೋಡಲ್ ಏಜೆನ್ಸಿಯಾದ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮವು ಕೇಂದ್ರ ಸರ್ಕಾರವು ನಿಗಧಿಪಡಿಸಿದ ಮಾನದಂಡಗಳನ್ವಯ ಬಿಳಿಜೋಳವನ್ನು ಖರೀದಿ ಹಂತದಲ್ಲಿ ಎಫ್‌ಎಕ್ಯೂ ಗುಣಮಟ್ಟವನ್ನು ದೃಢೀಕರಿಸಿ ಪ್ರತಿ ಕೇಂದ್ರದಲಿ ಮೂರನೇ ವ್ಯಕ್ತಿ ಗುಣಮಟ್ಟ ಪರೀಕ್ಷಕರನ್ನು ನೇಮಿಸಲು ಟೆಂಡರ್ ಕರೆಯಬೇಕು. ಖರೀದಿ ಏಜೆನ್ಸಿಯ ಹಿರಿಯ ಅಧಿಕಾರಿಗಳು ಜಿಲ್ಲೆಗಳಲ್ಲಿನ ಕಾರ್ಯ ಪ್ರಗತಿ ಬಗ್ಗೆ ಆಗ್ಗಿಂದಾಗೆ ಮೇಲುಸ್ತುವಾರಿ ತಪಾಸಣೆ ಕೈಗೊಳ್ಳಬೇಕು. ರೈತರ ನೋಂದಣಿ ಮತ್ತು ಖರೀದಿ ಪ್ರಕ್ರಿಯೆಯನ್ನು ಬಯೋಮೆಟ್ರಿಕ್ ಆಧಾರದಲಿಯೇ ಕೈಗೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಈ ವೇಳೆ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪ ನಿರ್ದೇಶಕರಾದ ನಜೀರ್ ಅಹಮದ್ ಅವರು ಮಾತನಾಡಿ, ಪ್ರತಿ ರೈತರಿಂದ ಹಿಡುವಳಿಯನ್ನಾಧರಿಸಿ ಪ್ರತಿ ಎಕರೆಗೆ 15 ಕ್ವಿಂಟಾಲ್‌ನಂತೆ ಗರಿಷ್ಠ 150 ಕ್ವಿಂಟಾಲ್ ಬಿಳಿಜೋಳ ಖರೀದಿಸುವುದು. ಬಿಳಿಜೋಳ ಸರಬರಾಜು ಮಾಡಿದ ರೈತರಿಗೆ ಅವರ ಬ್ಯಾಂಕ್ ಖಾತೆಗಳಿಗೆ ಹಣವನ್ನು ಡಿಬಿಟಿ ಮೂಲಕ ನೇರ ನಗದು ವರ್ಗಾವಣೆ ಮಾಡಲಾಗುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಕುಮಾರಸ್ವಾಮಿ, ರಾಯಚೂರು ತಹಶೀಲ್ದಾರ್ ಸುರೇಶ್ ವರ್ಮ, ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಜಯಪ್ರಕಾಶ್ ಚೌವ್ಹಾಣ್, ತೋಟಗಾರಿಕೆ ಇಲಾಖೆಯ ಉಪ ನಿರ್ದೇಶಕರಾದ ಮಹಮ್ಮದ್ ಅಲಿ, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಜಿಲ್ಲಾ ಪ್ರಕಾಶ್ , ಎಪಿಎಮ್‌ಸಿ ಸಹಾಯಕ ನಿರ್ದೇಶಕರಾದ ಕೃಷ್ಣ, ರಾಯಚೂರಿನ ಸಹಕಾರ ಸಂಘಗಳ ಉಪ ನಿಬಂಧಕರಾದ ಮನೋಹರ ಸೇರಿದಂತೆ ಜಿಲ್ಲೆಯ ಲಿಂಗಸುಗೂರು ಸಹಾಯಕ ಆಯುಕ್ತರು ವಿವಿಧ ತಾಲೂಕಿನ ತಹಶೀಲ್ದಾರರು ವಿಸಿಯಲ್ಲಿ ಇದ್ದರು.

ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ 2ನೇ

# ಮತದಾರರ ವಿಶೇಷ ಮಿಂಚಿನ ನೋಂದಣಿ ಅಭಿಯಾನ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 30 –ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಸ್ವೀಪ್ ಸಮಿತಿ ಹಾಗೂ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ–2026ರ ಮತದಾರರ ವಿಶೇಷ ಮಿಂಚಿನ ನೋಂದಣಿ ಎರಡನೇ ಅಭಿಯಾನಕ್ಕೆ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ.ಎಂ.ಹನುಮಂತಪ್ಪ ಅವರು ಚಾಲನೆ ನೀಡಿದರು.

ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆಡಳಿತ ಭವನದಲ್ಲಿ ಅಕ್ಟೋಬರ್ 30ರಂದು ನಡೆದ ಕಾರ್ಯಕ್ರಮದಲ್ಲಿ ಪ್ರಾಧ್ಯಾಪಕ ಸಮೂಹದೊಂದಿಗೆ ಖುದ್ದು ಭಾಗಿಯಾಗಿ ಮಾತನಾಡಿದ ಕುಲಪತಿಗಳು, ಶಿಕ್ಷಕರು, ಉಪನ್ಯಾಸಕರು, ಪ್ರಾಧ್ಯಾಪಕರು ಮತ್ತು ಇನ್ನೀತರರ ಒಳಗೊಂಡ ಬೋಧಕ ವರ್ಗದ ಮುಂದೆಯೂ ಸಹ ಕೆಲ ಸವಾಲುಗಳಿವೆ. ಅವರಿಗೆ ಸ್ಪಂದನೆ ಸಿಗಬೇಕಿದೆ. ಈ ನಿಟ್ಟಿನಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆಯ ಭಾಗವಾದ ಮತದಾರರ ನೋಂದಣಿ, ಮತದಾನದಂತಹ ಕಾರ್ಯಗಳಲ್ಲಿ ತಪ್ಪದೇ ಭಾಗಿಯಾಗಬೇಕು ಎಂದು ಸಲಹೆ ಮಾಡಿದರು.

ರಾಯಚೂರು ತಹಶಿಲ್ದಾರ್ ಸುರೇಶ್ ವರ್ಮ ಅವರು ಮಾತನಾಡಿ, ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಬಯಸುವ ಅರ್ಹ ಪ್ರತಿಯೊಬ್ಬರು ಅರ್ಜಿ ನಮೂನೆ 19ರಡಿ ಅರ್ಜಿ ಸಲ್ಲಿಸಬೇಕು. ಶೈಕ್ಷಣಿಕ ಸಂಸ್ಥೆಗಳಲ್ಲಿ 2025ರ ನವಂಬರ್ 1ಕ್ಕೆ ಆರು ವರ್ಷಗಳ ಅವಧಿಯಲ್ಲಿ ಒಟ್ಟು ಕನಿಷ್ಠ ಮೂರು ವರ್ಷ ಬೋಧನಾ ವೃತ್ತಿಯಲ್ಲಿ ನಿರತರಾಗಿರಬೇಕು. ಈ ಬಗ್ಗೆ ಆಯಾ ಶೈಕ್ಷಣಿಕ ಸಂಸ್ಥೆಗಳಿಂದ ಅನುಬಂಧ– 2ರಲ್ಲಿ ಪ್ರಮಾಣ ಪತ್ರ ಸಲ್ಲಿಸಬೇಕು. ಸಂಸ್ಥೆಯ ಮುಖ್ಯಸ್ಥರಿಂದ ದೃಢೀಕರಣ ಪತ್ರ ಸಲ್ಲಿಸಬೇಕು ಎಂದು ಹೇಳಿದರು.

ಈ ವೇಳೆ ವಿವಿಯ ಆಡಳಿತಾಧಿಕಾರಿ ಜಾಗೃತಿ ದೇಶಪಾಂಡೆ ಅವರು ಮಾತನಾಡಿ, ಕೃಷಿ ವಿವಿಯಲ್ಲಿ 110 ಮತದಾರರ ಪೈಕಿ ಈಗಾಗಲೇ 90 ಜನರು ನೋಂದಣಿ ಮಾಡಿದ್ದು, ಉಳಿದವರು ಬೇಗನೆ ನೋಂದಣಿ ಮಾಡಿಸಬೇಕು ಎಂದು ತಿಳಿಸಿದರು.

ಮತದಾರ ಸಾಕ್ಷರತಾ ಕ್ಲಬ್‌ನ ನೋಡಲ್ ಅಧಿಕಾರಿ ಡಾ.ದಂಡಪ್ಪ ಬಿರಾದಾರ ಅವರು ಮಾತನಾಡಿ, ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣಾ ಮತದಾರರ ನೋಂದಣೆ ಪ್ರಕ್ರಿಯೆಯು ರಾಯಚೂರು ಜಿಲ್ಲೆಯಲ್ಲಿ ಬಿರುಸಾಗಿ ನಡೆದಿದ್ದು, ನೋಂದಣಿ ಪ್ರಕ್ರಿಯೆಯನ್ನು ಮತ್ತಷ್ಟು ಚುರುಕುಗೊಳಿಸಬೇಕು ಎಂದು ತಿಳಿಸಿದರು. ಬರುವ ನ.3ರಂದು ಮೂರನೇ ಹಂತದ ಮತದಾರರ ಮಿಂಚಿನ ನೋಂದಣಿ ಅಭಿಯಾನ ನಡೆಯಲಿದೆ ಎಂದು ತಿಳಿಸಿದರು.

1–11–2025ಕ್ಕೆ ಅರ್ಹತಾ ದಿನಾಂಕಕ್ಕೆ ಅನ್ವಯಿಸುವಂತೆ ಅರ್ಹ ಮತದಾರರು ನವೆಂಬರ್ 6ರೊಳಗೆ ಹೆಸರು ಸೇರ್ಪಡೆಗೊಳಿಸಲು ಕೋರಿದರು. ಅಭಿಯಾನದ ದಿನ ಒಳಗೊಂಡಂತೆ ಬೇರೆ ದಿನಗಳಲ್ಲೂ ಅರ್ಹ ಶಿಕ್ಷಕರು ತಮ್ಮ ಕ್ಷೇತ್ರ ವ್ಯಾಪ್ತಿಗೆ ಒಳಪಡುವ ಎಲ್ಲ ತಾಲೂಕು ಮಟ್ಟದ ಅಧಿಕಾರಿಗಳ ಸೇವೆ ಪಡೆದು ನಿಗದಿಪಡಿಸಿದ ಸಮಯದೊಳಗೆ ನಿಯಮಾನುಸಾರ ನಮೂನೆ –19ರ ಅರ್ಜಿಯೊಂದಿಗೆ ಪೂರಕ ದಾಖಲೆಗಳನ್ನು ಪಾಲಿಕೆ ಹಾಗೂ ತಹಸೀಲ್ದಾರ್ ಕಚೇರಿಗೆ ಸಲ್ಲಿಸಬೇಕು ಎಂದರು.

ಈ ವಿಶೇಷ ಅಭಿಯಾನದಡಿ ಕೃಷಿ ವಿವಿಯಲ್ಲಿನ ಅರ್ಹ ಪ್ರಾಧ್ಯಾಪಕರು, ಸಹ ಪ್ರಾಧ್ಯಾಪಕರು ಹಾಗೂ ಡೀನ್‌ಗಳು ನಮೂನೆ 19ರಡಿ ಅರ್ಜಿ ಸಲ್ಲಿಸಿದರು.

ಇದೇ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಡಿ.ಬಡಿಗೇರ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಸೋಮಶೇಖರಪ್ಪ ಹೊಕ್ರಾಣಿ, ಅಮರೇಶ್ ಅಶಿಹಾಳ ಸೇರಿದಂತೆ ವಿವಿಧ ವಿಭಾಗದ ಮುಖ್ಯಸ್ಥರು ಇದ್ದರು. ಎಂ.ಟೆಕ್ ವಿದ್ಯಾರ್ಥಿನಿ ವಿಜಯಲಕ್ಷ್ಮಿ ಪ್ರಾರ್ಥಿಸಿದರು.

# ರಾಯಚೂರಿನಲ್ಲಿ ಹತ್ತಿ ಬೆಳೆ ಹೆಚ್ಚಿನ ಸಾಂದ್ರತೆಯ ನಾಟಿ ಪದ್ಧತಿಯ ಕ್ಷೇತ್ರೋತ್ಸವ, ರೈತರ ಸಂವಾದ ಯಶಸ್ವಿ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 30–ಹತ್ತಿ ಬೆಳೆಯಲ್ಲಿ ಹೆಚ್ಚಿನ ಸಾಂದ್ರತೆಯ ನಾಟಿ ಪದ್ಧತಿಯ ಕ್ಷೇತ್ರೋತ್ಸವ ಹಾಗೂ ರೈತರ ಸಂವಾದ ಕಾರ್ಯಕ್ರಮವು ಇತ್ತೀಚೆಗೆ ರಾಯಚೂರಿನ ಕಸಬೆಕ್ಯಾಂಪನ ಡಾ.ಶಂಕರಗೌಡ ಫಾರ್ಮ ಹೌಸ್‌ನಲ್ಲಿ ನಡೆಯಿತು.

ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ಹಾಗೂ ಕೃಷಿ ಇಲಾಖೆಯ ಸಹಯೋಗದಲ್ಲಿ ರಾಯಚೂರಿನ ಕೃಷಿ ತಂತ್ರಜ್ಞರ ಸಂಸ್ಥೆಯು ಆಯೋಜಿಸಿದ್ದ ಕಾರ್ಯಕ್ರಮಕ್ಕೆ ಕಾಯಕಶ್ರೀ ಪ್ರಶಸ್ತಿ ವಿಜೇತರು ಹಾಗೂ ಪ್ರಗತಿಪರ ರೈತರಾದ ಶರಣಪ್ಪಗೌಡ ಅವರು ಚಾಲನೆ ನೀಡಿದರು.

ಪ್ರಾಯೋಗಿಕವಾಗಿ ಮೂರು ಬಿ.ಟಿ ಹೈಬ್ರಿಡ್ ಮತ್ತು ಎರಡು ವಿವಿಧ ಜಾತಿಯ ಹತ್ತಿ ಬೆಳೆಯಲ್ಲಿ ಎಕರೆಗೆ 29,000 ಗಿಡಗಳ ಸಾಂದ್ರತೆಯಿಂದ ಎಕರೆವಾರು 16 ಕ್ವಿಂಟಲ್ ಇಳುವರಿಯನ್ನು ಏಕಕಾಲಕ್ಕೆ ಹತ್ತಿ ಬಿಡಿಸಿ 120 ರಿಂದ 130 ದಿನಗಳಲ್ಲಿ ಕೊಯ್ಲು ಅಪೇಕ್ಷಿಸುವ ಬಗ್ಗೆ ಸಮಗ್ರ ಚರ್ಚಿಸಲಾಯಿತು. ಸಿಎ ಶಿವಾನಂದ ಅಮರಖೇಡ ಮತ್ತು ಶ್ರೀ ವಿಜಯ ಎನ್ ಅವರು ತಮ್ಮ ಹೊದಲ್ಲಿ ಹೆಚ್‌ಡಿಪಿಎಸ್‌ನ್ನು ಆಸಕ್ತಿಯಿಂದ ಅನುಷ್ಠಾನಗೊಳಿಸಿದ ಬಗ್ಗೆ ವಿವರಿಸಿದರು.

ಬೆಂಗಳೂರಿನ ಕೃಷಿ ತಂತ್ರಜ್ಞರ ಸಂಸ್ಥೆಯ ಅಧ್ಯಕ್ಷರಾದ ಡಾ.ಎ.ಬಿ. ಪಾಟೀಲ ಅವರು ಮಾತನಾಡಿ, ರೈತರು ಹತ್ತಿ ಬೆಳೆಯಲ್ಲಿ ವಿನೂತನ ಪದ್ಧತಿಯಾದ ಹೆಚ್‌ಡಿಪಿಎಸ್‌ನ್ನು ಅಳವಡಿಸಿ ಬೆಳೆಯನ್ನು ಏಕಕಾಲಕ್ಕೆ ಕಟಾವು ಮಾಡಿ ಲಾಭವನ್ನು ದ್ವಿಗುಣಗೊಳಿಸಬೇಕು ಎಂದು ಸಲಹೆ ಮಾಡಿದರು.

ರಾಯಚೂರಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಹನುಮಂತಪ್ಪ ಎಮ್. ಅವರು ಮಾತನಾಡಿ, ಹತ್ತಿ ಬೆಳೆಯಲ್ಲಿ ಅಡಚಣೆಗಳನ್ನು ನಿವಾರಿಸಿಕೊಂಡು ಉತ್ತಮ ಲಾಭದಾಯಕವಾದ ಇಳುವರಿಯನ್ನು ಏಕ ಕಾಲಕ್ಕೆ ಕೊಯ್ಲುನ್ನು ಮಾಡಿ ಹಿಂಗಾರಿನಲ್ಲಿ ಎರಡನೇ ಬೆಳೆಯನ್ನು ರೈತರು ಪಡೆದುಕೊಳ್ಳಬಹುದು ಎಂದು ಸಲಹೆ ಮಾಡಿದರು.

ಕೃಷಿ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಡಾ.ಬಿ.ವಿ. ಪಾಟೀಲ ಅವರು ಮಾತನಾಡಿ, ಅಮೇರಿಕಾ, ಬ್ರೆಜಿಲ್ ಮತ್ತು ಇನ್ನೀತರ ದೇಶಗಳಲ್ಲಿ ಹೆಚ್‌ಡಿಪಿಎಸ್ ಪದ್ಧತಿ ಅಳವಡಿಸಿಕೊಂಡು ಉತ್ತಮ ಉಳುವರಿ ಪಡೆಯುತ್ತಿದ್ದಾರೆ ಎಂದು ತಿಳಿಸಿದರು.

ಕೃಷಿ ವಿಶ್ವವಿದ್ಯಾಲಯದ ವಿಶ್ರಾಂತ ಡೀನ್ ಡಾ.ಸಿ.ವಿ.ಪಾಟೀಲ ಮಾತನಾಡಿ, ಹತ್ತಿ ಬೆಳೆಯು ವಾಣಿಜ್ಯ ಬೆಳೆಯಾಗಿದ್ದು, ಇದನ್ನು ಲಾಭದಾಯಕವಾಗಿ ಬೆಳೆಯಲು ಎಚ್‌ಡಿಪಿಎಸ್ ಪ್ರಯೋಗ ಅತ್ಯಗತ್ಯ ಎಂದು ಸಲಹೆ ಮಾಡಿದರು.

ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಪ್ರಕಾಶ ಚವ್ಹಾಣ್ ಅವರು ಮಾತನಾಡಿ, ರಾಜ್ಯದಲ್ಲಿಯೇ ಅತಿ ಹೆಚ್ಚು ಹತ್ತಿ ಬೆಳೆಯುವ ಜಿಲ್ಲೆಗಳಲ್ಲಿ ರಾಯಚೂರು ಪ್ರಮುಖವಾಗಿದ್ದು, ಜಿಲ್ಲೆಯಲ್ಲಿ ಒಟ್ಟು 1.8 ಲಕ್ಷ ಹೆಕ್ಟರ್ ಹತ್ತಿ ಬೆಳೆ ಇದ್ದು, ಹೆಚ್‌ಡಿಪಿಎಸ್‌ಯನ್ನು ಅಳವಡಿಸಿಕೊಂಡಲ್ಲಿ ರೈತರು ಇನ್ನೂ ಗರಿಷ್ಠ ಲಾಭವನ್ನು ಪಡೆದುಕೊಳ್ಳಲು ಸಫಲರಾಗುತ್ತಾರೆ ಮತ್ತು ಈ ಹೆಚ್‌ಡಿಪಿಎಸ್ ಉತ್ತೇಜಿಸಲು ನವೀನ ಯಂತ್ರೋಪಕರಣಗಳನ್ನು ಒದಗಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡುವುದಾಗಿ ತಿಳಿಸಿದರು. ಹೆಚ್‌ಡಿಪಿಎಸ್ ಮಾಹಿತಿಯನ್ನು ರೈತರಿಗೆ ತಲುಪಿಸುವ ಪ್ರಯತ್ನವನ್ನು ಕೈಗೊಂಡಿರುವುದಕ್ಕೆ ಕೃಷಿ ತಂತ್ರಜ್ಞರ ಸಂಸ್ಥೆ ರಾಯಚೂರು ಇವರನ್ನು ಮನಪೂರ್ವಕವಾಗಿ ಶ್ಲಾಘಿಸಿದರು.

ಕೃಷಿ ತಂತ್ರಜ್ಞರ ಸಂಸ್ಥೆಯ ಅಧ್ಯಕ್ಷರಾದ ಆರ್.ಎ. ಪಾಟೀಲ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಹೆಚ್‌ಡಿಪಿಎಸ್ ಪ್ರಯೋಗದ ಕಾರ್ಯಕ್ರಮಕ್ಕೆ ಸಿಎ ಶಿವಾನಂದ ಅಮರಖೇಡ ಹಾಗೂ ಅವರ ಕುಟುಂಬದವರು ತಮ್ಮ ಜಮೀನು ಒದಗಿಸಿಕೊಟ್ಟಿದ್ದಕ್ಕೆ ಮತ್ತು ಈ ಕಾರ್ಯಕ್ರಮಕ್ಕೆ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಕೃಷಿ ಇಲಾಖೆ ಹಾಗೂ ಕಾವೇರಿ ಸೀಡ್ಸ್ ರಾಯಚೂರು ಇವರ ಸಹಕಾರ ಸ್ಮರಣೀಯವಾಗಿದೆ. ಕೃಷಿ ತಂತ್ರಜ್ಞರ ಸಂಸ್ಥೆಯು ಸದಾಕಾಲ ರೈತರ ಹಿತಕ್ಕಾಗಿ ಹಾಗೂ ವಿವಿಧ ವಿಷಯಗಳ ಬಗ್ಗೆ ಮಾಹಿತಿ ಒದಗಿಸಲು ಬದ್ಧವಿದ್ದು ಈ ಸಂಸ್ಥೆಯ ಸದುಪಯೋಗ ಪಡೆದುಕೊಳ್ಳಲು ರೈತರಲ್ಲಿ ವಿನಂತಿಸಿದರು.

ಡಾ.ಭೀಮಣ್ಣ ಹಾಗೂ ಡಾ.ಜೆ. ಎಮ್. ನಿಡಗುಂದಿ ಅವರು ಪ್ರಾಸ್ತಾವಿಕ ಮಾತನಾಡಿ, ಈ ವಿನೂತ ಹೆಚ್‌ಡಿಪಿಎಸ್ ಪದ್ಧತಿಯನ್ನು ಪರಿಚಯಿಸಿ ತಾಂತ್ರಿಕ ಮಾಹಿತಿ ನೀಡಿದರು.

ಸಮಾರಂಭದಲ್ಲಿ ಕೃಷಿ ವಿವಿಯ ಸಂಶೋಧನಾ ಮತ್ತು ವಿಸ್ತರಣಾ ನಿರ್ದೇಶಕರಾದ ಡಾ.ಅಮರೇಗೌಡ, ಕೃಷಿ ತಂತ್ರಜ್ಞರ ಸಂಸ್ಥೆಯ ಜಂಟಿ ಕಾರ್ಯದರ್ಶಿ ಸಿ.ಎಸ್.ಪಾಟೀಲ, ಸಿದ್ದನಗೌಡ ಗಾರಲದಿನ್ನಿ ಹಾಗೂ ಕೃಷಿ ತಂತ್ರಜ್ಞರ ಸಂಸ್ಥೆಯ ಇತರೆ ಕಾರ್ಯಕಾರಿ ಸಮಿತಿ ಸದಸ್ಯರು, ಜಿಲ್ಲೆಯ ವಿವಿಧ ಭಾಗದ ಹತ್ತಿ ಬೆಳೆಯ ರೈತರು ಭಾಗವಹಿಸಿದ್ದರು. ಡಾ.ಶರಣಗೌಡ ಹಿರೇಗೌಡರ್ ನಿರೂಪಿಸಿದರು.

# ರಾಜ್ಯೋತ್ಸವದ ಅಂಗವಾಗಿ ಸರಕಾರಿ ನೌಕರರಿಗೆ ರಾಜ್ಯಮಟ್ಟದ ಗುಂಪು ಸ್ಪರ್ಧೆ–ಕೃಷ್ಣ ಶಾವಂತಗೇರಿ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು,30–:ರಾಯಚೂರು ಕನ್ನಡ ರಾಜ್ಯೋತ್ಸವದ ಅಂಗವಾಗಿ ರಾಜ್ಯದ ಸರಕಾರಿ ನೌಕರರ ಸಾಂಸ್ಕೃತಿಕ ಪ್ರತಿಭೆಗೆ ವೇದಿಕೆಯೊದಗಿಸಲು ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘವು ರಾಜ್ಯಮಟ್ಟದ ಗುಂಪು ಸ್ಪರ್ಧೆಗಳನ್ನು ಆಯೋಜಿಸಿದೆ.

ನವೆಂಬರ್ 8ರಂದು ಬೆಂಗಳೂರಿನ ಕಬ್ಬನ್ ಉದ್ಯಾನವನದಲ್ಲಿರುವ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಆವರಣದಲ್ಲಿ ನಡೆಯುವ ಈ ರಾಜ್ಯೋತ್ಸವ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಲಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರು ದಿನೇಶ್ ಗುಂಡೂರಾವ್ ಮತ್ತು ಸಂತೋಷ್ ಲಾಡ್ ಸೇರಿದಂತೆ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ರಾಜ್ಯಮಟ್ಟದ ಈ ಸ್ಪರ್ಧೆಗಳಲ್ಲಿ ಸರಕಾರಿ ನೌಕರರು ತಮ್ಮ ತಂಡಗಳೊಂದಿಗೆ ಜನಪದ ನೃತ್ಯ, ಕನ್ನಡ ಗೀತೆಗಳು ಮತ್ತು ಇತರೆ ಸಾಂಸ್ಕೃತಿಕ ವಿಭಾಗಗಳಲ್ಲಿ ಭಾಗವಹಿಸಬಹುದು. ಭಾಗವಹಿಸಲು ಬಯಸುವವರು ಸಂಘ ನೀಡಿರುವ ಲಿಂಕ್ ಮೂಲಕ ನೋಂದಣಿ ಮಾಡಿಕೊಳ್ಳುವುದು ಕಡ್ಡಾಯವಾಗಿದೆ:*https://forms.gle/8pRm5nXOwwQZccs9*

ವಿಜೇತ ತಂಡಗಳಿಗೆ ಆಕರ್ಷಕ ಬಹುಮಾನಗಳನ್ನು ನೀಡಲಾಗುತ್ತದೆ ಪ್ರಥಮ ಬಹುಮಾನ: ₹1,00,000, ,ದ್ವಿತೀಯ ಬಹುಮಾನ: ₹75,000, ತೃತೀಯ ಬಹುಮಾನ: ₹50,000, ಸಮಾಧಾನಕರ ಬಹುಮಾನ: ₹20,000, ರಾಜ್ಯಮಟ್ಟದ ಈ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ರಾಯಚೂರು ಜಿಲ್ಲೆಯ ಸರಕಾರಿ ನೌಕರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ರಾಯಚೂರು ಜಿಲ್ಲಾ ಅಧ್ಯಕ್ಷ ಕೃಷ್ಣ ಶಾವಂತಗೇರಿ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ನಾಟಿ ಕೋಳಿ ಮರಿಗಳ ನೀಡುವ ಯೋಜನೆಗೆ ಮಹಿಳೆಯಿಂದ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 30 –ಜಿಲ್ಲೆಯ ಮಾನವಿ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯಿಂದ 2025–26ನೇ ಸಾಲಿನಲ್ಲಿ ಗ್ರಾಮೀಣ ರೈತ ಮಹಿಳೆಯರಿಗೆ ನಾಟಿ ಕೋಳಿಮರಿಗಳನ್ನು ನೀಡುವ ಯೋಜನೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

5 ವಾರದ ನಾಟಿ ಕೋಳಿಮರಿಗಳನ್ನು ಉತ್ಪಾದಿಸಿ ಗ್ರಾಮೀಣ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ, ಸಾಮಾನ್ಯ ವರ್ಗದ ರೈತ ಮಹಿಳೆಯರಿಗೆ ತಲಾ 20ರಂತೆ ವಿತರಿಸುವ ಕಾರ್ಯಕ್ರಮವನ್ನು ಮಾರ್ಗಸೂಚಿಯನ್ವಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಇವರ ಅಧ್ಯಕ್ಷತೆಯಲ್ಲಿ ಅನುಷ್ಠಾನಗೊಳಿಸಲು ಸರ್ಕಾರವು ತೀರ್ಮಾನಿಸಿದೆ. ಈ ಯೋಜನೆಯಡಿ ನಂಜುಂಡಪ್ಪ ವರದಿಯ ಪ್ರಕಾರ ಜಿಲ್ಲೆಯ ಹಿಂದುಳಿದ ತಾಲ್ಲೂಕು ಮಾನವಿಗೆ ಮಾತ್ರ ಅನ್ವಯವಾಗುವಂತೆ ಮೀಸಲಾತಿಯನ್ನನುಸರಿಸಿ ಪರಿಶಿಷ್ಟ ಜಾತಿ ವರ್ಗದವರಿಗೆ 17, ಪರಿಶಿಷ್ಟ ಪಂಗಡ ವರ್ಗದವರಿಗೆ 7, ಹಿಂದುಳಿದ ವರ್ಗದವರಿಗೆ 32 ಮತ್ತು ಸಾಮಾನ್ಯ ವರ್ಗದವರಿಗೆ 43ರಂತೆ ಒಟ್ಟು 99 ಫಲಾನುಭವಿಗಳ ಗುರಿಗಳನ್ನು ಸರ್ಕಾರದಿಂದ ನಿಗದಿಪಡಿಸಲಾಗಿದೆ. ಈ ಯೋಜನೆಯಡಿ ಆಯ್ಕೆಯಾದ ಪ್ರತಿ ಫಲಾನುಭವಿಗೆ 5 ವಾರದ 20 ನಾಟಿ ಕೋಳಿಮರಿಗಳನ್ನು ಉಚಿತವಾಗಿ ವಿತರಣೆ ಮಾಡಲಾಗುವುದು. ಈ ಯೋಜನೆಯಡಿ ಬಡತನರೇಖೆಗಿಂತ ಕೆಳಗಿರುವ ರೈತ ಮಹಿಳೆಯರಿಗೆ, ಸ್ವ ಸಹಾಯ ಗುಂಪಿನ ಮಹಿಳಾ ಸದಸ್ಯರಿಗೆ, ಪ್ರಾಥಮಿಕ ಕೋಳಿ ಸಹಕಾರ ಸಂಘಗಳಲ್ಲಿರುವ ಮಹಿಳಾ ಸದಸ್ಯರಿಗೆ, ರೈತಉತ್ಪಾದಕ ಸಂಸ್ಥೆಯ ಮಹಿಳಾ ಸದಸ್ಯರಿಗೆ ಆದ್ಯತೆ ನೀಡಿ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುತ್ತಿದ್ದು, ಆಸಕ್ತರು ಡಿಸೆಂಬರ್ 01ರೊಳಗಾಗಿ ಅರ್ಜಿ ಈ ಕಚೇರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮಾನವಿಯ ಪಶು ಆಸ್ಪತ್ರೆಯ ದೂರವಾಣಿ ಸಂಖ್ಯೆ: 08532–235350ಗೆ ಕಚೇರಿಯ ವೇಳೆಯಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ಮಾನವಿಯ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಮುಖ್ಯ ಪಶು ವೈದ್ಯಾಧಿಕಾರಿಗಳಾದ ಡಾ.ಬಸವರಾಜ ಹಿರೇಮಠ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

'ವಿಶ್ವ ಅಯೋಡಿನ್ ಕೊರತೆಯ ನ್ಯೂನ್ಯತೆಗಳ ನಿಯಂತ್ರಣ ದಿನ ಹಾಗೂ ಸಪ್ತಾಹ' ಕಾರ್ಯಕ್ರಮದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ಹೇಳಿಕೆ

# ಅಯೋಡಿನ್‌ಯುಕ್ತ ಉಪ್ಪನ್ನೇ ಬಳಸಿರಿ, ಅಯೋಡಿನ್ ಕೊರತೆಯ ನ್ಯೂನ್ಯತೆ ತಡೆಗಟ್ಟಿರಿ





ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.28–ಅಯೋಡಿನ್ ಮನುಷ್ಯನಿಗೆಅತ್ಯಗತ್ಯವಾಗಿಬೇಕಾಗುವ ಒಂದುಸೂಕ್ಷ್ಮ ಪೋಷಕಾಂಶವಾಗಿದ್ದು, ಪ್ರತಿಯೊಬ್ಬರುದಿನನಿತ್ಯಆಹಾರದಲ್ಲಿ ಅಯೋಡಿನ್‌ಯುಕ್ತಉಪ್ಪುಬಳಸುವ ಮೂಲಕ ಆಯೋಡಿನ್ ಕೊರತೆ–ಯ ನ್ಯೂನ್ಯತೆ ತಡೆಗಟ್ಟಬಹುದು ಎಂದು ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ.ವಿ.ಕೆ ಅವರು ಹೇಳಿದರು.

ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,ಜಿಲ್ಲಾ ಸರ್ವೇಕ್ಷಣಾ ಘಟಕ ಇವರ ಸಂಯುಕ್ತಾಶ್ರಯದಲ್ಲಿ ಅಯೋಡಿನ್ ಕೊರತೆಯನ್ಯೂನ್ಯತೆಗಳ ನಿಯಂತ್ರಣ ಕಾರ್ಯಕ್ರಮದಡಿ ನಗರದ ಸರ್ಕಾರಿ (ಮಾಜಿ ಪುರಸಭೆ) ಪದವಿ ಪೂರ್ವ ಕಾಲೇಜಿನಲ್ಲಿ ಮಂಗಳವಾರ ಆಯೋಜಿಸಿದ್ದ 'ವಿಶ್ವ ಅಯೋಡಿನ್ ಕೊರತೆಯ ನ್ಯೂನ್ಯತೆಗಳ ನಿಯಂತ್ರಣ ದಿನ ಹಾಗೂ ಸಪ್ತಾಹ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಆಯೋಡಿನ್ ದೈಹಿಕ ಹಾಗೂ ಮಾನಸಿಕಬೆಳವಣಿಗೆಗೆಅತ್ಯವಶ್ಯಕವಾಗಿದೆ. ಥೈರಾಯಿಡ್ ಗ್ರಂಥಿಯು ನಮ್ಮದೇಹಕ್ಕೆ ಅವಶ್ಯಕವಿರುವ ಹಾರ್ಮೋನ್‌ಗಳನ್ನು ಉತ್ಪತ್ತಿ ಮಾಡಲು ಅಯೋಡಿನ್ ಅಂಶ ಪೂರಕವಾಗಿದೆ. ಹಾಗಾಗಿ ದಿನನಿತ್ಯ ಹಸಿರು ಸೊಪ್ಪು ಮತ್ತು ತರಕಾರಿ ಸೇವನೆಯ ಮೂಲಕ ತಾಜಾ ತರಕಾರಿಯೊಂದಿಗೆ ಅಯೋಡಿನ್‌ಯುಕ್ತ ಉಪ್ಪು ಬಳಕೆ ಮಾಡುಬೇಕು ಎಂದು ಅವರು ತಿಳಿಸಿದರು.

ಉಪ್ಪಿನ ಜಾಡಿಯನ್ನು ಭದ್ರವಾಗಿ ಮುಚ್ಚುವ ಮೂಲಕ ಅಯೋಡಿನ್ ಕೊರತೆಯಿಂದ ಉಂಟಾಗುವ ನ್ಯೂನ್ಯತೆಗಳನ್ನುನಿಯಂತ್ರಿಸಬಹುದಾಗಿದೆ ಎಂದರು.

ಕಾರ್ಯಕ್ರಮದಲ್ಲಿಮೈಕ್ರೋಬಯಾಲಾಜಿಸ್ಟ್ ಶರತ್‌ಬಾಬು.ಕೆ ಅವರು ಮಾತನಾಡಿ, ಅಯೋಡಿನ್ ಕೊರತೆಯಿಂದ ಹೆಚ್ಚಾಗಿ ಮಕ್ಕಳು, ವಯಸ್ಕರು, ಗರ್ಭಿಣಿ ಮಹಿಳೆಯರಲ್ಲಿ ನ್ಯೂನತೆಗಳು ಕಂಡುಬರುತ್ತವೆ. ಮುಖ್ಯವಾಗಿ ಮಕ್ಕಳಲ್ಲಿ ಬುದ್ದಿಮಾಂದ್ಯತೆ,ಕುಬ್ಜತನ, ದೇಹದ ಅಂಗಾಂಗಳ ಕುಂಠಿತ ಬೆಳವಣಿಗೆ, ವಯಸ್ಕರಲ್ಲಿ ನಿಶ್ಯಕ್ತಿ, ಕಾರ್ಯನಿರ್ವಹಣೆಯಲ್ಲಿವೈಫಲ್ಯತೆ, ಗಳಗಂಡ ರೊಗ,ಗರ್ಭಿಣಿಯರಲ್ಲಿ ಪದೇ ಪದೇ ಗರ್ಭಪಾತ, ಸಂತಾನೋತ್ಪತ್ತಿಯ ತೊಂದರೆ, ಅಂಗವಿಕಲತೆ, ಬುದ್ಧಿಮಾಂದ್ಯತೆ ಇರುವ ಮಕ್ಕಳು ಹುಟ್ಟುವ ಸಾಧ್ಯತೆ ಇರುತ್ತದೆ ಎಂದು ತಿಳಿಸಿದರು.

ದಿನನಿತ್ಯಸೇವಿಸುವ ಆಹಾರದಲ್ಲಿ ವಯಸ್ಸಿಗೆ ಅನುಗುಣವಾಗಿ ಅಯೋಡಿನ್ ಅಂಶ ಎಷ್ಟಿರಬೇಕು ಬಳಸಬೇಕು ಎನ್ನುವುದರ ಬಗ್ಗೆ ಅರಿವು ಹೊಂದಬೇಕು ಎಂದರು.

ಸರ್ಕಾರಿ (ಮಾಜಿ ಪುರಸಭೆ) ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಸುಂಕಪ್ಪ ಅವರು ಮಾತನಾಡಿ,ಮನುಷ್ಯನ ಆರೋಗ್ಯ ಸ್ಥಿರವಾಗಿರುವಲ್ಲಿ ಅಯೋಡಿನ್ ಅಂಶ ತುಂಬಾ ಅವಶ್ಯಕವಾಗಿದೆ. ಹಾಗಾಗಿ ಆರೋಗ್ಯ ಇಲಾಖೆಯಿಂದ ತಿಳಿಸಲಾದ ಮುಂಜಾಗ್ರತಾ ಕ್ರಮಗಳನ್ವಯ ವಿದ್ಯಾರ್ಥಿಗಳು ಗಮನದಲ್ಲಿಟ್ಟುಕೊಂಡು ತಮ್ಮ ಕುಟುಂಬರಿಗೆ ಮತ್ತು ಅಕ್ಕಪಕ್ಕದ ಸಾರ್ವಜನಿಕರಿಗೆಅಯೋಡಿನ್‌ಯುಕ್ತ ಉಪ್ಪನ್ನು ಬಳಸಲು ತಿಳಿಸಬೇಕು ಮತ್ತು ಅವರಲ್ಲಿ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.

ಬಳಿಕ ಪ್ರಾಯೋಗಿಕವಾಗಿ ಉಪ್ಪಿನಲ್ಲಿ ಅಯೋಡಿನ್ ಅಂಶವನ್ನುಪರೀಕ್ಷಿಸುವ ವಿಧಾನದ ಬಗ್ಗೆ ವಿದ್ಯಾರ್ಥಿಗಳಿಗೆ ತಿಳಿಸಲಾಯಿತು.

ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಧ್ಯಾಪಕರಾದ ನಾಗರಾಜಪ್ಪ, ಗಾದಿಲಿಂಗಪ್ಪ, ತಿಮ್ಮಪ್ಪ, ಅಕ್ಕಿ ಮಲ್ಲಿಕಾರ್ಜುನ, ಎನ್.ಸಿ.ಡಿ ಜಿಲ್ಲಾ ಕಾರ್ಯಕ್ರಮ ಸಂಯೋಜ–ಕರಾದ ಡಾ.ಜಬೀನ್‌ತಾಜ್, ಜಿಲ್ಲಾ ಮೈಕ್ರೋಬಯಾಲಾಜಿಸ್ಟ್ ಶರತ್ ಬಾಬು,ಜಿಲ್ಲಾ ತಂಬಾಕು ಸಲಹೆಗಾರ ಪ್ರಶಾಂತ್ ಸೇರಿದಂತೆಜಿಲ್ಲಾಸರ್ವೇಕ್ಷಣಾ ಘಟಕದ ಸಿಬ್ಬಂದಿ, ಜಿಲ್ಲಾ ಕಾಲರ ನಿಯಂತ್ರಣ ತಂಡದ ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸಿರುಗುಪ್ಪ: ಮೆಣಸಿನಕಾಯಿ ಬೆಳೆಯಲ್ಲಿ ರೋಗ, ಕೀಟ ನಿರ್ವಹಣೆಗೆ ಸೂಕ್ತ ಕ್ರಮ ಅನುಸರಿಸಲು ತೋಟಗಾರಿಕೆ ಇಲಾಖೆ ಸಲಹೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.28–ಜಿಲ್ಲೆಯಲ್ಲಿ ಪ್ರಸ್ತುತ ಮಳೆ, ಮೋಡ ಕವಿದ ವಾತಾವರಣ ಹಾಗೂ ತಾಪಮಾನ ಏರುಪೇರುನಿಂದ ಮೆಣಸಿನಕಾಯಿ ಬೆಳೆಗೆ ಹೊಸ ಥ್ರಿಪ್ಸ್ ನುಸಿ (ಥ್ರಿಪ್ಸ್ ಪಾರ್ವಿಸ್ಪಿನಸ್) ಕೀಟ ಸೇರಿದಂತೆ ಎಲೆ ಮುಟುರು ರೋಗ, ಬೂದಿ ರೋಗ, ಹಣ್ಣು ಕೊಳೆ ರೋಗದ ನಿರ್ವಹಣೆಗೆ ರೈತರು ಸೂಕ್ತ ಕ್ರಮ ಅನುಸರಿಸಬೇಕು ಎಂದು ಸಿರುಗುಪ್ಪದ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ತಿಳಿಸಿದ್ದಾರೆ.

ಪ್ರಸಕ್ತ ಸಾಲಿನಲ್ಲಿ ಸಿರುಗುಪ್ಪ ತಾಲ್ಲೂಕಿನಲ್ಲಿ 3920 ಹೆಕ್ಟೇರ್ ಗಿಂತ ಹೆಚ್ಚು ಪ್ರದೇಶದಲ್ಲಿ ಮೆಣಸಿನಕಾಯಿ ಬೆಳೆಯಲಾಗಿದೆ. ಕಳೆದ ವರ್ಷಗಳಲ್ಲಿ ಮೆಣಸಿನಕಾಯಿ ಬೆಳೆಗೆಭಾದಿಸಿದ್ದ ಹಲವು ರೋಗಗಳು ಪ್ರಸ್ತುತದಲ್ಲಿಯೂ ಭಾದಿಸುತ್ತಿವೆ. ಇದರಿಂದ ಮೆಣಸಿನಕಾಯಿ ಬೆಳೆಯ ಇಳುವರಿ ಮೇಲೆ ಪರಿಣಾಮ ಬೀರುವ ಸಾಧ್ಯತೆಯಿದ್ದು, ರೈತರು ಅಗತ್ಯ ಮುಂಜಾಗ್ರತಾ ಕ್ರಮವಹಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ.

*ಥ್ರಿಪ್ಸ್ ನುಸಿ:*

ಈ ರೋಗದಲ್ಲಿ ಪ್ರೌಢ ಕೀಟಗಳು ಗುಂಪುಗುಂಪಾಗಿಎಲೆಗಳಕೆಳಭಾಗದಲ್ಲಿ, ಹೂಗಳ ಒಳಗೆ ಮತ್ತು ಹೊರಗೆ ಕಂಡುಬರುತ್ತವೆ. ಮರಿ ಹಂತದ ನುಸಿಗಳು ಎಲೆಗಳ ಕೆಳಭಾಗದಲ್ಲಿ ಕೇಂದ್ರೀಕೃತಗೊಂಡಿರುತ್ತವೆ.

ಕೀಟಗಳುಸಸ್ಯದ ಬಹುಭಾಗಗಳಿಂದ ರಸ ಹೀರುವುದರಿಂದ ಸಸ್ಯದ ಬೆಳವಣಿಗೆ ಕುಂಠಿತಗೊಳ್ಳುತ್ತದೆ. ಎಲೆಗಳ ಅಂಚುಗಳು ಮೇಲ್ಮುಖವಾಗಿ ಮುದುಡುವುದು, ಹೂಗಳು ಉದುರುವುದು ಮತ್ತು ಬೆಳವಣಿಗೆ ಹಂತದಲ್ಲಿರುವ ಚಿಗುರುಗಳು ಗುಂಪಾಗಿ ಹೂಬಿಡದೇ ಒಣಗುವುದು ಸಾಮಾನ್ಯವಾಗಿ ಕಂಡುಬರುವ ಹಾನಿಯ ಲಕ್ಷಣಗಳಾಗಿವೆ. ಕಾಲ ಕ್ರಮೇಣ, ಕಾಯಿಗಳ ಸಂಖ್ಯೆ ಕಡಿಮೆಯಾಗಿ ಇಳುವರಿಯುಗಣನೀಯಪ್ರಮಾಣದಲ್ಲಿ ಕುಂಠಿತಗೊಳ್ಳುತ್ತದೆ.

*ನಿರ್ವಹಣಾ ಕ್ರಮ:*

ರೈತರು ತಮ್ಮ ಮೆಣಸಿನಕಾಯಿ ಬೆಳೆಯ ಹೊಲದ ಸುತ್ತಲೂ 2–3 ಸಾಲು ಜೋಳ, ಮೆಕ್ಕೆಜೋಳ, ಸಜ್ಜೆಯನ್ನು ಬೇಲಿ ಬೆಳೆಯಾಗಿ ದಟ್ಟವಾಗಿ ಬಿತ್ತುವುದರಿಂದ ಕೀಟಗಳ ಪ್ರಸಾರ ನಿಯಂತ್ರಿಸಬಹುದು. ಹೊಲ ಮತ್ತು ಬದುಗಳ ಸ್ವಚ್ಛತೆಯಿಂದ ಥ್ರಿಪ್ಸ್ ನುಸಿಗಳಿಗೆ ಆಸರೆ ನೀಡುವ ಕಳೆಗಳ ನಿರ್ಮೂಲನೆ ಮಾಡಬಹುದು. ಸೂಕ್ತ ಅಂತರ (90*30 ಸೆಂ.ಮೀ/60*45 ಸೆಂ.ಮೀ) ಕಾಪಾಡಬೇಕು.

ಚೆನ್ನಾಗಿ ಕೊಳೆತ ಕೊಟ್ಟಿಗೆ ಗೊಬ್ಬರದೊಡನೆ ಮೆಟಾರೈಜಿಯಮ್ ಅನಿಸೋಪ್ಲಿಯೆ ಎಂಬ ಶಿಲೀಂಧ್ರ ಕೀಟನಾಶಕದಿಂದ (2–3 ಕೆ.ಜಿ/ಟನ್) ಮೌಲ್ಯವರ್ಧನೆಗೊಳಿಸಿ ಹೊಲಗಳಿಗೆ ಹಾಕಬೇಕು. ಬೇವಿನ ಹಿಂಡಿ (200 ಕೆ.ಜಿ/ಎಕರೆಗೆ) ಮತ್ತು ಎರೆಹುಳು ಗೊಬ್ಬರವನ್ನು (500 ಕೆ.ಜಿ/ಎಕ–ರೆಗೆ) ಮಣ್ಣಿನಲ್ಲಿ ಬೆರೆಸುವುದರಿಂದ ನಿರೋಧಕ ಶಕ್ತಿ ವೃದ್ಧಿಗೊಳ್ಳುತ್ತದೆ.

ಶಿಫಾರಸ್ಸು ಪ್ರಮಾಣದ ರಸಗೊಬ್ಬರದೊಂದಿಗೆ ಪೊಟ್ಯಾಶ್‌ನ ಬಳಕೆ ವೃದ್ಧಿಸುವುದರಿಂದ ಕೀಟ ನಿರೋಧಕ ಶಕ್ತಿ ಹೆಚ್ಚುತ್ತದೆ. ನೀಲಿ ಅಂಟಿನ ಬಲೆಗಳನ್ನು @ 25–30/ಎಕರೆಗೆ ಬೆಳೆಯ ಎತ್ತರ–ಕ್ಕೆ ಅಳವಡಿಸಬೇಕು. ಆಗಾಗ ಕುಂಟೆಯೊಡೆಯುವುದರಿಂದ ಕೋಶಾವಸ್ಥೆಯಲ್ಲಿರುವ ಥ್ರಿಪ್ಸ್ ನುಸಿಯನ್ನು ನಾಶಪಡಿಸಬಹುದು.

ಸಾಧ್ಯವಾದಲ್ಲಿ ಕಾಲುವೆ ಮುಖಾಂತರ ನೀರುಣಿಸುವ ಬದಲು ತುಂತುರು ನೀರಾವರಿ ಅಥವಾ ಹನಿ ನೀರಾವರಿ ಪದ್ಧತಿ ಅಳವಡಿಸಬೇಕು. ಸಿಲ್ವರ್ ಬಣ್ಣದ ಪ್ಲಾಸ್ಟಿಕ್ ಶೀಟ್ (25–30 ಮೈಕ್ರಾನ್) ನಿಂದ ಮಲ್ಚಿಂಗ್ ಮಾಡುವುದರಿಂದ ಮಣ್ಣಿನಲ್ಲಿ ಕೋಶಾವಸ್ಥೆಗೆ ಹೋಗುವುದನ್ನು ತಡೆಯಬಹುದು. ತೀವ್ರಭಾದೆಗೊಳಗಾದ ಗಿಡಗಳನ್ನು ಕಿತ್ತುಗುಂಡಿಯಲ್ಲಿ ಮುಚ್ಚಬೇಕು ಅಥವಾ ಸುಡಬೇಕು.

ಪರಭಕ್ಷಕ/ಮಿತ್ರಕೀಟಗಳ ವೃದ್ಧಿಗಾಗಿ ಹೆಚ್ಚಿನ ಪ್ರಮಾಣದಲ್ಲಿ ರಾಸಾಯನಿಕ ಕೀಟನಾಶಕಗಳ ಬದಲು ಪರಿಸರ ಸ್ನೇಹಿ ಕೀಟನಾಶಕಗಳಾದ ಶೇ.5 ರ ಬೇವಿನ ಬೀಜದ ಕಷಾಯ, ಬೇವಿನ ಎಣ್ಣೆ (3000 ಪಿ.ಪಿ.ಎಂ) @ 2 ಮಿ.ಲೀ/ಲೀ, ಹೊಂಗೆ ಎಣ್ಣೆ @ 3 ಮಿ.ಲೀ/ಲೀ ನೀರಿಗೆ ಬೆರೆಸಿ ಸಿಂಪಡಿಸಬೇಕು.

ಶಿಲೀಂಧ್ರ ಕೀಟನಾಶಕಗಳಾದ ಬಿವೇರಿಯಾ ಬಸ್ಸಿಯಾನ ಅಥವಾ ಲೆಕ್ಯಾನಿಸಿಲಿಯಂ ಲೆಕ್ಯಾನಿ ಅಥವಾ ಮೆಟಾರೈಜಿಯಮ್‌ಅನಿಸೋಪ್ಲಿಯೇಯನ್ನು @ 4 ಗ್ರಾಂ/ಲೀ ನೀರಿಗೆ ಬೆರೆಸಿ ಸಿಂಪಡಿಸಬೇಕು.ಅವಶ್ಯಕತೆಗನುಸಾರವಾಗಿ ಶಿಫಾರಸ್ಸು ಮಾಡಿರುವ ರಾಸಾಯನಿಕ ಕೀಟನಾಶಕಗಳದ 0.3 ಮಿ.ಲೀ ಇಮಿಡಾಕ್ಲೋಪ್ರಿಡ್ 17.8 ಎಸ್.ಎಲ್ ಅಥವಾ 0.2 ಗ್ರಾಂ. ಥಯೋಮೆಥಾಕ್ಸಾಮ್ 25 ಡಬ್ಲ್ಯೂ.ಜಿ ಅಥವಾ 1.0 ಮಿ.ಲೀ ಫಿಪ್ರೋನಿಲ್ 5 ಎಸ್.ಸಿ ಅಥವಾ 1.0 ಗ್ರಾಂ. ಡಯಾಫೆನ್ ಥಯೂರಾನ್ 50 ಡಬ್ಲ್ಯೂ.ಪಿ ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪಡಿಸಬೇಕು ಎಂದು ಅವರು ತಿಳಿದ್ದಾರೆ.

*ಎಲೆ ಮುಟುರು ರೋಗ:*

ಈ ರೋಗವನ್ನು ಹಳದಿ ಮಿಶ್ರಿತ ಹಸಿರು ಭಾಗವನ್ನು ಎಲೆಯಲ್ಲಿ ಕಾಣಬಹುದು. ಎಲೆಗಳು ವಕ್ರಾಕಾರದ ಅಥವಾ ಮುಟುರು ಎಲೆಗಳನ್ನು ಕಾಣಬಹುದು. ಆ ಮೇಲೆ ಗಿಡಗಳ ಬೆಳವಣಿಗೆಕುಂಠಿತಗೊಳ್ಳುತ್ತದೆ.ಮುಟುರು ರೋಗದ ಬಾಧೆ ತಡೆಗಟ್ಟಲು ಶೇ.0.5 ರ ಬೆಳ್ಳೊಳ್ಳಿ, ಹಸಿಮೆಣಸಿನಕಾಯಿ, ಸೀಮೆ ಎಣ್ಣೆ ಕಷಾಯವನ್ನು ಬೇವು ಜನ್ಯ ಕೀಟನಾಶಕದೊಂದಿಗೆ (2.5 ಮಿ. ಲೀ ಪ್ರತಿ ಲೀಟರ್ ನೀರಿಗೆ) ಬೆರಸಿ ಅವಶ್ಯವಿದ್ದಾಗ ಸಿಂಪರಣೆ ಮಾಡಬೇಕು.

ಪ್ರಮುಖವಾಗಿ ಮೆಣಸಿನಕಾಯಿಯಲ್ಲಿ ಬೆಳೆಯಲ್ಲಿ ಬರುವ ಥ್ರಿಪ್ಸ್, ಮೈಟ್ಸ್, ಬಿಳಿ ನೋಣ ಹಾಗೂ ರಸಹಿರುವ ಕೀಟಗಳ ನಿರ್ವಹಣೆ ಮಾಡುವುದು ಎಲೆ ಮುಟುರು ರೋಗದ ನಿರ್ವಹಣೆಯಲ್ಲಿ ಪ್ರಮುಖ ಪಾತ್ರ ವಹಿಸಿತ್ತದೆ.

ಕೀಟನಾಶಕಗಳದ 0.3 ಮಿ.ಲೀ ಇಮಿಡಾಕ್ಲೋಪ್ರಿಡ್ 17.8 ಎಸ್. ಎಲ್ ಅಥವಾ 0.2 ಗ್ರಾಂ. ಥಯೋಮೆಥಾಕ್ಸಾಮ್ 25 ಡಬ್ಲ್ಯೂ.ಜಿ ಅಥವಾ 1.0 ಮಿ.ಲೀ ಫಿಪ್ರೋನಿಲ್ 5 ಎಸ್.ಸಿ ಅಥವಾ 1.0 ಗ್ರಾಂ. ಡಯಾಫೆನ್ ಥಯೂರಾನ್ 50 ಡಬ್ಲ್ಯೂ.ಪಿ ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪಡಿಸಬೇಕು.

*ಬೂದಿ ರೋಗ:*

ಈ ರೋಗದಲ್ಲಿ ಬೂದು ಬಣ್ಣದ ಮಚ್ಚೆಗಳನ್ನು ಎಲೆಯಲ್ಲಿ ಕಾಣಬಹುದು. ಈ ರೋಗ ಕಂಡು ಬಂದಲ್ಲಿ 1 ಗ್ರಾಂ ಕಾರ್ಬಂಡೈಜಿಮ್ ಅಥವಾ 3 ಗ್ರಾಂ ನೀರಿನಲ್ಲಿ ಕರಗುವ ಗಂಧಕ ಒಂದು ಲೀಟರ್ ನೀರಿನಲ್ಲಿ ಬೆರಸಿ ಸಿಂಪಡಿಸಬೇಕು. ರೋಗ ಲಕ್ಷಣಗಳು ಕಡಿಮೆಯಾಗದ್ದಿದಲ್ಲಿ ಇದೇ ಸಿಂಪರಣೆಯನ್ನು 15 ದಿನಗಳ ಅಂತರದಲ್ಲಿ ಇನ್ನೂ ಎರಡು ಬಾರಿ ಕೈಗೊಳ್ಳಬಹುದು.

ಇಲ್ಲವೇ 1 ಗ್ರಾಂ ಅಜೋಕ್ಸಿಸ್ಟ್ರೋಬಿನ್ 23% ಎಸ್‌ಟಿ ರೋಗ ನಾಷಕವನ್ನು ಪ್ರತಿ ಲೀಟರ್ ನೀರಿಗೆ ಬೇರಸಿ ಸಿಂಪಡಿಸಬಹುದು ಅಥವಾ ಹೆಕ್ಸಾಕೋನಜೋಲ್ 2 % ಎಸ್‌ಸಿ ರೋಗ ನಾಷಕವನ್ನು ಪ್ರತಿ ಲೀಟರ್ ನೀರಿಗೆ ಬೇರಸಿ ಸಿಂಪಡಿಸಬಹುದು.


*ಹಣ್ಣು ಕೊಳೆ ರೋಗ:*

ಈ ರೋಗದಲ್ಲಿ ಹಣ್ಣುಗಳ ಮೇಲೆ ವೃತ್ತಾಕಾರದ ತಗ್ಗಾದ ಕಪ್ಪನೆಯ ಚುಕ್ಕೆಗಳು ಕಾಣಿಸಿಕೊಳ್ಳುತ್ತವೆ. ಒಳಗಿನ ಬಣ್ಣವು ಗುಲಾಬಿ ವರ್ಣದಿಂದ ಕೂಡಿರುತ್ತದೆ. ಆ ಮೇಲೆ ಕಪ್ಪಾಗುತ್ತವೆ. ಮೆಣಸಿನಕಾಯಿ ಬೆಳೆಗೆ ತುದಿ ಸಾಯುವ ರೋಗ, ಹಣ್ಣು ಕೊಳೆಯುವ ರೋಗ ಹಾಗೂ ಬೂದಿ ರೋಗಗಳು ಕಂಡು ಬಂದಾಗ 1 ಗ್ರಾಂ ಕಾರ್ಬಂಡೈಜಿಮ್ ಪ್ರತಿ ಲೀಟರ್ ನೀರಿನಲ್ಲಿ ಬೆರಸಿ 15 ದಿನಗಳ ಅಂತರದಲ್ಲಿ ನಾಲ್ಕು ಸಾರಿ ಸಿಂಪಡಿಸಬೇಕು.

ಇಲ್ಲವೇ 1 ಗ್ರಾಂ ಅಜೋಕ್ಸಿಸ್ಟ್ರೋಬಿನ್ 23% ಎಸ್‌ಟಿ ರೋಗ ನಾಷಕವನ್ನು ಪ್ರತಿ ಲೀಟರ್ ನೀರಿಗೆ ಬೇರಸಿ ಸಿಂಪಡಿಸಬಹುದು ಅಥವಾ ಹೆಕ್ಸಾಕೋನಜೋಲ್ 2 % ಎಸ್‌ಸಿ ರೋಗ ನಾಷಕವನ್ನು ಪ್ರತಿ ಲೀಟರ್ ನೀರಿಗೆ ಬೇರಸಿ ಸಿಂಪಡಿಸಬಹುದು.

ಈ ಮೇಲ್ಕಂಡ ಎಲ್ಲಾ ಅಗತ್ಯವಿರುವ ನಿರ್ವಹಣಾಕ್ರಮಗಳನ್ನು ಪಾಲಿಸಿಕೊಂಡು ರೈತರು ಸಕಾಲದಲ್ಲಿ ಮೆಣಸಿನಕಾಯಿ ಬೆಳೆಗೆ ಔಷಧಿಗಳನ್ನು ಸೂಕ್ತ ರೀತಿಯಲ್ಲಿ ಸಿಂಪಡಿಸಿ ಉತ್ತಮ ಗುಣಮಟ್ಟದ ಇಳುವರಿ ಪಡೆಯಬಹುದು ಎಂದು ಸಿರುಗುಪ್ಪದ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಹದ್ದೂರ ಬಂಡಿ ಗ್ರಾಮದಲ್ಲಿ ಜನಪದ ಕಲಾ ತಂಡಗಳಿಂದ ಜಾಗೃತಿ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕೊಪ್ಪಳ, ಸಮುದಾಯ ಆರೋಗ್ಯ ಕೇಂದ್ರ, ಹಿರೇಸಿಂದೋಗಿ ಇವರ ಸಂಯುಕ್ತಾಶ್ರಯದಲ್ಲಿ ಶ್ರೀ ಕಾರ್ಗಿಲ್ ಮಲ್ಲಯ್ಯ ಅಂಗವಿಕಲರ ಕಲಾ ಸಂಸ್ಥೆ(ರಿ), ಅಳವಂಡಿ ಇವರಿಂದ ಬಹದ್ದೂರಬಂಡಿಗ್ರಾಮದಲ್ಲಿಅಕ್ಟೋಬರ್ 25 ರಂದು ಬಾಲ್ಯವಿವಾಹ ನಿಷೇಧ ಹಾಗೂ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಸಾಂಕ್ರಾಮಿಕ, ಅಸಾಂಕ್ರಾಮಿಕ ರೋಗಗಳ ನಿಯಂತ್ರಣ ಕುರಿತು ಜಾನಪದ ಕಲಾ ತಂಡದಿಂದ ಬೀದಿನಾಟಕದ ಮೂಲಕ ಜಾಗೃತಿ ಮೂಡಿಸುವ ಕಾರ್ಯಕ್ರಮವನ್ನುಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವ್ಹಿ.ಪಿ. ಅವರು ಜಿಲ್ಲೆಯಲ್ಲಿ ಬಾಲ್ಯವಿವಾಹ ತಡೆಗಟ್ಟಲು,ಸಾಂಕ್ರಾಮಿಕ,ಅಸಾಂಕ್ರಾಮಿಕ ರೋಗಗಳ ನಿಯಂತ್ರಣ ಮತ್ತು ಆರೋಗ್ಯ ಇಲಾಖೆಗಳ ಯೋಜನೆಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲು ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಜಿಲ್ಲೆಯಲ್ಲಿ ನಾಲ್ಕು ಕಲಾತಂಡಗಳಿಂದ ವಿವಿಧ ಗ್ರಾಮಗಳಲ್ಲಿಅರಿವುಮೂಡಿಸಲಾಗುತ್ತದೆ. ಬಾಲ್ಯವಿವಾಹ ಮಾಡುವುದರಿಂದ ಹೆಣ್ಣುಮಕ್ಕಳ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತದೆ. ಅಪೌಷ್ಠಿಕ ಮಗು, ವಿಕಲಾಂಗ ಮಗುವಿನ ಜನನ, ಗರ್ಭಪಾತ ಹಾಗೂ ಹೆರಿಗೆ ಸಂದರ್ಭದಲ್ಲಿ ತಾಯಿ ಮತ್ತು ಮಗುವಿನ ಜೀವಕ್ಕೆಅಪಾಯ ಉಂಟಾಗುವ ಸಾಧ್ಯತೆ ಇರುತ್ತದೆ. ಬಾಲ್ಯವಿವಾಹ ಸಮಾಜದ ಒಂದು ಪಿಡುಗು. ಪಾಲಕರು ಮತ್ತು ಮಕ್ಕಳ ಶಿಕ್ಷಣಕ್ಕೆ ಮೊದಲು ಆದ್ಯತೆ ನೀಡಿ ನಂತರ ಸರ್ಕಾರ ನಿಗದಿಪಡಿಸಿದ ಸರಿಯಾದ ವಯಸ್ಸಿಗೆ ಮದುವೆ ಮಾಡಬೇಕು ಎಂದು ಹೇಳಿದರು.

ಮಕ್ಕಳ ಬಾಲ್ಯವನ್ನು ಅವರಿಗೆ ಅನುಭವಿಸಲು ಬಿಡಬೇಕು. 2006ರ ಬಾಲ್ಯವಿವಾಹ ನಿಷೇಧ ಕಾಯ್ದೆ ಪ್ರಕಾರ ಬಾಲ್ಯವಿವಾಹ ಮಾಡಿದರೆ ಅಂತವರ ವಿರುದ್ಧ 2 ವರ್ಷದವರೆಗೆ ಕಠಿಣ ಜೈಲು ಶಿಕ್ಷೆ ಹಾಗೂ ರೂ.1 ಲಕ್ಷ ದಂಡ ವಿಧಿಸಲಾಗುತ್ತದೆ. ಬಾಲ್ಯವಿವಾಹ ಮಾಡಲು ಪಾಲಕರಲ್ಲಿರುವ ಮೂಢನಂಬಿಕೆ, ಅನಕ್ಷರತೆ, ಆಸ್ತಿ ಉಳಿಸಿಕೊಳ್ಳುವಿಕೆ ಮುಂತಾದ ಕಾರಣಗಳಿಂದ ಬಾಲ್ಯವಿವಾಹ ನಡೆಯುತ್ತದೆ. ಆದ್ದರಿಂದ ಗ್ರಾಮದಲ್ಲಿ ಯಾರೂ ಬಾಲ್ಯವಿವಾಹ ಮಾಡದಂತೆ ಎಚ್ಚರಿಕೆ ವಹಿಸಬೇಕು. ಎಲ್ಲರೂ ಸೇರಿ ಬಾಲ್ಯ ವಿವಾಹ ಮುಕ್ತ ಕೊಪ್ಪಳ ಜಿಲ್ಲೆಯನ್ನಾಗಿ ಮಾಡಲು ಸಹಕರಿಸಬೇಕು ಎಂದು ಹೇಳಿದರು. ತಾಯಿ–ಮಕ್ಕಳ ಆರೋಗ್ಯ ರಕ್ಷಣೆ ಕುರಿತು, ಕುಟುಂಬ ಕಲ್ಯಾಣ ಕಾರ್ಯಕ್ರಮದ ತಾತ್ಕಾಲಿಕ ಮತ್ತು ಶಾಶ್ವತ ವಿಧಾನಗಳು,ಸೋಂಕಿತ ಸೊಳ್ಳೆಗಳಿಂದ ಹರಡುವ ಡೆಂಗ್ಯೂ, ಚಿಕನ್‌ಗುನ್ಯ, ಮಲೇರಿಯಾ, ಮೆದುಳು ಜ್ವರ, ಆನೆಕಾಲು ರೋಗಗಳ ನಿಯಂತ್ರಣ, ಕ್ಷಯರೋಗನಿರ್ಮೂಲನೆ,ಕುಷ್ಠರೋಗ ನಿರ್ಮೂಲನೆ ಹಾಗೂ ಅಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕೆ ಉತ್ತಮ ಜೀವನ ಶೈಲಿಯ ಆಹಾರ ಸೇವನೆ ಮತ್ತು ಆರೋಗ್ಯಕರ ಅಭ್ಯಾಸಗಳು, ಮಾನಸಿಕ ಆರೋಗ್ಯ ಕಾರ್ಯಕ್ರಮ, ಹಾವು ಕಡಿತ ನಿಯಂತ್ರಣ, ಗ್ರಾಮದಲ್ಲಿ ಸ್ವಚ್ಛತೆ ಕಾಪಾಡುವ ಬಗ್ಗೆ ಹಾಗೂ ಇತರೆ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಕುರಿತು ಕಲಾತಂಡಗಳಿಂದ ಜಾಗೃತಿ ಮೂಡಿಸಲಾಗುತ್ತದೆ. ಇದರ ಸದುಪಯೋಗ ಪಡೆದುಕೊಳ್ಳುವಂತೆ ಸಾರ್ವಜನಿಕರಿಗೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತ್ ಸದಸ್ಯರಾದ ದಾದಾಪೀರ್ ಮಂಡಲಗೇರಿ, ಮಾಜಿ ಗ್ರಾ.ಪಂ. ಸದಸ್ಯರಾದ ರಾಜಾಸಾಬ್, ಶಿವಪ್ಪ ಗ್ಯಾನಪ್ಪನವರ್, ಕಾರ್ಗಿಲ್ ಮಲ್ಲಯ್ಯ ಅಂಗವಿಕಲರ ಕಲಾ ಸಂಸ್ಥೆಯ ವೀರೇಶ್, ಶ್ರೀಮತಿ ಸಿದ್ದಲಿಂಗಮ್ಮ, ಮಹದೇವಪ್ಪ, ಸಿದ್ದಲಿಂಗಯ್ಯಸ್ವಾಮಿ, ನಾಗರಾಜ, ವಿರುಪಾಕ್ಷಪ್ಪ, ಆಶಾ ಕಾರ್ಯಕರ್ತೆಯರಾದ ರತ್ನಮ್ಮ, ಮಾಲಂಬಿ, ಗ್ರಾಮದ ಮುಖಂಡರು, ನಾಗರಿಕರು, ಸ್ತ್ರೀ ಶಕ್ತಿ ಸಂಘದ ಸದಸ್ಯರು, ಯುವಕರು, ಸಾರ್ವಜನಿಕರು ಭಾಗವಹಿಸಿದ್ದರು.

# ಭ್ರಷ್ಟಾಚಾರ ನಿರ್ಮೂಲನೆ ಸಾಧ್ಯ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.31–ಭಾರತದ ನ್ಯಾಶನಲ್ ಆಂಟಿ ಕರಪ್ಶನ್ ಮತ್ತು ಕಾರ್ಯಾಚರಣೆ ಸಮಿತಿ ಕರ್ನಾಟಕ ವತಿಯಿಂದ ಬೆಂಗಳೂರಿನ ಮೌರ್ಯ ಹೋಟೆಲ್ ಸಭಾಂಗಣದಲ್ಲಿ ಜಿಲ್ಲೆಗಳ ಉದ್ಘಾಟನೆ ಯೊಂದಿಗೆ ಪದಾಧಿಕಾರಿಗಳ ಸಮಾವೇಶ ಮತ್ತು ಶಪಥ ಗ್ರಹಣ ಕಾರ್ಯಕ್ರಮ ನೆರವೇರಿತು.

ಸಮಾರಂಭದ ಉದ್ಘಾಟನೆಯನ್ನು ನಿಶ್ಚಲಾನಂದ ಸ್ವಾಮಿಯವರು ಹಾಗೂ ರಾಷ್ಟ್ರೀಯ ಅಧ್ಯಕ್ಷರಾದ ಡಾ.ರಾಜೇಶ್ ಶುಕ್ಲಾರವರು ಅತಿಥಿ ಗಣ್ಯರೊಂದಿಗೆ ನೆರವೇರಿಸಿದರು.

# ಯುವಕರಲ್ಲಿ ಅಡಗಿರುವ ಪ್ರತಿಭೆ ಇಂತಹ ಕಾರ್ಯಕ್ರಮಗಳ ಮೂಲಕ ಹೊರಬರಲಿವೆ – ಅಮ್ಜದ್ ಪಟೇಲ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಯುವಕರಲ್ಲಿ ಅಡಗಿರುವ ಪ್ರತಿಭೆಗಳನ್ನು ಗುರುತಿಸಲು ಯುವ ಸೌರಭದಂತಹ ಕಾರ್ಯಕ್ರಮಗಳು ಉತ್ತಮ ವೇದಿಕೆಯಾಗಿದ್ದು, ಯುವಕರಲ್ಲಿ ಅಡಗಿರುವ ಪ್ರತಿಭೆಗಳು ಇಂತಹ ಕಾರ್ಯಕ್ರಮಗಳ ಮೂಲಕ ಹೊರಬರಲಿವೆ ಎಂದು ಕೊಪ್ಪಳ ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್ ಹೇಳಿದರು.

ಅವರು ಮಂಗಳವಾರ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಆವರಣ ಕೊಪ್ಪಳದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕೊಪ್ಪಳ, ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಕೊಪ್ಪಳ ಸಾಂಸ್ಕೃತಿಕ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಯುವ ಸೌರಭ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

ಕಲೆ, ಸಂಸ್ಕೃತಿ ಹಾಗೂ ತಂತ್ರಜ್ಞಾನದಲ್ಲಿ ನಮ್ಮ ದೇಶದ ಯುವಕರು ಮುಂಚುಣಿಯಲ್ಲಿದ್ದಾರೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಒಳ್ಳೆಯ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಭಾರತ ದೇಶ ವಿವಿಧತೆಯಲ್ಲಿ ಏಕತೆಯನ್ನು ಕಾಣುವ ದೇಶವಾಗಿದ್ದು ಇಲ್ಲಿ ನಾವೆಲ್ಲರೂ ಒಂದೇ ತಾಯಿಯ ಮಕ್ಕಳಂತೆ ಬಾಳುತ್ತಿದ್ದೆವೆ. ಸರ್ಕಾರ ಮಹಿಳೆಯರಿಗಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದೆ. ಹೆಣ್ಣು ಮಕ್ಕಳು ದೇಶದ ಭವಿಷ್ಯ ನಿರ್ಮಿಸುವ ನಮ್ಮ ಸಮಾಜದ ಶಕ್ತಿ ಆಗಿದ್ದಾರೆ. ಹೆಣ್ಣು ಕಲಿತರೆ ಕುಟುಂಬ ಹಾಗೂ ಸಮಾಜ ಕಲಿತ ಹಾಗೆ ಎಂದು ಹೇಳಿದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀ ನಿವಾಸ ಮಾತನಾಡಿ ನಮ್ಮ ಹಿಂದಿನಿಂದ ನಡೆದುಕೊಂಡು ಬಂದಿರುವ ಸಂಸ್ಕೃತಿ ಹಾಗೂ ಪರಂಪರೆಯನ್ನುಉಳಿಸಿಬೆಳೆಸಿಕೊಂಡು ಹೋಗಬೇಕಿದೆ. ಸರ್ಕಾರ ಯುವಕರ ಕಲಿಕೆಗೆ ಹೆಚ್ಚಿನ ಪ್ರೋತ್ಸಾಹ ನೀಡುತ್ತಿದೆ. ಹಾಸ್ಟೆಲ್ ಸೌಲಭ್ಯ. ಲ್ಯಾಪ್‌ಟಾಪ್ ವಿತರಣೆ. ಡಿಗ್ರಿ ಹಾಗೂ ಡಿಪ್ಲೊಮಾ ಪಾಸಾದ ಯುವಕರಿಗೆ ಯುವನಿಧಿ ಯೋಜನೆಗಳಂತಹ ಹಲವಾರು ಸೌಲಭ್ಯಗಳನ್ನು ನೀಡುವ ಮೂಲಕ ಅವರ ಕಲಿಕೆಗೆ ಒತ್ತು ನೀಡುತ್ತಿದ್ದು ಯುವಕರು ಯಾವುದೇ ದುಶ್ಚಟಗಳಿಗೆ ಬಲಿಯಾಗದೆ ಚೆನ್ನಾಗಿ ಕಲಿತು ತಮ್ಮ ತಂದೆ– ತಾಯಿಯರಿಗೆ ಒಳ್ಳೆಯ ಹೆಸರು ತರಬೇಕೆಂದು ಹೇಳಿದರು.

ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಮಾತನಾಡಿ, ಯುವಕರ ಮೇಲೆ ಸರಕಾರ ಬಹಳಷ್ಟು ಭರವಸೆಗಳನ್ನು ಇಟ್ಟುಕೊಂಡು ಅವರ ಕಲಿಕೆಗೆ ಹೆಚ್ಚಿನ ಒತ್ತು ನೀಡುವುದರ ಜೊತೆಗೆ ಯುವ ಪ್ರತಿಭೆ ಹಾಗೂ ಅವರ ಕೌಶಲ್ಯಗಳನ್ನು ಹೊರ ತರಲು ಇಂತಹ ಕಾರ್ಯಕ್ರಮಗಳನ್ನು ಆಯೋಜನೆ ಮಾಡುತ್ತಿದೆ. ಈ ನಿಟ್ಟಿನಲ್ಲಿ ಮಹಿಳಾ ಕಾಲೇಜಿನಲ್ಲಿ ಯುವ ಸೌರಭದಂತಹ ಕಾರ್ಯಕ್ರಮ ಆಯೋಜನೆ ಮಾಡಿರುವುದು ವಿಶೇಷವಾಗಿದೆ ಎಲ್ಲರೂ ತಮ್ಮ ಕಲಿಕೆಯ ಜೊತೆಗೆ ಇತರೆ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಮೂಲಕ ತಮ್ಮ ಪ್ರತಿಭೆಗಳ ಪ್ರದರ್ಶನ ನೀಡಬೇಕೆಂದು ಹೇಳಿದರು.

ಸುಗಮ ಸಂಗೀತ, ಜಾನಪದ ಗೀತೆಗಳು ಮತ್ತು ಸಮೂಹ ನೃತ್ಯ ಸೇರಿದಂತೆ ಇತರೆ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಸಿವಿ ಜಡಿಯವರು ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ನಾಟಕ ಅಕಾಡೆಮಿ ಸದಸ್ಯರಾದ ಚಾಂದಪಾಷಾ ಕಿಲ್ಲೆದಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕರ್ಣಕುಮಾರ, ಅಲ್ಲಮ ಪ್ರಭು ಬೆಟ್ಟದೂರು, ಕೊಪ್ಪಳ ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಪ್ರಾಂಶುಪಾಲರಾದ ಡಾ. ಗಣಪತಿ ಕೆ. ಲಮಾಣಿ, ನಿವೃತ್ತ ಪಾಂಶುಪಾಲರಾದ ಬಿ.ಜಿ. ಕರಿಗಾರ, ಕೊಪ್ಪಳ ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಪ್ರಾಧ್ಯಾಪಕರಾದ ಡಾ. ಹುಲಿಗೆಮ್ಮ ಸೇರಿದಂತೆ ಕೊಪ್ಪಳ ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಉಪನ್ಯಾಸಕರು, ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿನಿಯರು ಸೇರಿದಂತೆ ಇತರೆ ಹಲವಾರು ಜನರು ಉಪಸ್ಥಿತರಿದ್ದರು.

# ಸಮುದಾಯ ದತ್ತ ಶಾಲಾ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಕುಕನೂರ: ಪಟ್ಟಣದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಡಾ ಅಂಬೇಡ್ಕರ್ ನಗರ ಇಂದು ಸಮುದಾಯ ದತ್ತ ಶಾಲಾ ಕಾರ್ಯಕ್ರಮದ ಮಾರ್ಗದರ್ಶಕರು ಭೇಟಿ ಮಾಡಲಾಯಿತು.

ಇಲಾಖೆಯಿಂದ ಉಚಿತವಾಗಿ ಮಕ್ಕಳಿಗೆ ಅಜೀಮ್ ಪ್ರೇಮ ಜಿ ಪೌಂಡೇಶನವರಿಂದ 4 ಮತ್ತು ಇಲಾಖೆಯಿಂದ 2 ದಿನಗಳವರೆಗೆ ಉಚಿತವಾಗಿ ಮಕ್ಕಳಿಗೆ ತತ್ತಿಗಳನ್ನು ಕೊಡುತ್ತಿರುವದು ತುಂಬಾ ಶ್ಲಾಘನವಾಗಿದೆ. ಖಆಒಅ ಪರವಾಗಿ ಪಾಲಕರ ಪರವಾಗಿ ಅಭಿನಂದನೆಗಳು ಹಾಗು ಮಕ್ಕಳಿಗೆ ಉಚಿತ ವಾಗಿ ಪಠ್ಯ ಪುಸ್ತಕ ಗಳನ್ನು ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಎಸ್ ಡಿ ಎಂ ಸಿ ಅಧ್ಯಕ್ಷರಾದ ಲಕ್ಷ್ಮಣ ಕಾಳಿ ಇವರು ಇಲಾಖೆಗೆ ಅಭಿನಂದನೆಗಳು ತಿಳಿಸಿದರು.

ಶಿವಪ್ಪ ಈ ಬೇರಿರವರು ಮಕ್ಕಳಿಗೆ ಸಿಗುವ ಸರಕಾರದ ಸೌಲಭ್ಯಗಳನ್ನು ಬಳಸಿಕೊಂಡು ಗುಣತ್ಮಕ ಶಿಕ್ಷಣ ಪಡೆಯಬೇಕು ಹಾಗು ಮಕ್ಕಳಿಗೆ ಪೌಷ್ಟಿಕ ಆಹಾರವನ್ನು ಎಪಿಫ್ ನವರ ಮುಖ್ಯ ಉದ್ದೇಶ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮತಿ ಶೈಲಜಾ ಕುಲಕರ್ಣಿ ಹಾಗು ಸಿಬ್ಬಂದಿಗಳಿಂದ ಗುರುಮಾತೆಯರಿಗೆ ಸನ್ಮಾನ ಮಾಡಲಾಯಿತು.

ಶಾಲೆಯ ಮುದ್ದು ಮಕ್ಕಳ ಜೊತೆ ಪಾಲ್ಗೊಂಡು ಗುಣತ್ಮಕ ಕಲಿಕೆಯ ಬಗ್ಗೆ ಚರ್ಚೆ ಮಾಡಿ ಸಂತೋಷ ಪಟ್ಟರು ಅವದೂತ ಅಶ್ರಿತ ಎಲ್ಲರಿಗೂ ಧನ್ಯವಾದ ಹೇಳಲಾಯಿತು.

# ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ನೋಂದಣಿಗೆ ಅಧಿಕಾರಿಗಳು ಮುತುವರ್ಜಿ ವಹಿಸಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,–ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣಾ ಮತದಾರರ ನೋಂದಣಿ ಪ್ರಕ್ರಿಯೆ ಈಗಾಗಲೇ ಆರಂಭವಾಗಿದ್ದು, ನಿರೀಕ್ಷಿತ ಮಟ್ಟದಲ್ಲಿ ನೋಂದಣಿಗೆ ಅಧಿಕಾರಿಗಳು ಮುತುವರ್ಜಿ ವಹಿಸಬೇಕು ಎಂದು ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರೂ ಆದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಬಳ್ಳಾರಿ ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಕರ್ನಾಟಕ ವಿಧಾನಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ–2026 ಅಂಗವಾಗಿ ವಿಶೇಷ ಮಿಂಚಿನ ನೋಂದಣಿ ಅಭಿಯಾನ ಪ್ರಗತಿ ಕುರಿತು ಸೋಮವಾರ ಏರ್ಪಡಿಸಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನೋಂದಣಿ ಕಾರ್ಯದಲ್ಲಿ ಎಲ್ಲಾ ಅಧಿಕಾರಿಗಳು,ನೋಡಲ್ ಅಧಿಕಾರಿಗಳು ಪ್ರೌಢಶಾಲೆ, ವಿಶ್ವವಿದ್ಯಾಲಯ, ಕೃಷಿ, ವೈದ್ಯಕೀಯ ಕಾಲೇಜು, ತಾಂತ್ರಿಕ ಕಾಲೇಜು, ಪದವಿಪೂರ್ವ, ಪದವಿ ಕಾಲೇಜುಗಳಲ್ಲಿ ವ್ಯಾಪಕ ಪ್ರಚಾರ ಮಾಡಿ ನೋಂದಣಿ ಸಂಖ್ಯೆಯನ್ನು ಹೆಚ್ಚಿಸಬೇಕು. ಅಗತ್ಯವಿದ್ದಲ್ಲಿ ಭರ್ತಿ ಮಾಡುವ ವಿಧಾನ ಕುರಿತು ತರಬೇತಿ ನೀಡಬೇಕು ಎಂದು ನಿರ್ದೇಶನ ನೀಡಿದರು.

ಭಾರತ ಚುನಾವಣಾ ಆಯೋಗ ಹಾಗೂ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರ ನಿರ್ದೇಶನದಂತೆ ಬರುವ ನವೆಂಬರ್ 06 ರೊಳಗೆ ಮತದಾರರ ನೋಂದಣಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕಿದೆ. ಅಧಿಕಾರಿಗಳು ಯಾವುದೇ ರೀತಿಯಲ್ಲಿ ನಿರ್ಲ್ಯಕ್ಷಿಸುವಂತಿಲ್ಲ. ಸಂಬಂಧಿಸಿದ ಅಧಿಕಾರಿಗಳು ಶಾಲೆ–ಕಾಲೇಜು ಸಮಷ್ಟಿಗಳಿಗೆ ಖುದ್ದಾಗಿ ಭೇಟಿ ನೀಡಿ ಪರಿಶೀಲಿಸಬೇಕು ಎಂದು ತಿಳಿಸಿದರು.

ಎಲ್ಲಾ ಅರ್ಹ ಮತದಾರರ ನೋಂದಣಿಯನ್ನು ಮಾಡಿಸಲು ಅಕ್ಟೋಬರ್ 27, 30 ಹಾಗೂ ನವೆಂಬರ್ 03ರಂದು ಮತದಾರರ ಮಿಂಚಿನ ನೋಂದಣಿ ಅಭಿಯಾನ ಆಯೋಜಿಸಲಾಗಿದೆ. ಅಭಿಯಾನದ ದಿನಗಳಂದು ತಮ್ಮ ಕ್ಷೇತ್ರವ್ಯಾಪ್ತಿಗೆ ಒಳಪಡುವ ಎಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳ ಸೇವೆಯನ್ನು ಪಡೆದು ಅರ್ಹ ಶಿಕ್ಷಣ ಸಂಸ್ಥೆಗಳನ್ನು ಗುರುತಿಸಿ ಅಲ್ಲಿ ನೋಂದಣಿಗಾಗಿ ಅರ್ಹರಿರುವ ಮತದಾರರನ್ನು ಕಚೇರಿ ಮುಖ್ಯಸ್ಥರ ಮುಖಾಂತರ ಸಂಪರ್ಕಿಸಿ, ನಿಗದಿಪಡಿಸಿದ ಸಮಯದೊಳಗೆ ನಿಯಮಾನುಸಾರ ನಮೂನೆ–19ರ ಅರ್ಜಿಯೊಂದಿಗೆ ಪೂರಕ ದಾಖಲೆಗಳನ್ನು ಸ್ವೀಕರಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲಾ ಮಟ್ಟದಲ್ಲಿ ಸಂಬಂಧಿಸಿದ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆಯ ಅಧಿಕಾರಿಗಳು, ವಿಶ್ವವಿದ್ಯಾನಿಲಯದ ಕುಲಸಚಿವರು ಹಾಗೂ ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ನೋಡಲ್ ಅಧಿಕಾರಿಗಳೆಂದು ನೇಮಕ ಮಾಡಿ ಆದೇಶಿಸಲಾಗಿದ್ದು, ಈ ಎಲ್ಲಾ ಅಧಿಕಾರಿಗಳು ಕೂಡಲೇ ಅರ್ಹ ಮತದಾರರನ್ನು ಗುರುತಿಸಿ ನೋಂದಣಿಗಾಗಿ ಅರ್ಜಿಗಳನ್ನು ಸ್ವೀಕರಿಸಲು, ಈ ಕುರಿತು ವ್ಯಾಪಕ ಪ್ರಚಾರ ನೀಡಲು ಮತ್ತು ಅರ್ಜಿ ಸ್ವೀಕೃತಿ ಸಂಖ್ಯೆಯನ್ನು ಹೆಚ್ಚಿಸುವಂತೆ ಎಂದು ತಿಳಿಸಿದರು.

ಜಿಪಂ ಉಪಕಾರ್ಯದರ್ಶಿ ಅವರು ಮಾತನಾಡಿ, ಜಿಲ್ಲೆಯ ಎಲ್ಲಾ ಶಾಲಾ–ಕಾಲೇಜು, ವಿದ್ಯಾಸಂಸ್ಥೆ, ವಿಶ್ವವಿದ್ಯಾಲಯಗಳಿಗೆ ಈಗಾಗಲೇ ನಮೂನೆ–19 ಅರ್ಜಿಗಳನ್ನು ವಿತರಣೆ ಮಾಡಲಾಗಿದೆ. ತ್ವರಿತವಾಗಿ ಅರ್ಹತೆ ಇರುವ ಎಲ್ಲಾ ಶಿಕ್ಷಕರನ್ನು ನೋಂದಾಯಿಸಿಕೊಳ್ಳಲು ಸೂಚಿಸಬೇಕು ಎಂದರು.

ಈಶಾನ್ಯ (ಕಲಬುರಗಿ) ವ್ಯಾಪ್ತಿಯ ಎಲ್ಲಾ ಜಿಲ್ಲೆಗಳ ಅರ್ಹ ಶಿಕ್ಷಕರಿಗೆ ಅರ್ಜಿ ನಮೂನೆ–19 ನೀಡಬಹುದಾಗಿದೆ ಮತ್ತು ಅವರಿಂದ ಭರ್ತಿ ಮಾಡಿಸಿಕೊಂಡು ಅರ್ಜಿ ಸ್ವೀಕರಿಸಬಹುದಾಗಿದೆ. ಉಳಿದ ಜಿಲ್ಲೆ ಹಾಗೂ ಹೊರ ರಾಜ್ಯದವರು ಅನರ್ಹರಾಗಿರುತ್ತಾರೆ ಎಂದು ಸ್ಪಷ್ಟಪಡಿಸಿದರು.

# ಯುವ ಸಮೂಹಕ್ಕೆ ಕಾನೂನು ಅರಿವು ಅಗತ್ಯ-ನ್ಯಾ.ದಿಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.30–ಇಂದಿನ ಯುವ ಸಮೂಹಕ್ಕೆ ಕಾನೂನಿನ ಅರಿವು ಅತಿ ಮುಖ್ಯವಾಗಿದ್ದು, ಕಾನೂನು ರಕ್ಷಣೆ ನಮ್ಮೆಲ್ಲರ ಹಕ್ಕಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬಾಗಲಕೋಟೆಯ ಸದಸ್ಯ ಕಾರ್ಯದರ್ಶಿ, ಹಿರಿಯ ದಿವಾಣಿ ನ್ಯಾಯಾಧೀಶರಾದ ಚಂದ್ರಶೇಖರ ದಿಡ್ಡಿ ಹೇಳಿದರು. ನಗರದ ಬಿವಿವಿ ಸಂಘದ ಬಸವೇಶ್ವರ ವಿಜ್ಞಾನ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ನಡೆದ ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪ್ರಚಲಿತ ವರ್ತಮಾನದ ಸುದ್ದಿಗಳ ಅರಿವು ಮುಖ್ಯವಾಗಿದ್ದು, ಸ್ಪರ್ಧಾತ್ಮಕ ಪರೀಕ್ಷೆಯ ಸಲುವಾಗಿ ಸಾಮಾನ್ಯ ಜ್ಞಾನವನ್ನು ಹೆಚ್ಚಿಸಿಕೊಳ್ಳಲು ಒಳ್ಳೆಯ ಸುದ್ದಿ ಪತ್ರಿಕೆಗಳನ್ನು ಓದಬೇಕು ಇದ–ರಿಂದ ಪ್ರಪಂಚಜ್ಞಾನ, ವಿಷಯಗಳ ಅರಿವು, ಸ್ಪರ್ಧಾತ್ಮಕ ವಿಷಯಗಳನ್ನು ತಿಳಿಯಬಹುದಾಗಿದೆ ಎಂದರು.

ಒಂದು ಭಾಷೆಯಿಂದ ಇನ್ನೊಂದು ಭಾಷೆಯ ಬಗ್ಗೆ ಅನುವಾದ, ಪ್ರತಿದಿನ ಒಂದು ಒಳ್ಳೆಯ ದಿನಪತ್ರಿಕೆಗಳನ್ನು ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಿ ಸ್ಪರ್ಧಾತ್ಮಕ ಪರೀಕ್ಷೆಗಾಗಿ ಒಳ್ಳೆಯ ಪುಸ್ತಕಗಳನ್ನು ಆಯ್ಕೆ ಮಾಡಿ ಎಂದು ಹೇಳಿ ಭಾರತದ ಸರ್ವೋಚ್ಚ ನ್ಯಾಯಾಲಯದ ಐದು ಯೋಜನೆಗಳಾದ ಆಶಾ ಯೋಜನೆ, ಡಾನ್ ಯೋಜನೆ, ಸಾತಿ ಯೋಜನೆ, ಜಾಗೃತಿ ಯೋಜನೆ, ಸಂವಾದ ಯೋಜನೆ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವನ್ನು ಮೂಡಿಸಿದರು. ಸತತ ಪ್ರಯತ್ನ ಮಾಡಿ ನಿಮ್ಮ ಗುರಿಯನ್ನು ಮುಟ್ಟಿರಿ ದಿಡ್ಡಿ ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬಾಗಲಕೋಟೆ, ಪ್ರಧಾನ ಕಾನೂನು ಅಭಿರಕ್ಷಕರು ಪ್ರಕಾಶ ಮಾಳೆದ ಮಾತನಾಡಿ, 53 ತಿದ್ದುಪಡಿಯ ಸಂವಿಧಾನದ ರಚನೆ ಅದರ ಕರ್ತವ್ಯ ರಾಷ್ಟ್ರದ ಬಗ್ಗೆ ಅಭಿಮಾನ ರಾಷ್ಟ್ರಗೀತೆಯ ಬಗ್ಗೆ ಗೌರವ ರಾಷ್ಟ್ರಧ್ವಜದ ಬಗ್ಗೆ ಗೌರವ ಮತ್ತು ಅರಣ್ಯ ಸಂರಕ್ಷಣೆ ನಂತರ ಕಡ್ಡಾಯ ಶಿಕ್ಷಣದ ಬಗ್ಗೆ ಕಾನೂನು ಅರಿವು ನ್ಯಾಯಾಂಗದ ಬಗ್ಗೆ ಮಾಹಿತಿಯನ್ನು ಒದಗಿಸಿ ಇಂದಿನ ತಂತ್ರಜ್ಞಾನದ ಮಾಹಿತಿಯನ್ನು ಒದಗಿಸಿ ಕಾನೂನು ಸೇವಾ ಪ್ರಾಧಿಕಾರ ಕೆಲವು ಸಮಸ್ಯೆಗಳಿಗೆ ಉಚಿತವಾದ ಸೇವೆಯ ಮಕ್ಕಳಿಗೆ ಮಾಹಿತಿಯನ್ನು ನೀಡಿ ಮಕ್ಕಳ ರಕ್ಷಣೆಗೋಸ್ಕರ ಮಾಡಿದ ಪೋಕ್ಸೋ ಕಾಯ್ದೆ ಅರಿವು ಮೂಡಿಸಿದರು.

ಮೊಬೈಲ್ ಒಳ್ಳೆಯ ವಿಷಯಕ್ಕೆ ಬಳಸಿ ಅದಕ್ಕೆ ಅವಲಂಬಿತರಾಗಬೇಡಿ ಎಂದು ಸಲಹೆ ನೀಡಿದ ಅವರು, ವಾಹನಗಳ ಅಪಘಾತದ ಬಗ್ಗೆ ಅರಿವು ಮೂಡಿಸಿ ಕಾನೂನು ತಿದ್ದುಪಡಿಗಳ ಬಗ್ಗೆ ಆಸ್ತಿಯಲ್ಲಿ ಗಂಡು, ಹೆಣ್ಣಿಗೆ ಸಮಾನವಾದ ಹಕ್ಕು ಅದು ಬಾಂಧವ್ಯವನ್ನು ಕಾಪಾಡಬೇಕು ಎನ್ನುವ ಕಾರಣಕ್ಕೆ ಈ ಸಮಾನವಾದ ಹಕ್ಕನ್ನು ಜಾರಿಗೆ ತಂದರು ಎಂದು ಹೇಳಿದ ಅವರು ಸಮಾಜದಲ್ಲಿ ನಾವು ಒಳ್ಳೆಯ ರೀತಿಯಲ್ಲಿ ಬದುಕಬೇಕಾದ ಕಾನೂನಿನ ಅರಿವು ಬಹು ಮುಖ್ಯ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಚಾರ್ಯ ಡಾ.ಎನ್.ಹೆಚ್.ಬೇವಿನಹಳ್ಳಿ ವಹಿಸಿದ್ದರು. ಎಸ್.ಎನ್.ಮಂಕಣಿ ಸ್ವಾಗತಿಸಿದರು. ಆರ್,ಆರ್,ರಡ್ಡೇರ ವಂದಿಸಿದರು. ಜಿ.ಎಚ್.ಜಗಳೂರ ನಿರೂಪಿಸಿದರು.

## ನಾಯಿಗಳಿಗೆ ನಿಗದಿತ ಆಹಾರ ವಲಯ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.30–:ಬಾಗಲಕೋಟೆ ನಗರಸಭೆ ವ್ಯಾಪ್ತಿಯಲ್ಲಿ ನಾಯಿಗಳ ಹಾವಳಿ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುವುದರಿಂದ, ಪೌರಾಡಳಿತ ನಿರ್ದೇಶಕರು, ಬೆಂಗಳೂರು ಇವರ ಸುತ್ತೋಲೆ ಪ್ರಕಾರ ನಾಯಿಗಳಿಗೆ ಸಾರ್ವಜನಿಕ ಸ್ಥಳಗಳಲ್ಲಿ ಆಹಾರ ನೀಡುವುದನ್ನು ನಿಷೇಧಿಸಿದೆ. ಬದಲಾಗಿ ನಿಗದಿತ ಆಹಾರ ವಲಯಗಳನ್ನು (Designated Feeding Zones) ರಚಿಸಲು ಸೂಚಿಸಲಾಗಿದೆ.

ಅದರನ್ವಯ ಬಾಗಲಕೋಟೆ ನಗರಸಭೆ ವಿವಿಧ ಪ್ರದೇಶಗಳಲ್ಲಿ ಆಹಾರ ವಲಯಗಳನ್ನು ನಿಗದಿಪಡಿಸಿದೆ. ಈ ವಲಯಗಳು ಚಂದನ ಟಾಕೀಜ್ ಎದುರು, ನವನಗರದ ಸೆಕ್ಟರ್‌ಗಳು 53, 44, 40, 38 ಮತ್ತು 45, ರಾಜೀವಗಾಂಧಿ ಕಾಲೋನಿ, ತೆ–ೋಟಗಾರಿಕೆ ಇಲಾಖೆ ಹಿಂಭಾಗ, ಜಿಲ್ಲಾ ಕ್ರೀಡಾಂಗಣ ಹಿಂಭಾಗ, ಮುಚಖಂಡಿ ಕ್ರಾಸ್, ವಿದ್ಯಾಗಿರಿ ಪ್ರದೇಶದ 18ನೇ ಕ್ರಾಸ್‌ನಿಂದ 3ನೇ ಕ್ರಾಸ್‌ವರೆಗೆ, ತೆಗ್ಗಿ ಲೇಔಟ್, ರೂಪಲ್ಯಾಂಡ್, ತಪಶೆಟ್ಟಿ ಲೇಔಟ್, ಹೌಸಿಂಗ್ ಬೋರ್ಡ್ ಬಸವನಗರ, ಕೃಷ್ಣಾ ಟಾಕೀಜ್ ಎದುರು, ಹಳೆಯ ಅಂಜುಮನ್ ಶಾಲೆ ಹತ್ತಿರ, ಯಮನೂರಪ್ಪ ದರ್ಗಾ, ಹರಿದಾಸರ ಕಟ್ಟಿ ಹಾಗೂ ಅಕ್ಕಿಮರಡಿ ಲೇಔಟ್ ಗಾರ್ಡನ್ ಹತ್ತಿರ ಸೇರಿದಂತೆ ವಿವಿಧ ಕಡೆಗಳಲ್ಲಿ ನಿಗದಿಪಡಿಸಲಾಗಿದೆ.

ನಗರಸಭೆ ಈ ಕ್ರಮದಲ್ಲಿ ಸಾರ್ವಜನಿಕರಿಂದ ಸಹಕಾರ ನಿರೀಕ್ಷಿಸಿದ್ದು, ಎಲ್ಲರೂ ನಿಗದಿತ ವಲಯಗಳಲ್ಲೇ ನಾಯಿಗಳಿಗೆ ಆಹಾರ ನೀಡುವಂತೆ ವಿನಂತಿಸಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಯದ್ಲಾಪೂರು ಪಿಡಿಒ ವಜಾಕ್ಕೆ ಗ್ರಾಮಸ್ಥರು ಆಗ್ರಹ




ಮಲ್ಲಮ್ಮ ನುಡಿ ವಾರ್ತೆ

ರಾಯಚೂರು, ಅ.30–ಜೆಜೆಎಂ ಕಾಮಗಾರಿ ಅಪೂರ್ಣ ಪಂಚಾಯತಿಗೆ ಹಸ್ತಾಂತರ ಮತ್ತು ಸಮುದಾಯದ ಭವನಕ್ಕೆ ಸುಣ್ಣ ಬಲಿದು ಗ್ರಂಥಾಲಯದ ಹೆಸರಲ್ಲಿ ಅನುದಾನ ಎತ್ತುವಳಿಗೆ ಮುಂದಾಗುವ ಮೂಲಕ ಅಧಿಕಾರ ದುರುಪಯೋಗ ಮಾಡಿಕೊಂಡಿರುವ

ತಾಲೂಕಿನ ಯದ್ಲಾಪೂರು ಗ್ರಾಮ ಪಂಚಾಯತಿ ಪಿಡಿಒ ಇವರನ್ನು ಸೇವೆಯಿಂದ ವಜಾಗೊಳಿಸಬೇಕು ಎಂದು ಆಗ್ರಹಿಸಿ ಗಂಜಹಳ್ಳಿ ಗ್ರಾಮಸ್ಥರು ಜಿಲ್ಲಾ ಪಂಚಾಯತಿ ಸಿಇಒ ಅವರಿಗೆ ಇಂದು ಮನವಿ ಸಲ್ಲಿಸಿ ಒತ್ತಾಯಿಸಿದೆ. ಯದ್ಲಾಪೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಗಂಜಹಳ್ಳಿ ಗ್ರಾಮದಲ್ಲಿ 2021–22 ಸಾಲಿನಲ್ಲಿ ಕೇಂದ್ರ ಮತ್ತು ರಾಜ್ಯದ ಪ್ರತಿಷ್ಠಿತ ಯೋಜನೆ ಜಲಜೀವನ್ ಮಿಷನ್ ಯೋಜನೆ (ಜೆಜೆಎಂ) ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿತ್ತು. ಪ್ರತಿ ಮನೆ ಮನೆಗೆ ನಳ ಸಂಪರ್ಕ ಕಲ್ಪಿಸುವ ಮಹತ್ವದ ಯೋಜನೆಯನ್ನು ಕಳಪೆ ಮಟ್ಟದಲ್ಲಿ ಅನುಷ್ಠಾನ ಮಾಡುವುದರ ಮೂಲಕ ಈ ಯೋಜನೆ ಉದ್ದೇಶವನ್ನು ಹಳ್ಳ ಹಿಡಿಯುವಂತೆ ಮಾಡಲಾಗಿದೆ ಎಂದು ದೂರಿದರು. ಕಾಮಗಾರಿಯನ್ನು ಪೂರ್ಣಗೊಳಿಸಿದೆ ಅದಲ್ಲದೆ ನಲ್ಲಿಯಲ್ಲಿ ಇದುವರೆಗೂ ಹನಿ ನೀರು ಬರುತ್ತಿಲ್ಲ. ಆದರೆ ಪಿಡಿಒ ಅವರು ಈಗಾಗಲೇ ಜೆಜೆಎಂ ಕಾಮಗಾರಿಯನ್ನು ಪಂಚಾಯತಿಗೆ ಹಸ್ತಾಂತರ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿದರು. ನದಿ ತೀರದ ಪಕ್ಕದಲ್ಲಿ ಇರುವ ಗಂಜಳ್ಳಿ ಗ್ರಾಮದಲ್ಲಿ ಕುಡಿಯುವ ನೀರಿಗೆ ಪರದಾಡುವಂತ ಗಂಭೀರ ಪರಿಸ್ಥಿತಿಯನ್ನು ಎದುರಸಬೇಕಾಗಿದೆ. ಕೃಷ್ಣ ನದಿಗೆ ಅವಲಂಬಿತವಾದ ಈ ಗ್ರಾಮದಲ್ಲಿ ಕಲುಷಿತ ನೀರು ಪೂರೈಕೆ ಮಾಡಲಾಗುತ್ತಿದೆ.

ಕೃಷ್ಣ ನದಿಗೆ ಕಾರ್ಖಾನೆಗಳಿಂದ ವಿಷಪೂರಿತ ನೀರು ಸರಬರಾಜು ಮಾಡಲಾಗುತ್ತಿದ್ದು, ಗ್ರಾಮಸ್ಥರು ಅನೇಕ ಗಂಭೀರ ಕಾಯಿಲೆಗಳಿಗೆ ಗುರಿಯಾಗುವಂತೆ ಮಾಡಿದೆ. ಈ ಬಗ್ಗೆ ಪಿಡಿಒ ಗಮನಕ್ಕೆ ತಂದರೂ ಯಾವುದೇ ಪ್ರಯೋಜನ ಇಲ್ಲದಂತಾಗಿದೆ ಎಂದು ತೀವ್ರ ಅಸಮಾಧಾನ ವ್ಯಕ್ತಪಡಿಸಿದರೂ. ಕನಿಷ್ಠ ಮಟ್ಟ ಜೆಜೆಎಂ ಯೋಜನೆಯಿಂದ ಆದರೂ ಗ್ರಾಮಕ್ಕೆ ಶುದ್ಧ ಕುಡಿಯುವಕ ನೀರು ಪೂರೈಕೆ ಆಗುತ್ತದೆ ಎಂಬ ಗ್ರಾಮಸ್ಥರ ಅಸೆ ನಿರಾಸೆಯಾಗಿದೆ. ಗಂಜಳ್ಳಿ ಗ್ರಾಮದಲ್ಲಿ ಸುಮಾರು 75 ಲಕ್ಷ ಅನುದಾನದಲ್ಲಿ ಜೆಜೆಎಂ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದೆ. ಆದರೆ ಕಾಮಗಾರಿಯನ್ನು ಗುಣಮಟ್ಟದಿಂದ ನಿರ್ವಹಿಸದೆ ಸಂಪೂರ್ಣ ಮಟ್ಟದಲ್ಲಿ ನಿರ್ವಹಿಸುವುದರ ಮೂಲಕ ಪಿಡಿಒ ಇದರಲ್ಲಿ ಶಾಮೀಲಾಗಿದ್ದಾರೆ ಎಂಬುದು ಅನುಮಾನ ವ್ಯಕ್ತಪಡಿಸಿದರು. ನಳ ಸಂಪರ್ಕಕ್ಕೆ ಅಳವಡಿಸಿದ ಪರಿಕರಗಳನ್ನು ಮುರಿದು ಬಿದ್ದಿದೆ ಎಂದು ದೂರಿದರು.

ಈ ಗ್ರಾಮದಲ್ಲಿ ಈಗಾಗಲೇ ನಿರ್ಮಾಣ ಮಾಡಿದ ಸಮುದಾಯ ಭವನಕ್ಕೆ ಸುಣ್ಣ ಬಣ್ಣ ಬಡಿದು ಸಮುದಾಯದ ಭವನವನ್ನು ಗ್ರಂಥಾಲಯನ್ನಾಗಿ ಮಾರ್ಪಡಿಸಿ ಬಿಲ್ ಎತ್ತುವಳಿಗೆ ಪಿಡಿಒ ಮುಂದಾಗಿದ್ದಾರೆ ಎಂದು ಆರೋಪಿಸಿದರು. ಅಧಿಕಾರ ದುರುಪಯೋಗ ಮಾಡಿಕೊಂಡಿರುವ ಪಿಡಿಒ ವಿರುದ್ಧ ಹಾಗೂ ಇದರಲ್ಲಿ ಪಂಚಾಯತಿ ಸದಸ್ಯರ ಹಾಗೂ ಸಿಬ್ಬಂದಿಗಳ

ಕ್ರಮಕ್ಕೆ ಜರುಗಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ತಿಮ್ಮಪ್ಪ ಗಂಜಹಳ್ಳಿ, ಚನ್ನಬಸವ ಆರೋಲಿ, ಮಾತಾರ್ಂಡ, ಪರಮೇಶ ಸೇರಿದಂತೆ ಗ್ರಾಮದ ಯುವಕರು ಇದ್ದರು.

## ಮುಚಖಂಡಿಯಲ್ಲಿ ಎನ್.ಎಸ್.ಎಸ್ ಶಿಬಿರ

### ವ್ಯಕ್ತಿತ್ವ ವಿಕಾಸಕ್ಕೆ ಎನ್.ಎಸ್.ಎಸ್. ಸಹಕಾರಿ: ಗಾಂವಕರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.30–ವಿದ್ಯಾರ್ಥಿಗಳಲ್ಲಿ ಸೇವಾ ಮನೋಭಾವನೆ ಮೂಡಿಸುವುದು, ಆ ಮೂಲಕ ಅವರ ವ್ಯಕ್ತಿತ್ವ ವಿಕಸನಕ್ಕೆ ಎನ್.ಎಸ್.ಎಸ್.ಶಿಬಿರಗಳು ಅಗತ್ಯ ಎಂದು ಬಿ.ವಿ.ವಿ.ಸಂಘದ ಕಾಲೇಜುಗಳ ಆಡಳಿತ ಮಂಡಳಿಯ ಪದನಿಮಿತ್ಯ ಕಾರ್ಯದರ್ಶಿ ಡಾ.ಎಸ್.ಎಮ್. ಗಾಂವಕರ ಹೇಳಿದರು.

ನಗರದ ಬಸವೇಶ್ವರ ವಾಣಿಜ್ಯ ಮಹಾವಿದ್ಯಾಲಯ ಮುಚಖಂಡಿಯಲ್ಲಿ ಹಮ್ಮಿಕೊಂಡ

ರಾಷ್ಟ್ರೀಯ ಸೇವಾ ಯೋಜನೆ ವಿಶೇಷ ಶಿಬಿರದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು,

ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಪಾಠದ ಜೊತೆಗೆ ಕ್ರೀಡೆ, ಸಾಂಸ್ಕೃತಿಕ ಚಟುವಟಿಕೆ ಹಾಗೂ ಸೇವಾ ಮನೋಭಾವನೆಯನ್ನು ಬೆಳೆಸುವುದಕ್ಕಾಗಿಯೇ ಎನ್.ಎಸ್.ಎಸ್ ಶಿಬಿರಗಳನ್ನು ಗ್ರಾಮಗಳಲ್ಲಿ ಹಮ್ಮಿಕೊಳ್ಳಲಾಗುತ್ತದೆ. ಇದರಿಂದಾಗಿ ವಿದ್ಯಾರ್ಥಿಗಳಿಗೆ ನಾಯಕತ್ವದ ಜೊತೆಗೆ ಸೇವಾ ಮನೋಭಾವ ಬೆಳೆದು ಅವರ ವ್ಯಕ್ತಿತ್ವ ವಿಕಸನಕ್ಕೆ ಕಾರಣವಾಗುತ್ತದೆ ಎಂದರು.

ಅಧ್ಯಕ್ಷತೆಯನ್ನು ವಹಿಸಿದ್ದ ಡಾ.ಜಗನ್ನಾಥ ಚವಾಣ ಮಾತನಾಡಿ, ರಾಷ್ಟ್ರೀಯ ಸೇವಾ ಯೋಜನೆ ಹಾಗೂ ಗ್ರಾಮ ಸ್ವರಾಜ್ಯದ ಬಗ್ಗೆ ಗಾಂಧೀಜಿಯವರ ಕನಸಿನ ರಾಮ ರಾಜ್ಯವನ್ನು ಮಾಡಲು ರಾಷ್ಟ್ರೀಯ ಸೇವಾ ಯೋಜನೆ ಪಾತ್ರದ ಕುರಿತು ತಿಳಿಸಿದರು.

ಡಾ.ಎಂ ನಂಜುಂಡಸ್ವಾಮಿ, ಡಾ.ಎಂ.ಎಂ.ಹುನುಗುಂದ ಹಾಗೂ ಮಹಾವಿದ್ಯಾಲಯದ ಎಲ್ಲ ಸಿಬ್ಬಂದಿ ವರ್ಗ ಭಾಗವಹಿಸಿದ್ದರು.

## ನ.11 ಜಮಖಂಡಿಯಲ್ಲಿ ಉದ್ಯೋಗ ಮೇಳ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.30–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಉದ್ಯೋಗ ವಿನಿಮಯ ಕಛೇರಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಬಾಗಲಕೋಟೆ ವಿಶ್ವವಿದ್ಯಾಲಯ ಜಮಖಂಡಿ ಇವರ ಸಂಯುಕ್ತ ಆಶ್ರಯದಲ್ಲಿ ಉದ್ಯೋಗ ಮೇಳ ನವೆಂಬರ್ 11, ರಂದು ಬೆಳಿಗ್ಗೆ 9.30 ರಿಂದ ಸಂಜೆ 4.00 ಗಂಟೆಯವರೆಗೆ ಬಾಗಲಕೋಟೆ ವಿಶ್ವವಿದ್ಯಾಲಯ ಜಮಖಂಡಿ ಆವರಣದಲ್ಲಿ ನಡೆಯಲಿದೆ.

ಮೇಳದಲ್ಲಿ 25 ಕ್ಕೂ ಹೆಚ್ಚು ಖ್ಯಾತ ಕಂಪನಿಗಳು ಭಾಗವಹಿಸಲಿದ್ದು, 18 ರಿಂದ 35 ವರ್ಷದ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಭಾಗವಹಿಸಬಹುದು. ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ, ಡಿಪ್ಲೋಮಾ, ಪದವಿ, ಸ್ನಾತಕೋತ್ತರ ಹಾಗೂ ವೃತ್ತಿಪರ ಪದವೀಧರರಾಗಿರಬೇಕು. ಅಭ್ಯರ್ಥಿಗಳು ಅಂಕಪಟ್ಟಿ, ಆಧಾರ್ ಕಾರ್ಡ್ ಹಾಗೂ ಕನಿಷ್ಠ 10 ಬಯೋಡಾಟಾಗಳೊಂದಿಗೆ ಹಾಜರಾಗಬೇಕು. ನೋಂದಣಿಗಾಗಿ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡುವ ವ್ಯವಸ್ಥೆ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ, ಜಿಲ್ಲಾ ಆಡಳಿತ ಭವನ, ಕೊಠಡಿ ಸಂಖ್ಯೆ 118, ಬಾಗಲಕೋಟೆ (ದೂರವಾಣಿ: 8147111236, 6362700132) ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಫಿಜಿಯೋಥೆರಪಿ ಶಿಕ್ಷಣದ ಬೇಡಿಕೆ ಹೆಚ್ಚುತ್ತಿದೆ: ಅಶೋಕ ಸಜ್ಜನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.30–ಫಿಜಿಯೋಥೆರಪಿ ಚಿಕಿತ್ಸೆ ಕುರಿತು ಜನರಲ್ಲಿ ಹೆಚ್ಚಿನ ಅರಿವು ಮೂಡುತ್ತಿದೆ. ವೈದ್ಯಕೀಯ ಚಿಕಿತ್ಸೆಯಲ್ಲಿ ಫಿಜಿಯೋಥೆರಪಿಗೆ ಮಹತ್ವಪ್ರಾಪ್ತವಾಗಿದೆ. ಪರಿಣಾಮವಾಗಿ ಫಿಜಿಯೋಥೆರಪಿ ಶಿಕ್ಷಣದ ಬೇಡಿಕೆ ಹೆಚ್ಚುತ್ತಿದೆ ಎಂದು ಬಿ.ವಿ.ವಿ ಸಂಘದ ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಎಮ್.ಸಜ್ಜನ (ಬೇವೂರ) ಅಭಿಪ್ರಾಯಪಟ್ಟರು.

ಬಿ.ವಿ.ವಿ ಸಂಘದ ಫಿಜಿಯೋಥೆರಪಿ ಮಹಾವಿದ್ಯಾಲಯದಲ್ಲಿ 2025–26ನೇ ಸಾಲಿನ ಬಿ.ಪಿ.ಟಿ ಮತ್ತು ಎಮ್.ಪಿ.ಟಿ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬಾಗಲಕೋಟೆ ಜಿಲ್ಲೆಯಲ್ಲಿ ಸ್ಥಾಪನೆಯಾದ ಪ್ರಥಮ ಫಿಜಿಯೋಥೆರಪಿ ಕಾಲೇಜು ಇದು ಎನ್ನುವುದು ಹೆಮ್ಮೆಯ ವಿಷಯ. ಕಾಲೇಜಿನ ಸ್ಥಾಪನೆಯಿಂದಾಗಿ ಜಿಲ್ಲೆಯಲ್ಲಿ ಫಿಜಿಯೋಥೆರಪಿ ವೈದ್ಯರ ಕೊರತೆ ನಿವಾರಣೆಯಾಗಿದೆ. ಬಿ.ಪಿ.ಟಿ ಜೊತೆಗೆ ಎಮ್.ಪಿ.ಟಿ ಕೋರ್ಸು ಪ್ರಾರಂಭಿಸಿ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ಪಡೆಯಲು ಅವಕಾಶ ಮಾಡಿಕೊಡಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಹಾಸ್ಟೆಲ್ ಕಮೀಟಿ ಕಾರ್ಯಾಧ್ಯಕ್ಷ ಕುಮಾರಸ್ವಾಮಿ ಹಿರೇಮಠ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸಕ್ಕೆ ಅನುಕೂಲವಾಗುವಂತೆ ಅತ್ಯುತ್ತಮ ವಸತಿ ಸೌಲಭ್ಯ ಒದಗಿಸಲಾಗಿದೆ. ದೈಹಿಕ ಚಟುವಟಿಕೆಗಳಿಗೂ ಮಹತ್ವ ನೀಡುವ ಉದ್ದೇಶದಿಂದ ಕ್ರೀಡಾ ಸೌಲಭ್ಯಗಳು ಕಾಲೇಜಿನ ಆವರಣದಲ್ಲಿ ಲಭ್ಯವಿವೆ. ಮೊಬೈಲ್ ಫೋನ್ ವ್ಯಸನಿಗಳಾಗದೆ ಓದಿನಲ್ಲಿ ಆಸಕ್ತಿವಹಿಸಿ ಎಂದರು.

ಡಾ.ಸುಚಿತ್ರಾ ದಿವಾನಮಲ್ ಸ್ವಾಗತಿಸಿದರು. ಕಾಲೇಜಿನ ಬೆಳವಣಿಗೆ ಕುರಿತು ಡಾ.ಮಹಾಂತೇಶ ಬಿರಡಿ ಪ್ರಾಸ್ತಾವಿಕ ಮಾತನಾಡಿ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳು ಪಾಲಿಸಬೇಕಾದ ನಿಯಮಗಳನ್ನು ತಿಳಿಸಿದರು. ಡಾ.ಸಂಜೀವ ಕೊಳಗಿ, ಡಾ.ಸುರೇಖಾರಾಣಿ ಮತ್ತು ಡಾ.ನೀಲಾ ಮನ್ನಂಗಿ ವಿದ್ಯಾರ್ಥಿಗಳಿಗೆ ಪ್ರಥಮ ವರ್ಷದ ವಿಭಾಗಗಳನ್ನು ಪರಿಚಯಿಸಿದರು.

ಡಾ.ಕಿರಣ್ ನಾಡಗೌಡ ನಿರೂಪಿಸಿದರು. ಡಾ.ಶ್ರದ್ಧಾ ರಂಗದಳ ವಂದಿಸಿದರು. ಪಾಲಕರ ಪರವಾಗಿ ಡಾ.ಮಹಾಂತೇಶ ವಾಲಿ ಮತ್ತು ಭಾಗ್ಯಶ್ರೀ ಕಟ್ಟಿ ಕಾಲೇಜಿನ ಕುರಿತು ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು. ಸಮಾರಂಭದಲ್ಲಿ ಮಹಾವಿದ್ಯಾಲಯದ ಬೋಧಕ ಸಿಬ್ಬಂದಿ, ಬೋಧಕೇತರ ಸಿಬ್ಬಂದಿ, ಪ್ರಥಮ ವರ್ಷದ ವಿದ್ಯಾರ್ಥಿಗಳು ಮತ್ತು ಪಾಲಕರು ಪಾಲ್ಗೊಂಡಿದ್ದರು.

## ಕನಕದಾಸ, ಓಬವ್ವ ಜಯಂತಿ ಅರ್ಥಪೂರ್ಣ ಆಚರಣೆಗೆ ನಿರ್ಧಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.30–ದಾಸಶ್ರೇಷ್ಠ ಕನಕದಾಸರು ಹಾಗೂ ವೀರ ವನಿತೆ ಓಬವ್ವನ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ನಿರ್ದರಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಹೇಳಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ನಡೆದ ಕನಕದಾಸ ಜಯಂತಿ ಹಾಗೂ ವೀರ ವನಿತೆ ಓಬವ್ವ ಜಯಂತಿ ಆಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನವೆಂಬರ್ 8 ರಂದು ಕನಕದಾಸ ಜಯಂತಿ ಹಾಗೂ ನವೆಂಬರ 11 ರಂದು ಓಬವ್ವ ಜಯಂತಿಯನ್ನು ಜಿಲ್ಲಾಡಾಳಿತ, ಜಿಲ್ಲಾ ಪಂಚಾಯತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗುತ್ತಿದೆ ಎಂದರು. ದಾಸಶ್ರೇಷ್ಠ ಕನಕದಾಸರ ಜಯಂತಿಯನ್ನು ನವನಗರದ ಕಲಾಭವನದಲ್ಲಿ ಆಯೋಜಿಸಲಾಗುವುದು ಹಾಗೂ ವೀರ ವನಿತೆ ಓಬವ್ವನ ಜಯಂತಿಯನ್ನು ನಗರದ ಡಾ.ಅಂಬೇಡ್ಕರ ಭವನದಲ್ಲಿ ಬೆಳಿಗ್ಗೆ 11 ಗಂಟೆಗೆ ವೇದಿಕೆ ಕಾರ್ಯಕ್ರಮದೊಂದಿಗೆ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.

ಜಿಲ್ಲಾಡಳಿತ ಭವನದ ಆವರಣದಿಂದ ಬೆಳಿಗ್ಗೆ 10 ಗಂಟೆಗೆ ವಿವಿಧ ರೀತಿಯ ಕಲಾತಂಡಗಳ ಜೊತೆ ಪೂರ್ಣ ಕುಂಭದೊಂದಿಗೆ ಮೆರವಣಿಗೆಯನ್ನು ಕಲಾಭವನದವರೆಗೆ ಕನಕದಾಸ ಜಯಂತಿಯಂದು ಹಾಗೂ ಡಾ. ಅಂಬೇಡ್ಕರ ಭವನದವರೆಗೆ ಓಬವ್ವ ಜಯಂತಿಯಂದು ನಡೆಸಲಾಗುವುದು. ವೇದಿಕೆ ಕಾರ್ಯಕ್ರಮದಲ್ಲಿ ಸಂಗೀತಗಾರರಿಂದ ಸಂಗೀತ ಹಾಗೂ ಸಂಪನ್ಮೂಲ ವ್ಯಕ್ತಿಯಿಂದ ಉಪನ್ಯಾಸ ಮಾಡಿಸಲಾಗುವುದು ಎಂದರು.

ಎರಡೂ ಜಯಂತಿ ಸಂದರ್ಭದಲ್ಲಿ ನಿಯಮಾನುಸಾರ ಆಹ್ವಾನ ಪತ್ರಿಕೆ ಮುದ್ರಿಸಿ, ಶಿಸ್ಟಾಚಾರದಂತೆ ಗಣ್ಯ ಮಾನ್ಯರನ್ನು ಆಹ್ವಾನಿಸಲಾಗುವುದು. ಕನಕದಾಸ ಜಯಂತಿಯಂದು ಕನಕದಾಸರ ಸಾಹಿತ್ಯ ಸಂಶೋಧನೆ, ಕೀರ್ತನೆ ಕುರಿತಂತೆ ಗಣನೀಯ ಸೇವೆ ಸಲ್ಲಿಸಿದ ಸಾಧಕರನ್ನು ಗುರುತಿಸಿ ಸಾಧನೆ ಮಾಡಿದ ಮಹಾನಿಯನಿಯರಿಗೆ ಕನಕ ಸಿರಿ ಪ್ರಶಸ್ತಿ ಹಾಗೂ ನಗದು ಪುರಸ್ಕಾರ ನೀಡಿ ಗೌರವಿಸಲಾಗುವುದು ಎಂದು ತೇಲಿ ಹೇಳಿದರು. ಸಭೆಯಲ್ಲಿ ಸಮುದಾಯ ಮುಖಂಡರಾದ ಡಿ.ಬಿ.ಸಿದ್ದಾಪೂರ, ಧರ್ಮಣ್ಣ ಸುನಗದ, ಸುವರ್ಣಾ ನಾಗರಾಳ, ಶೇಖರಪ್ಪ ಚಹಾಟಿ ವಿವೇಕಾನಂದ ಗರಸಂಗಿ, ಬಸವರಾಜ ಚಲವಾದಿ, ಹೊಸಮನಿ. ವಾಯ್ ಎನ್ ಚಲವಾದಿ, ಅಶೋಕ ನಾರಾಯಣಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ ಭೋವಿ, ವಾರ್ತಾಧಿಕಾರಿ ಕಸ್ತೂರಿ ಪಾಟೀಲ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಪಂಕಜಾ, ಗ್ರೇಡ್ –2 ತಹಶಿಲ್ದಾರ ಮಲ್ಲನಗೌಡ ಬಿರಾದಾರ ಸೇರಿದಂತೆ ಇತರರು ಇದ್ದರು.

## ಮಟಕಾ:ಓರ್ವನ ಬಂಧನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.30–ನಗರದ ಸಾತ್ ಗುಂಬಜ್ ಹತ್ತಿರದ ಶಾಲೆ ಬಳಿಯ ಸಾರ್ವಜನಿಕ ರಸ್ತೆಯಲ್ಲಿ ಮಟಕಾ ನಂಬರ್ ಬರೆದುಕೊಳ್ಳಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸಿಸಿಬಿ ಘಟಕದ ಪಿಐ ದಿಲೀಪಕುಮಾರ್ ಬಿ.ಸಾಗರ್, ಸಿಬ್ಬಂದಿಗಳಾದ ಅಶೋಕ ಕಟಕೆ, ಶಿವಕುಮಾರ, ಯಲ್ಲಪ್ಪ, ನಾಗರಾಜ, ಸುನೀಲಕುಮಾರ ಅವರು ದಾಳಿ ನಡೆಸಿ ಮಕ್ತಂಪುರದ ಮಹ್ಮದ್ ರಿಜ್ವಾನ್ (26) ಎಂಬಾತನನ್ನು ಬಂಧಿಸಿ 3,100 ರೂ.ನಗದು, ಮಟಕಾ ಚೀಟಿ ಜಪ್ತಿ ಮಾಡಿದ್ದಾರೆ.

ಚೌಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಹೊಯ್ಸಳ, ಚೆನ್ನಮ್ಮ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.30–ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ 2025–26ನೇ ಸಾಲಿನ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯಡಿ ನಾವಿನ್ಯತೆ, ತಾರ್ಕಿಕ ಸಾಧನೆ, ಕ್ರೀಡೆ ಹಾಗೂ ಕಲೆ–ಸಾಂಸ್ಕೃತಿಕ–ಸಂಗೀತ ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆ ಮಾಡಿದ ಮಕ್ಕಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪ್ರತಿ ವಿಭಾಗದಲ್ಲಿ ಇಬ್ಬರು ಮಕ್ಕಳಂತೆ ಒಟ್ಟು 8 ಮಂದಿಯನ್ನು ಜಿಲ್ಲಾ ಮಟ್ಟದಲ್ಲಿ ಆಯ್ಕೆ ಮಾಡಲಾಗುತ್ತದೆ. 5 ರಿಂದ 18 ವರ್ಷದೊಳಗಿನ ಮಕ್ಕಳು ಮಾತ್ರ ಅರ್ಹರು. ವಯೋಮಿತಿಯ ದೃಢೀಕರಣ ಪತ್ರ, ಪ್ರಕಟಣೆಗಳ ಪ್ರತಿಗಳು ಹಾಗೂ ಭಾಗವಹಿಸಿರುವ ಸ್ಪರ್ಧೆಗಳ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು.

ಅರ್ಜಿದಾರರು ಕರ್ನಾಟಕ ರಾಜ್ಯದ ನಿವಾಸಿಗಳಾಗಿರಬೇಕು. ಹಿಂದಿನ ವರ್ಷಗಳಲ್ಲಿ ಈ ಪ್ರಶಸ್ತಿ ಪಡೆದವರು ಪುನಃ ಅರ್ಜಿ ಸಲ್ಲಿಸಲು ಅರ್ಹರಲ್ಲ. ಪ್ರತಿಯೊಬ್ಬ ಪ್ರಶಸ್ತಿಗಾರರಿಗೆ ರೂ.10,000 ನಗದು ಬಹುಮಾನ ಮತ್ತು ಪ್ರಮಾಣಪತ್ರ ನೀಡಲಾಗುತ್ತದೆ.

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ನವೆಂಬರ್ 10. ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಆಡಳಿತ ಭವನ, ಕೊಠಡಿ ಸಂಖ್ಯೆ-209, ನವನಗರ, ಬಾಗಲಕೋಟೆ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ವಿದ್ಯಾರ್ಥಿಗಳು ರ್‍ಯಾಗಿಂಗ್ ಪಿಡುಗಿನಿಂದ ಹೊರಬರಬೇಕು

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.30–ದೇಶದಲ್ಲಿ ಯುವಸಮೂಹ ವ್ಯಾಪಕವಾಗಿ ರ್‍ಯಾಗಿಂಗ್ ಸಮಸ್ಯೆಯನ್ನು ಎದುರಿಸುತ್ತಿದೆ. ರ್‍ಯಾಗಿಂಗ್ ವ್ಯಸನ ವಿದ್ಯಾರ್ಥಿಗಳ ಭವಿಷ್ಯಕ್ಕೆ ಮಾರಕವಾಗುತ್ತಿದೆ. ಈ ದಿಸೆಯಲ್ಲಿ ವಿದ್ಯಾರ್ಥಿಗಳು ರ್‍ಯಾಗಿಂಗ್ ಪಿಡುಗಿನಿಂದ ಹೊರಬರುವುದು ತುರ್ತು ಅಗತ್ಯವಾಗಿದೆ ಎಂದು ಬಿ.ವಿ.ವಿ ಸಂಘದ ವೈದ್ಯಕೀಯ ಕಾಲೇಜುಗಳ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಎಮ್.ಸಜ್ಜನ ಹೇಳಿದರು.



ಬಿ.ವಿ.ವಿ ಸಂಘದ ಪಿ.ಎಮ್.ಎನ್.ಎಮ್ ದಂತ ವೈದ್ಯಕೀಯ ಮಹಾವಿದ್ಯಾಲಯದಲ್ಲಿ 2025–26 ನೇ ಸಾಲಿನ ಬಿ.ಡಿ.ಎಸ್ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಮತ್ತು ಆ್ಯಂಟಿ–ರ್‍ಯಾಗಿಂಗ್ ಅಭಿಯಾನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ದಂತಚಿಕಿತ್ಸೆ ಕುರಿತು ಇಂದು ಸಾರ್ವಜನಿಕರಲ್ಲಿ ಹೆಚ್ಚಿನ ಅರಿವು ಮೂಡಿದೆ. ದಂತವೈದ್ಯರಾಗಿ ಭವಿಷ್ಯದಲ್ಲಿ ಸಾರ್ವಜನಿಕರ ಆರೋಗ್ಯ ಸುಧಾರಣೆಗೆ ಮಹತ್ವದ ಕೊಡುಗೆ ನೀಡಿ. ದಂತವೈದ್ಯಕೀಯ ವೃತ್ತಿ ಹೆಚ್ಚು ತಾಳ್ಮೆ ಮತ್ತು ಪರಿಶ್ರಮವನ್ನು ಬಯಸುತ್ತದೆ. ಬಿ.ವಿ.ವಿ ಸಂಘದ ದಂತ ಮಹಾವಿದ್ಯಾಲಯ ರಾಜ್ಯದ ಪ್ರತಿಷ್ಠಿತ ಡೆಂಟಲ್ ಕಾಲೇಜು ಎನ್ನುವ ಗೌರವಕ್ಕೆ ಪಾತ್ರವಾಗಿದೆ. ಪ್ರವೇಶ ಪಡೆದ ವಿದ್ಯಾರ್ಥಿಗಳಲ್ಲಿ 70 ಕ್ಕಿಂತ ಹೆಚ್ಚು ಮಹಿಳಾ ವಿದ್ಯಾರ್ಥಿಗಳಿರುವುದು ಇದು ಬಿ.ವಿ.ವಿ ಸಂಘದಲ್ಲಿ ಮಹಿಳಾ ಶಿಕ್ಷಣಕ್ಕೆ ನೀಡುತ್ತಿರುವ ಆದ್ಯತೆಗೆ ದೃಷ್ಟಾಂತವಾಗಿದೆ ಎಂದರು.

ಹಾಸ್ಟೆಲ್ ಕಮೀಟಿ ಕಾರ್ಯಾಧ್ಯಕ್ಷ ಕುಮಾರಸ್ವಾಮಿ ಹಿರೇಮಠ ಮಾತನಾಡಿ, ವಿದ್ಯಾರ್ಥಿಗಳಿಗೆ ಕಾಲೇಜಿನಲ್ಲಿ ಅತ್ಯುತ್ತಮ ವಸತಿ ಸೌಲಭ್ಯ ಒದಗಿಸಲಾಗಿದೆ ಮತ್ತು ದೈಹಿಕ ಚಟುವಟಿಕೆಗಳಿಗೆ ಅಗತ್ಯವಾದ ಕ್ರೀಡಾ ಸೌಲಭ್ಯಗಳು ಕಾಲೇಜಿನ ಆವರಣದಲ್ಲಿ ಲಭ್ಯವಿವೆ. ವಿದ್ಯಾರ್ಥಿಗಳು ಈ ಎಲ್ಲ ಸೌಲಭ್ಯಗಳ ಪ್ರಯೋಜನಪಡೆದು ಶೈಕ್ಷಣಿಕವಾಗಿ ಯಶಸ್ಸು ಹೊಂದಿರಿ ಎಂದರು.

ಪ್ರಾಚಾರ್ಯ ಡಾ.ಶ್ರೀನಿವಾಸ ವನಕಿ ಅತಿಥಿಗಳನ್ನು ಮತ್ತು ವಿದ್ಯಾರ್ಥಿಗಳನ್ನು ಸ್ವಾಗತಿಸಿ ಕಾಲೇಜಿನ ಬೆಳವಣಿಗೆ ಕುರಿತು ಪ್ರಾಸ್ತಾವಿಕ ಮಾತನಾಡಿ, ಆ್ಯಂಟಿ–ರ್‍ಯಾಗಿಂಗ್ ಕುರಿತು ಉಪನ್ಯಾಸ ನೀಡಿದರು. ಡಾ.ಸಂಜೀವ ಕೊಳಗಿ, ಡಾ.ಪ್ರವೀಣ, ಡಾ.ಮಹಾಂತೇಶ ಮತ್ತು ಡಾ.ಮಹಾದೇವಿ ಅವರಿಂದ ವಿದ್ಯಾರ್ಥಿಗಳಿಗೆ ಪ್ರಥಮ ವರ್ಷದ ವಿಭಾಗಗಳ ಪರಿಚಯ ಮಾಡಿಕೊಡಲಾಯಿತು. ಡಾ.ಹಿರಣ್ಮಯಿ ಮತ್ತು ಡಾ.ಭೀಮಪ್ಪ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳು ಪಾಲಿಸಬೇಕಾದ ನಿಯಮಗಳನ್ನು ತಿಳಿಸಿದರು. ಡಾ.ನವೀನ ಎಸ್ ವಿದ್ಯಾರ್ಥಿಗಳಿಗೆ ಶಪಥ ಬೋಧಿಸಿದರು. ಪಾಲಕರು ಕಾಲೇಜಿನ ಕುರಿತು ತಮ್ಮ ಅನಿಸಿಕೆಗಳನ್ನು ಹೇಳಿದರು.

ಡಾ.ವಿಜಯಲಕ್ಷ್ಮಿ ನಿರೂಪಿಸಿದರು. ಡಾ.ನಿವೇದಿತಾ ವಂದಿಸಿದರು. ಸಮಾರಂಭದಲ್ಲಿ ಆಸ್ಪತ್ರೆಯ ಆಡಳಿತಾಧಿಕಾರಿ ಡಾ.ಕಾಶಿನಾಥ ಅರಬ್ಬಿ, ಮಹಾವಿದ್ಯಾಲಯದ ಎಲ್ಲ ವಿಭಾಗಳ ಮುಖ್ಯಸ್ಥರು, ವೈದ್ಯ ಸಿಬ್ಬಂದಿ, ಬೋಧಕೇತರ ಸಿಬ್ಬಂದಿ, ಪ್ರಥಮ ವರ್ಷದ ವಿದ್ಯಾರ್ಥಿಗಳು ಮತ್ತು ಪಾಲಕರು ಪಾಲ್ಗೊಂಡಿದ್ದರು.

